ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 59
16–8–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 59

# ಅಕ್ರಮ ಅದಿರು ಸಾಗಣೆ ಪ್ರಕರಣ ಇತ್ಯರ್ಥಕ್ಕೆ ವಿಶೇಷ ನ್ಯಾಯಾಲಯ

**ದಾವಣಗೆರೆ:** ಅಕ್ರಮ ಅದಿರು ಸಾಗಣೆ ಪ್ರಕರಣಗಳ ತ್ವರಿತ ಇತ್ಯರ್ಥಕ್ಕಾಗಿ ವಿಶೇಷ ನ್ಯಾಯಾಲಯ ಸ್ಥಾಪನೆಗೆ ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ತೋಟಗಾರಿಕೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಸಚಿವ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹೇಳಿದ್ದಾರೆ.

ನಗರದಲ್ಲಿ 79ನೇ ಸ್ವಾತಂತ್ರೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನಡೆಸಿದ ನಂತರ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಅಕ್ರಮ ಅದಿರು ಸಾಗಣೆ ಮಾಡಿದ ಯಾರನ್ನೂ ರಕ್ಷಿಸುವ ಪ್ರಶ್ನೆ ಇಲ್ಲ. ಇಂಥ ಪ್ರಕರಣಗಳಲ್ಲಿ ರಾಜ್ಯದ ಬೊಕ್ಕಸಕ್ಕೆ ಉಂಟಾಗಿರುವ ನಷ್ಟವನ್ನು ತಪ್ಪತಸ್ಥರಿಂದ ವಸೂಲಿ ಮಾಡಿ ಖಜಾನೆಗೆ ತುಂಬಿಸಲಾಗುವುದು. ಇದಕ್ಕಾಗಿಯೇ ವಿಶೇಷ ನ್ಯಾಯಾಲಯ ರಚಿಸಲಾಗುತ್ತಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ರಾಜ್ಯ ಸರ್ಕಾರ ಸಂಪುಟ ಉಪ ಸಮಿತಿ ಮತ್ತೊಮ್ಮೆ ರಚನೆ ಮಾಡಲಾಗಿದೆ. ಇದರ ಅಧ್ಯಕ್ಷರಾಗಿ ಎಚ್.ಕೆ. ಪಾಟೀಲ್ ಕಾರ್ಯನಿರ್ವಹಿಸುವರು. ಉಪ ಸಮಿತಿ ನೀಡುವ ವರದಿ ಆಧರಿಸಿ ವಿಶೇಷ ನ್ಯಾಯಾಲಯದ ಸ್ವರೂಪ ನಿರ್ಧರಿಸಲಾಗುವುದು. ಪ್ರಕರಣಗಳನ್ನು ಕಾನೂನಿನ್ವಯ ತನಿಖೆಗೆ ಮತ್ತೊಮ್ಮೆ ಒಳಪಡಿಸಿ ಬೊಕ್ಕಸಕ್ಕೆ ಅಗತ್ಯ ರಾಜಧನ ತುಂಬಲಾಗುವುದು ಎಂದು ಮಾಧ್ಯಮಗಳಿಗೆ ಮಾಹಿತಿ ನೀಡಿದರು.

ಕಳೆದ ಜೂನ್ 18ರಂದು ಕಾಂಗ್ರೆಸ್‌ನ ಹಿರಿಯ ನಾಯಕ ಎಚ್.ಕೆ. ಪಾಟೀಲ್, ಅಕ್ರಮ ಅದಿರು ಸಾಗಣೆ ಪ್ರಕರಣಗಳ ಬಗ್ಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. ಈ ಪತ್ರ ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಚರ್ಚೆ ಹುಟ್ಟು ಹಾಕಿತ್ತು. ವಿಚಾರಕ್ಕೆ ಸಂಬಂಧಿಸಿದಂತೆ ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಸಹ ಗಣಿಗಾರಿಕೆ ಸಚಿವರಿಗೆ ಅಧಿವೇಶನದಲ್ಲಿ ಪ್ರಶ್ನೆ ಕೇಳಿದ್ದರು.



ರಾಜ್ಯದಲ್ಲಿ 2006 ರಿಂದ 2010ರ ವರಗೆ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಹಾಗೂ ಅದಿರು ಸಾಗಣೆಗೆ ಸಂಬಂಧಿಸಿದಂತೆ 2013ರಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಸಚಿವ ಸಂಪುಟದ ಉಪ ಸಮಿತಿ ರಚನೆ ಮಾಡಿತ್ತು. ಇದಕ್ಕೆ ಆಗ ಎಚ್.ಕೆ. ಪಾಟೀಲ್ ಅಧ್ಯಕ್ಷರಾಗಿದ್ದರು. ಇದರ ಜೊತೆ ಲೋಕಾಯುಕ್ತದ ವಿಶೇಷ ತನಿಖಾ ತಂಡ ಸಹ ರಚನೆ ಮಾಡಲಾಗಿತ್ತು. ಅಕ್ರಮ ಗಣಿಗಾರಿಕೆ ವಿರುದ್ದ ಸಿದ್ದರಾಮಯ್ಯ ಆಗ ಬೆಂಗಳೂರಿನಿಂದ ಬಳ್ಳಾರಿ ತನಕ ಪಾದಯಾತ್ರೆ ಮಾಡಿ ಸಂಚಲನ ಮೂಡಿಸಿದ್ದನ್ನು ಸ್ಮರಿಸಿಕೊಳ್ಳಬಹುದು.

ಅಂದಿನ ಸಂಪುಟ ಉಪಸಮಿತಿ ಚಿತ್ರದುರ್ಗ, ಬಳ್ಳಾರಿ, ತುಮಕೂರಿನಲ್ಲಿ 1.50 ಲಕ್ಷ ಕೋಟಿ ರೂ. ಮೌಲ್ಯದ ಅದಿರು ಸಾಗಣೆ ಮಾಡಿರುವುದನ್ನು ಪತ್ತೆ ಮಾಡಿತ್ತು. ಆದರೆ ಅಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನಿರೀಕ್ಷಿತ ಮಟ್ಟದಲ್ಲಿ ತನಿಖೆ ಚುರುಕುಗೊಂಡಿರಲಿಲ್ಲ. ನಂತರ ಅಧಿಕಾರಕ್ಕೆ ಬಂದ ಸಮ್ಮಿಶ್ರ ಸರ್ಕಾರ, ಆನಂತರದ ಬಿಜೆಪಿ ಸರ್ಕಾರ ಕೂಡ ಈ ಬಗ್ಗೆ ಹೆಚ್ಚು ಆಸಕ್ತಿ ವಹಿಸದೆ ನಿರ್ಲಕ್ಷ್ಯ ಮಾಡಿದ್ದವು.

ಮತ್ತೆ 2023ರಲಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರ ಬಂದಿದ್ದು, ಅಕ್ರಮ ಅದಿರು ಪ್ರಕರಣಗಳ ಬಗ್ಗೆ ಕ್ರಮಕೈಗೊಳ್ಳದ ಬಗ್ಗೆ ಎಚ್.ಕೆ. ಪಾಟೀಲ್ ಪತ್ರ ಬರೆದಿದ್ದರು. ಇದರಿಂದ ಎಚ್ಚೆತ್ತುಕೊಂಡ ಸರ್ಕಾರ ಮತ್ತೊಮ್ಮೆ ಎಚ್.ಕೆ. ಪಾಟೀಲ್ ನೇತೃತ್ವದಲ್ಲಿಯೇ ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಿದೆ.

### 1555.94 ಕೋಟಿ ರೂ. ನಷ್ಟ

2006ರಿಂದ 2010ರಲ್ಲಿ ಅಕ್ರಮ ಗಣಿಗಾರಿಕೆ ಹಾಗೂ ಅದಿರು ಸಾಗಣೆಯಿಂದ 104 ಪ್ರಕರಣಗಳಲ್ಲಿ 1555.94 ಕೋಟಿ ರೂ. ನಷ್ಟವಾಗಿದ್ದು, ಈ ವರಗೆ 12.11 ಕೋಟಿ ರೂ. ಮಾತ್ರ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ರೈಲ್ವೆ ಶೆಡ್ ಮೂಲಕ 1.45 ಲಕ್ಷ ಕೋಟಿ ರೂ. ಮೌಲ್ಯದ 35 ಕೋಟಿ ಟನ್ ಅದಿರು ಅಕ್ರಮ ಸಾಗಾಣೆ ಕುರಿತು ಸಂಪುಟ ಸಮಿತಿ ನೀಡಿದ್ದ ವರದಿ ಮೂಲೆ ಗುಂಪಾಗಿತ್ತು. ಕಳೆದ ಜೂನ್ 18ರಂದು ಎಚ್.ಕೆ. ಪಾಟೀಲ್ 7 ಪುಟಗಳ ಪತ್ರ ಮುಖ್ಯಮಂತ್ರಿಗಳಿಗೆ ಬರೆದಿದ್ದರು. ಈಗ ಮತ್ತೊಮ್ಮೆ ಸರ್ಕಾರ ಎಚ್.ಕೆ. ಪಾಟೀಲ್ ನೇತೃತ್ವದಲ್ಲಿ ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಿದೆ.

### ಪುಣ್ಯದ ಮೇಲೆ ಪಾಪದ ವಿಜಯ

ಅಕ್ರಮವಾಗಿ ಅದಿರನ್ನು ಸಾಗಾಣಿಕೆ ಮಾಡಿರುವವರು, ದೊಡ್ಡ ಪ್ರಮಾಣದ ಲೂಟಿ ಮಾಡುವ ಮೂಲಕ ರಾಜ್ಯ ವಿದ್ರೋಹ ಮಾಡಿದ್ದಾರೆ. ಈ ಪ್ರಕರಣಗಳು ತನಿಖೆಗೆ ಒಳಪಡಬೇಕಿತ್ತು. ಅಪರಾಧಿಗಳು ಶಿಕ್ಷೆಗೆ ಗುರಿಯಾಗಬೇಕಿತ್ತು. ಆದರೆ ಆಡಳಿತ ಅನಾಸಕ್ತಿ, ಅಧಿಕಾರಶಾಹಿಯ ರಾಜ್ಯದ್ರೋಹಿ ಮನೋಭಾವದಿಂದ ಈ ಪ್ರಕರಣಗಳ ತನಿಖೆ ಆಗಲಿಲ್ಲ. ವಿಚಾರಣೆಗೂ ಗುರಿಯಾಗಲಿಲ್ಲ. ತನಿಖೆಗೆ ವಹಿಸಿದ್ದ ಕೆಲವೇ ಕೆಲವು ಪ್ರಕರಣಗಳಲ್ಲಿ ಎಸ್ಐಟಿ ಯಾವುದೇ ಪ್ರಗತಿ ಸಾಧಿಸಿಲ್ಲ. ಈ ಅಕ್ರಮಗಳು ಸರ್ಕಾರಿ ಕಡತಗಳಲ್ಲಿ ಅಧಿಕಾರಿಗಳ ವಿಳಂಬ ದ್ರೋಹಗಳಿಂದ ಹೂತು ಹೋಗುತ್ತಿವೆ. ಪುಣ್ಯದ ಮೇಲೆ ಪಾಪದ ವಿಜಯ ಸಾಧಿಸಿದಂತಾಗಿದೆ.

**–ಎಚ್.ಕೆ. ಪಾಟೀಲ್,**
(ಸಿಎಂಗೆ ಬರೆದ ಪತ್ರದ ಸಾರಾಂಶ)

## ಸಿಲಿಂಡರ್ ಸ್ಫೋಟ: ಮೃತಪಟ್ಟ ಬಾಲಕನ ಕುಟುಂಬಕ್ಕೆ ರೂ. 5 ಲಕ್ಷ ಪರಿಹಾರ ಘೋಷಿಸಿದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಶುಕ್ರವಾರ ಇಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟದಲ್ಲಿ 10 ವರ್ಷದ ಬಾಲಕ ಸಾವಿಗೀಡಾಗಿದ್ದು, ಘಟನೆಯಲ್ಲಿ ಕನಿಷ್ಠ ಒಂಬತ್ತು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಫೋಟದ ಸ್ಥಳ ಮತ್ತು ಆಸ್ಪತ್ರೆಗಳಿಗೆ ಭೇಟಿ ನೀಡಿದ ನಂತರ ಮೃತರ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ನೀಡುವುದಾಗಿ ಘೋಷಿಸಿದರು ಮತ್ತು ಗಾಯಾಳುಗಳ ವೈದ್ಯಕೀಯ ವೆಚ್ಚವನ್ನು ಸರ್ಕಾರ ಭರಿಸಲಿದೆ ಎಂದು ತಿಳಿಸಿದರು.

ಸಂತ್ರಸ್ತ ಬಾಲಕನನ್ನು ಮುಬಾರಕ್ ಎಂದು ಗುರುತಿಸಲಾಗಿದೆ.

ಬೆಂಗಳೂರಿನ ಮಧ್ಯ ಭಾಗದ ವಿಲ್ಸನ್ ಗಾರ್ಡನ್‌ನ ಚಿನ್ನಯ್ಯನಪಾಳ್ಯದಲ್ಲಿ ಈ ಘಟನೆ ನಡೆದಿದ್ದು, ಆ ಪ್ರದೇಶದಲ್ಲಿ ಮನೆಗಳು ಒಂದಕ್ಕೊಂದು ಹೊಂದಿಕೊಂಡಿದ್ದು, ಹೆಚ್ಚಿನ ಜನರು ವಾಸಿಸುತ್ತಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿದ ನಂತರ, ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಸಿಲಿಂಡರ್ ಸ್ಫೋಟವೇ ಘಟನೆಗೆ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಯಾವುದೇ ವಾಸನೆ ಇಲ್ಲ. ಆದರೆ, ಪೊಲೀಸರು ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವರದಿಗಳ ಪ್ರಕಾರ, ಸಿಲಿಂಡರ್ ಸ್ಫೋಟ ಸಂಭವಿಸಿರಬಹುದು. ಒಂಬತ್ತು ಜನರು ಗಾಯಗೊಂಡಿದ್ದಾರೆ ಮತ್ತು ಮುಬಾರಕ್ ಅವರನ್ನು ಸಂಜಯ್ ಗಾಂಧಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ ಎಂದು ಘೋಷಿಸಲಾಗಿದೆ ಎಂದು ಹೇಳಿದರು.

ಸ್ಫೋಟದಲ್ಲಿ 12 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಈ ಹಿಂದೆ ಹೇಳಿದ್ದರು.

ಸ್ಫೋಟ ಸಂಭವಿಸಿದ ಮನೆ ಕಸ್ತೂರಮ್ಮ ಎಂಬುವವರಿಗೆ ಸೇರಿದ್ದು, ಅವರು ಕೂಡ ಸುಟ್ಟ ಗಾಯಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. 13 ಮನೆಗಳಿಗೆ ಹಾನಿಗೊಳಗಾಗಿವೆ. ಈ ಮನೆಗಳನ್ನು ದುರಸ್ತಿ ಮಾಡುವಂತೆ ಬಿಬಿಎಂಪಿ ಆಯುಕ್ತರಿಗೆ ಸೂಚಿಸಿದ್ದೇನೆ. ಮನೆ ಸಂಪೂರ್ಣವಾಗಿ ಕುಸಿದಿದ್ದರೆ, ನಾವು ಅವುಗಳನ್ನು ನಿರ್ಮಿಸುತ್ತೇವೆ ಎಂದು ಸಿಎಂ ಹೇಳಿದರು.

## ಶ್ರೀ ಕ್ಷೇತ್ರ ವರವಿ ಶ್ರೀ ಮೌನೇಶ್ವರ ಜಾತ್ರಾ ಮಹೋತ್ಸವ

**ದಾವಣಗೆರೆ:** ಶ್ರೀ ಕ್ಷೇತ್ರ ವರವಿ ಶ್ರೀ ಮೌನೇಶ್ವರ ಜಾತ್ರಾ ಮಹೋತ್ಸವ–2025ವವು ಆ.18 ರಿಂದ 22ರವರೆಗೆ ನಡೆಯಲಿದೆ.

ವರವಿ ಕ್ಷೇತ್ರದ ಶ್ರೀ ಮೌನೇಶ್ವರ ದೇವಸ್ಥಾನದ ಶ್ರೀ ಮೌನೇಶ್ವರ ಸ್ವಾಮೀಜಿ, ಸಿಂದಗಿಯ ಶ್ರೀ ಮೂರುಜಾವಧೀಶ್ವರ ಮಠದ ಶ್ರೀ ರಾಮಚಂದ್ರ ಸ್ವಾಮೀಜಿ, ಶಹಪೂರದ ಏಕದಂಡಿಗಿಮಠ ಶ್ರೀ ವಿಶ್ವಕರ್ಮ ಶ್ರೀ ಕಾಳಹಸ್ತೇಂದ್ರ ಸ್ವಾಮೀಜಿ, ಶಾಡಲಗೇರಿ ಶ್ರೀ ಸೂರ್ಯನಾರಾಯಣ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ಐದು ದಿನಗಳ ಕಾಲ ನಡೆಯುವ ಜಾತ್ರಾಮಹೋತ್ಸವದಲ್ಲಿ ಸಾನಿಧ್ಯ ವಹಿಸಲಿದ್ದಾರೆ.

ಆ.18ರಂದು ಮಧ್ಯಾಹ್ನ 12–15ಕ್ಕೆ ನಡೆಯುವ ಜಾತ್ರಾ ಮಹೋತ್ಸವದ ಉದ್ಘಾಟನಾ ಸಮಾರಂಭ ಜರುಗಲಿದ್ದು, ಸಚಿವರು, ಶಾಸಕರು, ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಸಂಜೆ 5:15 ಗಂಟೆಗೆ ರಥೋತ್ಸವ ನಡೆಯಲಿದೆ. ಆ.19 ರಂದು ಬೆಳಿಗ್ಗೆ 11:30ಕ್ಕೆ ಧಾರ್ಮಿಕ ಸಭೆ, ಆ.20 ಬೆಳಿಗ್ಗೆ 9:15 ಸಾಮೂಹಿಕ ಉಪನಯನ, ಆ.21 ಪಾಲಕಿ ಅಲಾವಿ ಗುಡ್ಡ, ಪುರವಂತರ ಸೇವೆ. ಆ.22 ಮಧ್ಯಾಹ್ನ 3 ಗಂಟೆಗೆ ಜಾತ್ರಾಮಹೋತ್ಸವದ ಸಮಾರೋಪ, ದಾನಿಗಳಿಗೆ ಸನ್ಮಾನ ಹಾಗೂ ಪೂಜಾಫಲ ಲೀಲಾವು ನಡೆಯಲಿದ್ದು, ಟ್ರಸ್ಟ್ ಕಮಿಟಿಯ ಅಧ್ಯಕ್ಷ ಮೋಹನ್ ಸಿ. ನರಗುಂದ ಅಧ್ಯಕ್ಷತೆ ವಹಿಸಲಿದ್ದಾರೆ.

### 79 ನೇ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರಿಂದ ರಾಷ್ಟ್ರ ಧ್ವಜಾರೋಹಣ

# ದೇಶದ ಏಕತೆ ಮತ್ತು ವಿಜ್ಞಾನ, ತಂತ್ರಜ್ಞಾನದ ಜೊತೆಗೆ ಅಸಮಾನತೆ, ಪರಿಸರ ಸಂರಕ್ಷಣೆ ಮಾಡಲು ಶ್ರಮಿಸೋಣ

**ದಾವಣಗೆರೆ :** ಸ್ವಾತಂತ್ರ್ಯವು ನಮ್ಮ ಹೊಣೆಗಾರಿಕೆ, ದೇಶದ ಏಕತೆ, ಶಾಂತಿ, ಪ್ರಗತಿ ಜೊತೆಗೆ ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ ಮತ್ತು ಕ್ರೀಡೆ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ವಿಶ್ವದ ಗಮನ ಸೆಳೆಯುತ್ತಿದ್ದೇವೆ. ಆದರೆ, ಭ್ರಷ್ಟಾಚಾರ, ಅಸಮಾನತೆ, ಪರಿಸರ ಮಾಲಿನ್ಯ, ನಿರುದ್ಯೋಗ ಮುಂತಾದ ಸವಾಲುಗಳನ್ನು ನಿವಾರಿಸಲು ಎಲ್ಲರೂ ಒಟ್ಟಾಗಿ ಶ್ರಮಿಸುವುದು ಇಂದಿನ ಅಗತ್ಯವಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾದ 79 ನೇ ಸ್ವಾತಂತ್ರ್ಯೋತ್ಸವದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಪಥ ಸಂಚಲನದಲ್ಲಿ ಗೌರವ ವಂದನೆ ಸ್ವೀಕರಿಸಿ ತಮ್ಮ ಸ್ವಾತಂತ್ರ್ಯೋತ್ಸವ ಸಂದೇಶದಲ್ಲಿ ಮಾತನಾಡಿದರು. ಅನೇಕ ಹೋರಾಟಗಾರರ ತ್ಯಾಗ, ಶೌರ್ಯ ಮತ್ತು ದೃಢಸಂಕಲ್ಪದ ಫಲವಾಗಿ, ನಮ್ಮ ದೇಶವು ಬ್ರಿಟೀಷರ ಆಳ್ವಿಕೆಯಿಂದ ಮುಕ್ತಿಯಾಯಿತು. ಮಹಾತ್ಮ ಗಾಂಧೀಜಿ, ನೇತಾಜಿ ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸರೋಜಿನಿ ನಾಯ್ಡು, ಲಾಲಾ ಲಜಪತ್ ರಾಯ್, ಟಿಪ್ಪು ಸುಲ್ತಾನ್, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಅನೇಕ ಹೋರಾಟಗಾರರ ಅಮರ ತ್ಯಾಗವನ್ನು ನೆನಪಿಸಿಕೊಳ್ಳಬೇಕು.

ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ದಾವಣಗೆರೆಯ



ಹಳ್ಳೂರು ನಾಗಪ್ಪ, ಅಕ್ಕಸಾಲೆ ವಿರೂಪಾಕ್ಷಪ್ಪ, ಬಿದಿರಕುಂದಿ ನಿಂಗಪ್ಪ, ಹಮಾಲಿ ತಿಮ್ಮಣ್ಣ, ಹದಡಿ ನಿಂಗಪ್ಪ, ಮಾಗಾನಹಳ್ಳಿ ಹನುಮಂತಪ್ಪ ಇವರುಗಳು ಅಂದು ಬ್ರಿಟೀಷರ ಗುಂಡಿಗೆ ಪ್ರಾಣಾರ್ಪಣೆ ಮಾಡಿ ಹುತಾತ್ಮರಾಗಿದ್ದನ್ನು ನಾವಿಂದು ನೆನಪಿಸಿಕೊಳ್ಳುತ್ತಾ, ಅವರಿಗೂ ಸಹ ನಾವೆಲ್ಲರೂ ಗೌರವ ನಮನಗಳನ್ನು ಸಲ್ಲಿಸುವ ಜೊತೆಗೆ ನಮ್ಮ ಸಂಸ್ಕೃತಿ, ಭಾಷೆ, ಪರಂಪರೆಗಳನ್ನು ಕಾಪಾಡಿಕೊಂಡು, ನವೀನತೆ ಮತ್ತು ಅಭಿವೃದ್ಧಿಯತ್ತ ಸಾಗೋಣ ಎಂದರು.

ನಮ್ಮ ಸರ್ಕಾರ ಅಧಿಕಾರವಹಿಸಿಕೊಂಡ ನಂತರ ಆರ್ಥಿಕವಾಗಿ ಬಸವಳೆದು ಹೋಗಿದ್ದ ರಾಜ್ಯದ ಜನತೆಗೆ ಆರ್ಥಿಕ ಶಕ್ತಿಯನ್ನು ತುಂಬಬೇಕೆಂಬ ಉದ್ದೇಶದಿಂದ ನುಡಿದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಿದೆ. ಇದಕ್ಕಾಗಿ ರೂ.2346 ಕೋಟಿಯಷ್ಟು ಹಣವನ್ನು ಗ್ಯಾರಂಟಿ ಯೋಜನೆಗಳು ಜಾರಿಯಾದಾಗಿನಿಂದ ಜಿಲ್ಲೆಯ ಜನರಿಗಾಗಿ ಖರ್ಚು ಮಾಡಲಾಗಿದೆ ಎಂದರು.

ಈ ವರ್ಷ ಮುಂಗಾರು ಮಳೆ ಬಹಳ ಆಶಾದಾಯಕವಾಗಿದೆ. ರೈತರಿಗೆ ಬೇಕಾದ ಬಿತ್ತನೆ ಬೀಜ, ರಸಗೊಬ್ಬರ ವಿತರಣೆ ಮಾಡಲಾಗಿದೆ. ಈ ವರ್ಷ ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳ ಮೂಲಕ ಜಿಲ್ಲೆಯ ತೋಟಗಾರಿಕೆ ಅಭಿವೃದ್ದಿಗೆ ರೂ.49.98 ಕೋಟಿ ಅನುದಾನ ನೀಡಲಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ಶೇ 90 ರಷ್ಟು ಸಹಾಯಧನವನ್ನು ಒದಗಿಸುವುದರ ಜೊತೆಗೆ 7 ವರ್ಷಗಳ ಹಿಂದೆ ಹನಿ ನೀರಾವರಿಗೆ ಸಹಾಯಧನ ಪಡೆದಿದ್ದಲ್ಲಿ ಅದೇ ಸರ್ವೆ ನಂಬರ್ ಗೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಮತ್ತು ರಾಜ್ಯದ ಜೇನುತುಪ್ಪಕ್ಕೆ "ಝೇಂಕಾರ" ಹೆಸರಿನ ಬ್ರ್ಯಾಂಡ್ ನೀಡಲಾಗಿದೆ.

ಕಂದಾಯ ಇಲಾಖೆಯಿಂದ ಕಂದಾಯ ಗ್ರಾಮವನ್ನಾಗಿ ಪರಿವರ್ತಿಸಿ 25581 ನಿವಾಸಿಗಳಿಗೆ ಹಕ್ಕುಪತ್ರ ವಿತರಿಸುವ ಸಂಕಲ್ಪ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ 2.11 ಲಕ್ಷ ಕಡತಗಳನ್ನು ಡಿಜಿಟಲೀಕರಣ ಮಾಡಿ 32302 ಪುಟಗಳ ದಾಖಲೆ ವಿತರಿಸಿ ರಾಜ್ಯದಲ್ಲಿಯೇ ದಾವಣಗೆರೆ ಮೊದಲ ಸ್ಥಾನದಲ್ಲಿದೆ.

ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ 100 ಗ್ರಾಮಗಳಲ್ಲಿ 24 ಗಂಟೆ ನೀರು ಪೂರೈಕೆ ಮಾಡಲು ಉದ್ದೇಶಿಸಿ ಈಗಾಗಲೇ 50 ಗ್ರಾಮಗಳಲ್ಲಿ 24*7 ನೀರು ಪೂರೈಸಲಾಗುತ್ತಿದೆ. ಜಿಲ್ಲೆಯಲ್ಲಿ 1771 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದ 407 ಕೇಂದ್ರಗಳಿಗೆ ನಿವೇಶನ ಒದಗಿಸಿ ಮುಂದಿನ ದಿನಗಳಲ್ಲಿ ಬಾಡಿಗೆ ಮುಕ್ತ ಅಂಗನವಾಡಿ ಕೇಂದ್ರಗಳ ಜಿಲ್ಲೆ ಎಂದು ಘೋಷಣೆ ಮಾಡಲಾಗುತ್ತದೆ.

ಶಿಕ್ಷಣ, ಆರೋಗ್ಯ, ಮೂಲಭೂತ ಸೌಕರ್ಯ; ಚಿಗಟೇರಿ ಆಸ್ಪತ್ರೆಯಲ್ಲಿ 400 ಹಾಸಿಗೆಯ ಕಟ್ಟಡ ನಿರ್ಮಿಸಲು ರೂ.260 ಕೋಟಿಗಳನ್ನು ಸರ್ಕಾರದಿಂದ ಮಂಜೂರು ಮಾಡಿಸಿ ಶಂಕುಸ್ಥಾಪನೆ ನೆರವೇರಿಸಲಾಗಿದೆ.

# ಇಂದಿನ ಸ್ಥಿತಿಗತಿಗಳನ್ನು ಅರಿತುಕೊಂಡು ಯುವ ಪೀಳಿಗೆ ಸಾಗಬೇಕಿದೆ: ಮಲ್ಲಿಕಾರ್ಜುನ ಕಬ್ಬೂರು

**ದಾವಣಗೆರೆ:** ನಮ್ಮ ಹಿರಿಯರು, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನದ ಮುಖಾಂತರ ಪಡೆಯಲಾದ ಸ್ವಾತಂತ್ರ್ಯವನ್ನು ನಮ್ಮ ಸ್ವೇಚ್ಛಾಚಾರಕ್ಕೆ ಉಪಯೋಗಿಸದೇ ಅದರ ಮಹತ್ವ ಅರಿತು ಪತ್ರಕರ್ತರಿಗೆ ಇರುವ ಶಕ್ತಿಯಲ್ಲೇ ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಯಾರದ್ದೇ ಒತ್ತಡಕ್ಕೆ ಒಳಗಾಗದೇ ತಮ್ಮ ಹರಿತವಾದ ಲೇಖನಿ ಮೂಲಕ ಬರೆಯುವ ಮೂಲಕ ಸಮಾಜದಲ್ಲಿನ ಭ್ರಷ್ಟಾಚಾರ, ಅಕ್ರಮಗಳಿಗೆ ಕಡಿವಾಣ ಹಾಕಬೇಕೆಂದು ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಬ್ಬೂರು ಕರೆ ನೀಡಿದರು.

ನಗರದ ಕೆ.ಬಿ.ಬಡಾವಣೆಯಲ್ಲಿನ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಕಚೇರಿಯಲ್ಲಿ ಆಯೋಜಿಸಲಾಗಿದ್ದ 79ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ರಾಷ್ಟ್ರ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಮಾತನಾಡಿ, ಹಲವಾರು ವರ್ಷಗಳ ಕಾಲ ಬ್ರಿಟಿಷರ ದಾಸ್ಯದಲ್ಲಿದ್ದ ಭಾರತ ದೇಶವನ್ನು ದಾಸ್ಯದಿಂದ ಮುಕ್ತ ಮಾಡಲು ಹಲವು ಮಹನೀಯರು ಶ್ರಮಿಸಿದರು. ಅವರ ತ್ಯಾಗ, ಬಲಿದಾನದ ಫಲವೇ ಇಂದು ನಾವು ಸ್ವಾತಂತ್ರ್ಯ ಆಗಿದ್ದೇವೆ. ಆದರೆ ಇಂದಿನ ಪರಿಸ್ಥಿತಿಯನ್ನು ಗಮನಿಸಿದರೆ ನಾವು ಯಾವ ಕಾಲದಲ್ಲಿ ಇದ್ದೇವೆ ಎನ್ನುವುದನ್ನು ಅವಲೋಕನ ಮಾಡಿಕೊಳ್ಳಬೇಕಿದೆ. ಅಲ್ಲದೇ ಯುವಪೀಳಿಗೆ ಇಂದಿನ ಸ್ಥಿತಿಗತಿಗಳನ್ನು ಅರಿತು ಮುಂದುವರೆಸಬೇಕು ಎಂದು ಹೇಳಿದರು.



ಧ್ವಜಾರೋಹಣ ನೆರವೇರಿಸಲು ಸಹಕರಿಸಿದ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ್ ಮಾತನಾಡಿ, ದೇಶದಲ್ಲಿ ಹೆಚ್ಚಾಗುತ್ತಿದ್ದ ಸ್ವಾತಂತ್ರ್ಯ ಹೋರಾಟದ ಹಿನ್ನೆಲೆಯನ್ನು ಕಂಡುಕೊಂಡ ಬ್ರಿಟಿಷರು ಭಾರತ ದೇಶವನ್ನು ಸ್ವಾತಂತ್ರ್ಯ ದೇಶವೆಂದು ಘೋಷಣೆ ಮಾಡಿ, 1947ರ ಮಧ್ಯರಾತ್ರಿಯಲ್ಲಿ ದೇಶ ತೊರೆದರು. ಅಂದಿನಿಂದ ಇಂದಿನವರೆಗೂ ನಾವುಗಳು ಸ್ವಾತಂತ್ರ್ಯ ದಿನಾಚರಣೆ ಮಾಡುತ್ತಿದ್ದೇವೆ. ಆದರೆ, ಆ ಸ್ವಾತಂತ್ರ್ಯ ಯಾವ ಮಟ್ಟಿಗೆ ಸಿಕ್ಕಿದೆ ಎನ್ನುವ ಬಗ್ಗೆ ನಾವೆಲ್ಲರೂ ಚಿಂತನೆ ಮಾಡುವ ಮೂಲಕ ನಮಗೆ ಸಿಕ್ಕ ಸ್ವಾತಂತ್ರ್ಯವನ್ನು ಕಾಪಾಡಿಕೊಂಡು ಹೋಗಬೇಕಾಗಿದೆ. ಅದರಲ್ಲೂ ಇಂದಿನ ಯುವ ಪೀಳಿಗೆಯ ನಡವಳಿಕೆ ಗಮನಿಸಿದರೆ ಭಯವಾಗುತ್ತದೆ. ಕಾರಣ ನಮ್ಮ ದೇಶದ ಆಚಾರ, ವಿಚಾರ, ಸಂಸ್ಕೃತಿ, ಸಂಸ್ಕಾರಗಳನ್ನು ಮೈಗೂಡಿಸಿಕೊಂಡು ಸಾಗಬೇಕಿದೆ ಎಂದು ಕಿವಿಮಾತು ಹೇಳಿದರು.

ಹಿರಿಯ ಪತ್ರಕರ್ತ ಡಿ.ಎಂ.ಮಹೇಶ್, ಮಲ್ಲಿಕಾರ್ಜುನ ಕೈದಾಳೆ ಮಾತನಾಡಿದರು. ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಹಿರಿಯ ಸದಸ್ಯ ಆರ್.ಎಸ್.ತಿಪ್ಪೇಸ್ವಾಮಿ, ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ನಾಗರಾಜ್ ಎಸ್.ಬಡದಾಳ್, ಸೋಮಶೇಖರ್, ಮಹಾದೇವ, ಬಿ.ಸಿಕಂದರ್, ಚನ್ನಬಸವ ಶೀಲವಂತ್, ಕರಿಬಸವರಾಜ್, ರಮೇಶ್, ಅಜೇಯ ಇತರರು ಇದ್ದರು.

# ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣ ಹಾಗೂ ಸಮಾನ ಶಿಕ್ಷಣ ಸಿಗುವಂತಾಗಬೇಕು : ಜಿ.ಬಿ.ವಿನಯಕುಮಾರ್

**ಹೊನ್ನಾಳಿ :** ಸರಕಾರಿ ಅಥವಾ ಖಾಸಗಿ ಶಾಲೆಗಳಲ್ಲಿನ ಪ್ರತಿಯೊಂದು ಮಗುವಿಗೂ ಗುಣಮಟ್ಟದ ಶಿಕ್ಷಣ ಹಾಗೂ ಸಮಾನ ಶಿಕ್ಷಣ ಸಿಗುವಂತಾಗಬೇಕು. ಮುಖ್ಯವಾಗಿ ಶಿಕ್ಷಣದಲ್ಲಿ ಅಸಮಾನತೆ ತೊಲಗಬೇಕು ಎಂದು ಇನ್‌ಸೈಟ್ ಐಎಎಸ್ ಸಂಸ್ಥೆ ಸಂಸ್ಥಾಪಕ ಜಿ.ಬಿ.ವಿನಯಕುಮಾರ್ ಅಭಿಪ್ರಾಯಪಟ್ಟರು.

ತಾಲೂಕಿನ ಬನ್ನಿಕೋಡು ಗ್ರಾಮದ ಸರಕಾರಿ ಶಾಲೆಯಲ್ಲಿ ನಿರ್ಮಿಸಿರುವ ಧ್ವಜಸ್ಥಂಭ ಉದ್ಘಾಟನಾ ಸಮಾರಂಭವನ್ನು ಗುರುವಾರ ಉದ್ಘಾಟಸಿ ಅವರು ಮಾತನಾಡಿದರು.

ಸಮಾನತೆ ಶಿಕ್ಷಣ ದೊರೆತಾಗ ಮಾತ್ರ ಸಮಾಜದ ಕಟ್ಟಕಡೆಯ ಹಾಗೂ ಕಡು ಬಡವರ ಮಕ್ಕಳಿಗೂ ಉನ್ನತಸ್ಥಾನಕ್ಕೆ ಹೋಗಲು ಸಾಧ್ಯವಾಗುತ್ತದೆ ವಿಶೇಷವಾಗಿ ಸರಕಾರಿ ಶಾಲೆಗಳಲ್ಲಿ ಅಂತರಾಷ್ಟ್ರೀಯ ಮಟ್ಟದ ಗುಣಮಟ್ಟ ಶಿಕ್ಷಣ ದೊರಕುವಂತಾಗಬೇಕೆಂಬ ಹೆಬ್ಬಯಕೆ ನನ್ನದು, ಅದಕ್ಕಾಗಿ ನಾನು ಈ ಬಗ್ಗೆ ದೊಡ್ಡ ಕನಸು ಇಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆ,ಇದು ಅಷ್ಟು ಸುಲಭವಲ್ಲ ಎಂದು ಗೊತ್ತು ಆದರೆ ನಾನು ಸತತ ಪ್ರಯತ್ನ ಮಾಡಿ ಗ್ರಾಮೀಣ ಮಟ್ಟದ ಮಕ್ಕಳ ಶಿಕ್ಷಣಕ್ಕೆ ಸುಧಾರಣಗೆ ಕೆಲಸ ಮಾಡುತ್ತಿದ್ದೇನೆ ಎಂದರು.



ಶಾಲೆ ಎಂದಾಕ್ಷಣ ಸಮವಸ್ತ್ರ ಧರಿಸಿ ಎಲ್ಲರೂ ಒಂದೇ ಭಾವನೆ ಎಂದು ಶಾಲೆಗೆ ಬರುತ್ತಾರೋ ಹಾಗೆಯೇ ಶಿಕ್ಷಣದಲ್ಲೂ ಎಲ್ಲರಿಗೂ ಉನ್ನತ ಮಟ್ಟದ ಶಿಕ್ಷಣ ದೊರೆಯುವಂತಾಗಬೇಕು.ಶಿಕ್ಷಣದಲ್ಲಿ ತಾರತಮ್ಯತೆ ಇರಬಾರದು,ಚಿಕ್ಕ ಮಕ್ಕಳಲ್ಲಿ ಆ ಭೇದವನ್ನು ನಾವು ಸೃಷ್ಟಿ ಮಾಡಬಾರದು ಎಂಬ ಕಳಕಳಿ ನನ್ನದು ಎಂದು ನುಡಿದರು.

ಶಿಕ್ಷಣದಲ್ಲಿ ಸಮಾನತೆ ದೊರೆತಾಗ ಮಾತ್ರ ಎಲ್ಲಾ ಮಕ್ಕಳು ಮುಂದೆ ಐಎಎಸ್,ಐಪಿಎಸ್, ವೈದ್ಯ,ಇಂಜಿನಿಯರ್ ಸೇರಿದಂತೆ ಹಲವು ಉನ್ನತ ಹುದ್ದೆಗಳೊಗೆ ಹೋಗಲು ಅವಕಾಶ ಸಿಗುತ್ತದೆ,ಇಲ್ಲದಿದ್ದರೆ ಯಾವುದೋ ಒಂದು ಕೆಲಸಕ್ಕೆ ಹೋಗಬೇಕಾಗುತ್ತದೆ, ಆದ್ದರಿಂದ ನನ್ನ ಕಳಕಳಿ ಶಿಕ್ಷಣದಲ್ಲಿ ತಾರತಮ್ಯತೆ ಬೇಡ ಎಂದರು.

ವಿಧ್ಯಾರ್ಥಿಗಳು ದೊಡ್ಡ ದೊಡ್ಡ ಕನಸು ಕಾಣಬೇಕು, ನಿತ್ಯ ಐದಾರು ಗಂಟೆ ನಿರಂತರ ಅಭ್ಯಾಸ ಮಾಡಬೇಕು ಅದಕ್ಕಾಗಿ ನಾವು ಏಕಾಗ್ರತೆಯನ್ನು ಬೆಳಸಿಕೊಳ್ಳಬೇಕು. ನಮ್ಮ ಮನಸ್ಸನ್ನು ಹರಿಯಲು ಬಿಡಬಾರದು ಆಗ ಮಾತ್ರ ನಾವು ಭವಿಷ್ಯದಲ್ಲಿ ಸಾಧನೆ ಮಾಡಬಹುದು,ನಾವು ಜ್ಞಾನ ಗಳಿಸಿದರೆ ಮಾತ್ರ ಅವಕಾಶಗಳು ನಾವಿದ್ದ ಕಡೆ ಹರಸಿಕೊಂಡು ಬರುತ್ತದೆ,ಅಂತಹ ಜ್ಞಾನವನ್ನು ಗಳಿಸಿಕೊಳ್ಳಬೇಕು ಎಂದು ವಿಧ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸರಕಾರಿ ಶಾಲೆಗಳಲ್ಲಿ ಓದುತ್ತಿರುವ ವಿಧ್ಯಾರ್ಥಿಗಳೇ ವಿಶೇಷ, ವಿಧ್ಯಾರ್ಥಿಗಳಲ್ಲಿ ಅವರದೇ ಆದ ವಿಶೇಷ ಜ್ಞಾನ ಹಾಗೂ ಪ್ರತಿಭೆಯನ್ನು ಹೊಂದಿದ್ದಾರೆ, ಆ ಪ್ರತಿಭೆಯನ್ನು ಹೆಕ್ಕಿ ತೆಗೆಯುವ ಶಿಕ್ಷಕರು ಮಾಡಬೇಕು,ಆಗ ಮಾತ್ರ ವಿಧ್ಯಾರ್ಥಿಗಳು ಉನ್ನತ ಸ್ಥಾನಕ್ಕೇರಲು ಸಾಧ್ಯ ಎಂದರು.

ಬನ್ನಿಕೊಂಡು ಗ್ರಾ.ಪಂ. ಅಧ್ಯಕ್ಷ ಬಸವನಗೌಡ ಮಾತನಾಡಿದರು.ಎಸ್‌ಡಿಎಂಸಿ ಅಧ್ಯಕ್ಷ ವಸಂತ್ ರಾವ್,ಗ್ರಾ.ಪಂ. ಮಾಜಿ ಅಧ್ಯಕ್ಷ ಸಿದ್ದೇಶ್,ಮುಖ್ಯೋಪಾಧ್ಯರಾದ ವಿಶ್ವಭಾರತಿ,ಶಿಕ್ಷಕರಾದ ಜ್ಯೋತಿ,ಚಂದ್ರಶೇಖರ್ ಹಾಗೂ ಗ್ರಾಮದ ಮುಖಂಡರುಗಳು ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ವೃಷಭ ರಾಶಿ

ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ಮಿಥುನ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

### ಕರ್ಕ ರಾಶಿ

ಅನಿರೀಕ್ಷಿತ ಪ್ರಯಾಣದಿಂದ ಸುಸ್ತಾಗಬಹುದು ಹಾಗೂ ಇದು ನಿಮ್ಮನ್ನು ಕರಿಕಿರಿಗೊಳ್ಳುವಂತೆ ಮಾಡಬಹುದು. ಸ್ನಾಯುಗಳಿಗೆ ಆರಾಮ ನೀಡಲು ನಿಮ್ಮ ದೇಹವನ್ನು ತೈಲದಿಂದ ಮಸಾಜ್ ಮಾಡಿ ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೋಲೇಟ್‌ನ ರುಚಿ ಸವಿಯುತ್ತೀರಿ.

### ಸಿಂಹ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು– ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಕೌಟುಂಬಿಕ ಕಾರ್ಯಗಳು ಮತ್ತು ಪ್ರಮುಖ ಸಮಾರಂಭಗಳಿಗೆ ಪವಿತ್ರವಾದ ದಿನ. ಪ್ರೀತಿಪಾತ್ರರು ಪ್ರಣಯದ ಮೂಡ್‌ನಲ್ಲಿರುತ್ತಾರೆ. ಇಂದು ನಿಮ್ಮ ಮನಸ್ಸಿನಲ್ಲಿ ಉದ್ಭವವಾಗುವ ಹೊಸ ಹಣಗಳಿಕೆಯ ವಿಚಾರಗಳ ಲಾಭ ತೆಗೆದುಕೊಳ್ಳಿ.

### ಕನ್ಯಾ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ.

### ವೃಶ್ಚಿಕ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ಧನು ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಮಕರ ರಾಶಿ

ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದ ಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಈ ಅನಾವಶ್ಯಕವಾದ ಚಿಂತೆಗಳು ಮತ್ತು ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾವ ಬೀರಬಹುದು ಮತ್ತು ಚರ್ಮದ ಸಮಸ್ಯೆ ಉಂಟುಮಾಡಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.

### ಕುಂಭ ರಾಶಿ

ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

### ಮೀನ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

# ಅಮೇರಿಕಾ ದೊಂದಿಗೆ ವಾಣಿಜ್ಯಒಪ್ಪಂದ ಮಾಡಿಕೊಳ್ಳದಂತೆ ಆಗ್ರಹಿಸಿ ರೈತ ಸಂಘ ಮನವಿ



**ಚಿಕ್ಕಮಗಳೂರು:** ಅಮೇರಿಕಾದೊಂದಿಗೆ ಸಮಗ್ರಆರ್ಥಿಕ ಹಾಗೂ ವಾಣಿಜ್ಯಒಪ್ಪಂದವನ್ನಾಗಲೀ ಮತ್ತು ಮುಕ್ತ ವ್ಯಾಪಾರಒಪ್ಪಂದ ಮಾಡಿಕೊಳ್ಳಬಾರದು. ಅಮೇರಿಕ ವಿಧಿಸಿರುವ ಶೇ.25 ರಫ್ತುಆಮದು ಸುಂಕವನ್ನು ಪ್ರತಿಭಟಿಸಬೇಕುಎಂದು ಒತ್ತಾಯಿಸಿ ಕರ್ನಾಟಕರಾಜ್ಯರೈತ ಸಂಘ ಹಾಗೂ ಹಸಿರು ಸೇನೆ ಸಂಯುಕ್ತಕಿಸಾನ್ ಮೋರ್ಚಾ, ಕೇಂದ್ರಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಆಗ್ರಹಿಸಿ ಇಂದು ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿದ್ರೌಪದಿ ಮುರ್ಮುರವರಿಗೆ ಮನವಿ ಸಲ್ಲಿಸಿದರು.

ಯುನೈಟೆಡ್‌ಕಿಂಗ್‌ಡಮ್‌ಜೊತೆಗಿನ ಸಮಗ್ರ ಹಾಗೂ ವಾಣಿಜ್ಯಒಪ್ಪಂದವು ಹೈನುಗಾರಿಕೆ, ತರಕಾರಿಗಳು ಮತ್ತು ಹಣ್ಣುಗಳು ಸೇರಿದಂತೆ ಸಂಸ್ಕರಿತ ಆಹಾರಗಳ ಆಮದನ್ನು ಹೆಚ್ಚಿಸುತ್ತದೆ. ಇದು ಭಾರತದಲ್ಲಿಆಹಾರ ಸಂಸ್ಕರಣೆಯಲ್ಲಿ ವಿದೇಶಿ ನೇರ ಹೂಡಿಕೆ ಹೆಚ್ಚಳಕ್ಕೆ ಕಾರಣವಾಗಿದೇಶದರೈತರ ಗಳಿಕೆ ಮತ್ತು ಸಣ್ಣ ಕೃಷಿ ವ್ಯಾಪಾರ ಸಂಸ್ಥೆಗಳ ಗಳಿಕೆಯನ್ನು ಇದರಿಂದಾಗಿಗ ಣನೀಯವಾಗಿಕಡಿಮೆಯಾಗುತ್ತದೆಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕುಲಾಂತರಿ ತಳಿಗಳ ಬೆಳೆಗಳು ಆಹಾರಗಳು, ಆಹಾರ ಧಾನ್ಯಗಳು, ಸೋಯಾ, ಜೋಳ, ಹತ್ತಿ ಇತ್ಯಾದಿಗಳನ್ನು ಬೃಹತ್ ಪ್ರಮಾಣದಲ್ಲಿಆಮದು ಮಾಡಿಕೊಳ್ಳಲು ಅಮೇರಿಕಾದೊಂದಿಗೆ ಮಾತುಕತೆ ನಡೆಯುತ್ತಿದ್ದು, ಇದು ಭಾರ ತದಆರ್ಥಿಕತೆಗೆಅನಿಯಂತ್ರಿತವಾಗಿ ಬಹು ರಾಷ್ಟ್ರೀಯ ಕಂಪನಿಗಳ ಪ್ರವೇಶವನ್ನುಉ ತ್ತೇಜಿಸಲಾಗುತ್ತದೆ.

ಇದನ್ನುಕೂಡಲೇ ನಿಲ್ಲಿಸಿ ಏಕಪಕ್ಷೀಯವಾಗಿಅಮೇರಿಕ ಭಾರತದ ಮೇಲೆ ವಿಧಿಸಿರುವ ಶೇ. 25 ರಫ್ತುಆಮದು ಸುಂಕವು ದೇಶದ ಸಾರ್ವಭೌಮತೆಗೆಗಂಬಿ ೀರಆಕ್ರಮಣವಾಗಿದ್ದು, ಕೂಡಲೇ ಭಾರತ ಸರ್ಕಾರಇದನ್ನು ವಿರೋಧಿಸುವಂತೆ ಒತ್ತಾಯಿಸಿದ್ದಾರೆ.

ಎನ್‌ಪಿಎಫ್‌ಎಎಂ ಹಾಗೂ ಎನ್‌ಸಿಪಿಗಳನ್ನು ರದ್ದುಪಡಿಸಲು ಆಗ್ರಹಿಸಿ ಕೇಂದ್ರ ಸರ್ಕಾರ ಪರಿಚಯಿಸಿರುವ ಕೃಷಿ ಮಾರುಕಟ್ಟೆಕುರಿತರಾಷ್ಟ್ರೀಯ ನೀತಿಚೌಕಟ್ಟು ಮೂಲಭೂತವಾಗಿ ಎಪಿಎಂಸಿ ಆಧುನೀಕರಣ, ಆಹಾರಧಾನ್ಯ ನಿರ್ವಹಣೆ, ಆಹಾರದಾಸ್ತಾನು ಮತ್ತುಆಹಾರ ಸಂಸ್ಕರಣೆಯಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದ ಮೂಲಕ ಖಾಸಗಿ ಬಂಡವಾಳವನ್ನು ಉತ್ತೇಜಿಸುವ ನೀತಿಯಾಗಿದೆಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣವನ್ನು ಬಲಪಡಿಸಬೇಕು, ಕೋಮುವಾದಿ ಹಾಗೂ ವಿಚಿತ್ರಕಾರಿ ಚಟುವಟಿಕೆಗಳನ್ನು ಕಟ್ಟುನಿಟ್ಟಾಗಿತಡೆಯಬೇಕು. ಶಾಂತಿ ಸೌಹಾರ್ದತೆ ಬಲಗೊಳ್ಳಲು ಅಗತ್ಯಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಘದಜಿಲ್ಲಾಧ್ಯಕ್ಷಡಿ.ಆರ್. ದುಗ್ಗಪ್ಪಗೌಡ, ರಾಜ್ಯಉಪಾಧ್ಯಕ್ಷ ಎಂ. ಮಹೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೃಷಭರಾಜ್, ಜಿಲ್ಲಾ ಸಂಚಾಲಕ ಸವಿಂಜಯ್‌ಜೈನ್, ಮುಖಂಡರಾದಓಂಕಾರಪ್ಪ, ಹೆಚ್.ಆರ್. ಬಸವರಾಜಪ್ಪ, ಯು.ಡಿ. ಅಣ್ಣೇಗೌಡ, ಸಂತೋಷ್ ಹಗ್ಡೆ, ಸುದರ್ಶನ್ ಮತ್ತಿತರರು ಉಪಸ್ಥಿತರಿದ್ದರು.

## ಪರಿಸರ ವಾಹನಕ್ಕೆ ಹೆಚ್ಚ ಒತ್ತು ನೀಡಬೇಕು



**ಗದಗ :** ಪರಿಸರ ಸಂರಕ್ಷಣೆ ಹಿತದೃಷ್ಟಿಯಿಂದ ಪರಿಸರ ವಾಹನಕ್ಕೆ ಹೆಚ್ಚು ಒತ್ತು ಕೊಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ ಹೇಳಿದರು.

ಅವರು ಗದಗ ನಗರದ ಮಾಣಿಕಬಾಗ ಆಟೋಮೊಬೈಲ್ಸ್ ಶಾಖೆಯಲ್ಲಿ ಅತ್ಯಾಧುನಿಕ ಟಾಟಾ ಹ್ಯಾರಿಯರ್ ಇವಿ ಕಾರನ್ನು ಉದ್ಘಾಟಿಸಿ ಮಾತನಾಡಿ, ಪರಿಸರ ದೃಷ್ಟಿಯಿಂದ ಟಾಟಾದವರು ಟಾಟಾ ಎಲೆಕ್ಟ್ರಿಕಲ್ ಕಾರ್ ಹೊರತಂದಿದ್ದಾರೆ, ಪ್ರಯಾಣಿಕರು ರಸ್ತೆ ಸುರಕ್ಷತಾ ಬಗ್ಗೆ ಹೆಚ್ಚಿನ ಒತ್ತು ಕೊಡಬೇಕು ಕಾರ್ ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಸಿಟ್ ಬೆಲ್ಟ್ ಬಳಕೆ ಮಾಡಿಕೊಳ್ಳಬೇಕು, ವೇಗದ ಮಿತಿ ಕಡಿಮೆ ಇರಲಿ ಎಂದು ಗ್ರಾಹಕರಿಗೆ ತಿಳಿ ಹೇಳಿದರು,

ಉದ್ಘಾಟನೆಗೊಳಿಸಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ಟಾಟಾದಲ್ಲಿ ಇಂತ ಪ್ರಾಡಕ್ಟ್ ತಂದಿದ್ದು ಖುಷಿ ತಂದಿದ್ದು ನಗರ ಸೇರಿದಂತೆ ಸುತ್ತಮುತ್ತಲಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಬಿಜೆಪಿಯ ಜಿಲ್ಲಾ ಅಧ್ಯಕ್ಷ ರಾಜಣ್ಣ ಕುರಡಗಿ ಪರಿಸರ ರಕ್ಷಣೆಗೆ ಇಂತವ ಇವಿ ಕಾರಗಳು ಅತ್ಯವಶ್ಯಕವಾಗಿವೆ ಎಂದು ಹೇಳಿದರು.

ಮಾಣಿಕ್ ಬ್ಯಾಗ ಆಟೋಮೊಬೈಲ್ಸ್ ಪ್ರೈವೇಟ್ ಲಿಮಿಟೆಡ್ ಗದಗ ಶಾಖೆ ಮುಖ್ಯಸ್ಥ ಕಾರ್ತಿಕ ಶಿಗ್ಲಿಮಠ ಅವರು ಮಾತನಾಡಿ, ಹ್ಯಾರಿಯರ್ ಎಲೆಕ್ಟ್ರಿಕಲ್ ಕಾರ್ ವಿಶೇಷತೆಂದರೆ 4ವ್ಹೀಲ್ ಡ್ರೈವ್, 5ಸ್ಟಾರಸೇಫ್ಟಿ, ರೇಟಿಂಗ್, ಸಿಂಗಲ್ ಚಾರ್ಜಗೆ 628 ಕಿಮೀ ಚಲಿಸುತ್ತದೆ, ಅಡ್ಯಾಸ ಲೆವಲ್ಟೊ, ಫ್ಯೂಚರ್ ಇದ್ದು 560ಕ್ಯಾಮೆರಾ ವಿಶೇಷಹೊಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಈಶ್ವರ. ಕರಮುಡಿ, ಲಿಂಗರಾಜ ಶಿಗ್ಲಿಮಠ, ಎಸ್ ಪಿ ಸಂಶಿಮಠ, ಈಶಪ್ಪ ಮುನವಳ್ಳಿ, ಡಾ ರಾಜಶೇಖರ, ಸೋಮು ಹೊನ್ನಗುಡಿ, ಅವಿನಾಶ ಹೊನ್ನಗುಡಿ, ಬಸವರಾಜ ಮೂಗುಂಡಮಠ, ಸಚಿನ. ಕುರಡಗಿ, ನಾಗರಾಜ ಹಿರೇಮಠ, ಮಹೇಶ. ಮಾಳೆಕೊಪ್ಪಮಠ, ನಂದೀಶ ಕುಬಸದ, ಎಸ್‌ಬಿಐ ಚೀಫ ಮ್ಯಾನೇಜರ ಅರವಿಂದ ದಾಬೋಲೆ, ಕೆನರಾ ಬ್ಯಾಂಕ್ ಆರ್‌ಬಿಎಚ್ ಮ್ಯಾನೇಜರ ಕಿರಣ ಪಾಟೀಲ್, ಬ್ಯಾಂಕ್ ಆಫ್ ಬರೋಡಾ ಮ್ಯಾನೇಜರ್ ಪ್ರಸಾದ, ಬ್ಯಾಂಕ್ ಆಫ್ ಇಂಡಿಯಾ ಲೋನ ಸೋರ್ಸಿಂಗ್ ಮ್ಯಾನೇಜರ ಷರೀಫ್, ಮಹಿಂದ್ರಾ ಫೈನಾನ್ಸ್ ಮುತ್ತು ಇಂಡಸಂಡ ಬ್ಯಾಂಕ್ ಶರಣಯ್ಯ ಹಾಗೂ ಮಾಣಿಕಬ್ಯಾಗ್ ಸಿಬ್ಬಂದಿಗಳು ಇದ್ದರು.

## ಅಲ್ಲಂಪುರ ಗ್ರಾಮ ಪಂಚಾಯ್ತಿ ನೂತನ ಅಧ್ಯಕ್ಷರಾಗಿ ಪೂರ್ಣಿಮಾ ಪ್ರದೀಪ್ ಅವಿರೋಧವಾಗಿ ಆಯ್ಕೆ



**ಚಿಕ್ಕಮಗಳೂರು:** ತಾಲ್ಲೂಕಿನ ಅಲ್ಲಂಪುರಗ್ರಾಮ ಪಂಚಾಯ್ತಿ ನೂತನಅಧ್ಯಕ್ಷರಾಗಿ ಬಿಜೆಪಿ ಬೆಂಬಲಿತ ಪೂರ್ಣಿಮಾ ಪ್ರದೀಪ್‌ಅವಿರೋಧವಾಗಿಆಯ್ಕೆಯಾದ ರು.ಚುನಾವಣಾಧಿಕಾರಿಯಾಗಿದ್ದಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪಅವರು ಪೂರ್ಣಿಮಾಅವರಆಯ್ಕೆಯನ್ನು ಘೋಷಿಸಿದರು.ಈ ವೇಳೆ ನೂತನಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಬಿಜೆಪಿ ಮುಖಂಡಟಿ.ರಾಜಶೇಖರ್‌ಅಲ್ಲಂಪುರದೊಡ್ಡ ಪಂಚಾಯ್ತಿಯಾಗಿದ್ದು, ಗಿರಿ ಭಾಗಕ್ಕೆ ತೆರಳುವ ಎಲ್ಲಾ ಪ್ರವಾಸಿಗರು ಈ ಗ್ರಾಮವನ್ನು ಹಾದುಹೋಗುವುದಿರಿಂದಅಭಿವೃದ್ಧಿ ಕಾರ್ಯಗಳು ವೇಗವಾಗಿ ನಡೆಯಬೇಕಾಗುತ್ತದೆ. ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಕೆಲಸ ಮಾಡಬೇಕುಎಂದು ಸಲಹೆ ಮಾಡಿದರು.ಪೂರ್ಣಿಮಾಅವರ ಪತಿ ಪ್ರದೀಪ್‌ಅವರು ಈ ಭಾಗದಲ್ಲಿಜನಾನುರಾಗಿಯಾಗಿದ್ದಾರೆಅಲ್ಲದೆಅಧ್ಯಕ್ಷರೊಂದಿಗೆಉತ್ತಮ ಸದಸ್ಯರತಂಡವೂಇದೆ. ಸ್ಥಳೀಯ ಬಿಜೆಪಿ ಮುಖಂಡರುಗಳ ವಿಶ್ವಾಸಕ್ಕೆ ಪಡೆದು ಪಂಚಾಯ್ತಿಯನ್ನುಅಭಿವೃದ್ಧಿಯತ್ತಕೊಂಡೊಯ್ಯಬೇಕು. ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರ ಮಾರ್ಗದರ್ಶನದಜೊತೆಗೆಅವರು ಶಾಸಕರಾಗಿದ್ದಾಗ ಈ ಪಂಚಾಯ್ತಿ ಅಭಿವೃದ್ಧಿಗೆ ಮೂಲ ಕಾರಣಕರ್ತರೂಆಗಿದ್ದಾರೆ. ಮುಂದೆಯೂಅವರ ಮಾರ್ಗದರ್ಶನದಲ್ಲಿ ಪಂಚಾಯ್ತಿಯನ್ನುಉನ್ನತ ಮಟ್ಟಕ್ಕೆಕೊಂಡೊಯ್ಯಬೇಕುಎಂದರು.

ಜಿ.ಪಂ. ಮಾಜಿ ಸದಸ್ಯಜೆಡಿ.ಲೋಕೇಶ್ ಮಾತನಾಡಿ, ಪೂರ್ಣಿಮಾ ಪ್ರದೀಪ್ ನೇತೃತ್ವದಲ್ಲಿಉತ್ತಮ ಕೆಲಸಗಳು ನಡೆದು ಪಂಚಾಯ್ತಿಗೂ, ಬಿಜೆಪಿಗೂ, ಸಿ.ಟಿ.ರವಿ ಅವರಿಗೂ ಒಳ್ಳೆಯ ಹೆಸರು ಬರುವಂತಾಗಲಿ ಎಂದರು.

ನೂತನಅಧ್ಯಕ್ಷೆ ಪೂರ್ಣಿಮಾಪ್ರದೀಪ್ ಮಾತನಾಡಿ ನನ್ನನ್ನುಅವಿರೋಧವಾಗಿಆಯ್ಕೆ ಮಾಡಲು ಸಹಕರಿಸಿದ ಪ್ರತಿಯೊಬ್ಬರಿಗೂ ಧನ್ಯವಾದಗಳು, ಅಭಿವೃದ್ಧಿ ಕೆಲಸಗಳಿಗೂ ಎಲ್ಲಾ ಸದಸ್ಯರುತಮ್ಮ ಸಲಹೆ, ಸಹಕಾರ ನೀಡಬೇಕೆಂದು ತಿಳಿಸಿದರು.ಈ ಸಂದರ್ಭದಲ್ಲಿತಾಲ್ಲೂಕು ಪಂಚಾಯಿತಿ ಮಾಜಿಅಧ್ಯಕ್ಷೆದ್ರಾಕ್ಷಾಯಿಣಿ ಪೂರ್ಣೇಶ್, ಮುಖಂಡರುಗಳಾದ ಮಂಜುನಾಥ್, ಸುರೇಶ್, ದೇವರಾಜ್, ಗೌರಮ್ಮ, ವೇಣು, ಮೋಹನ್, ಪಂಚಾಯ್ತಿ ಉಪಾಧ್ಯಕ್ಷಧಾನೇಶ್, ಸದಸ್ಯರುಗಳಾದ ಅರ್ಪಿತಾ, ವಸಂತಕುಮಾರ್, ಮಧುಸೂಧನ್‌ರಾವ್, ಎ.ಟಿ.ರಮೇಶ್, ಶಿವರಾಜ್, ಜಯಂತಿ, ಪದ್ಮಾಕ್ಷಿ, ಕೃಷ್ಣ, ಎಚ್.ಆರ್.ಕಮಲ, ಶಿಲ್ಪ ಇತರರುಇದ್ದರು.

# ಡಿಸಿಸಿ ಬ್ಯಾಂಕಿನಿಂದ ಶೇ.3 ಬಡ್ಡಿದರದಲ್ಲಿ 30 ಕೋಟಿ ಮಧ್ಯಮಾವಧಿ ಸಾಲ ನೀಡಲುಗುರಿ



**ಚಿಕ್ಕಮಗಳೂರು:** ಜಿಲ್ಲಾ ಸಹಕಾರಕೇಂದ್ರ ಬ್ಯಾಂಕಿನಿಂದ 2025–26ನೇ ಸಾಲಿಗೆ ಶೇ.3 ರ ಬಡ್ಡಿದರದಲ್ಲಿ 30 ಕೋಟಿ ಮಧ್ಯಮಾವಧಿ ಸಾಲ ನೀಡುವಯೋಜನೆಜೊತೆಗೆ ಪ್ರಸ್ತುತಇರುವ ನಿವ್ವಳ ಲಾಭವನ್ನು 8 ಕೋಟಿ ರೂಗಳಿಗೆ ಹೆಚ್ಚಿಸಲುಗುರಿ ಹೊಂದಲಾಗಿದೆಎಂದು ಬ್ಯಾಂಕಿನಅಧ್ಯಕ್ಷಡಿ.ಎಸ್. ಸುರೇಶ್ ತಿಳಿಸಿದರು.

ಅವರುಇಂದು ಬ್ಯಾಂಕಿನ ಸಭಾಂಗಣದಲ್ಲಿಏರ್ಪಡಿಸಲಾಗಿದ್ದ ಸರ್ವ ಸದಸ್ಯರ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಬಜೆಟ್‌ನಲ್ಲಿ ತಿಳಿಸಲಾಗಿರುವಂತೆ ಜಿಲ್ಲೆಗೆ ಹಾಲು ಉತ್ಪಾದಕಘಟಕ ಸ್ಥಾಪಿತವಾದಲ್ಲಿರೈತಾಪಿ ವರ್ಗದವರಿಗೆ ಹೆಚ್ಚು ಹೆಚ್ಚು ಹಾಲು ಸಂಗ್ರಹಣೆ ಮಾಡಲುದುಡಿಯುವ ಬಂಡವಾಳ ರೂಪದಲ್ಲಿ 35 ಕೋಟಿರೂ ಸಾಲಸೌಲಭ್ಯ ನೀಡಲು ಉದ್ದೇಶಿಸಲಾಗಿದೆ ಎಂದರು.ರಾಜ್ಯ ಹಾಗೂ ಕೇಂದ್ರಸರ್ಕಾರ ಜಾರಿಗೊಳಿಸಿದ ಪ್ಯಾಕ್ಸ್ ಎಮ್.ಎಸ್.ಸಿ ಯೋಜನೆಯಡಿ 32 ಕೋಟಿ ಸಾಲ ಮಂಜೂರು ಮಾಡಲಾಗಿದ್ದು, ಇನ್ನೂ ಹೊಸ ಸಂಘಗಳಿಗೆ ಸ್ವಂತಗೋದಾಮು ನಿರ್ಮಿಸಿಕೊಳ್ಳಲು ರಿಯಾಯಿತಿ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡಲುಕ್ರಮ ವಹಿಸಲಾಗಿದೆಎಂದು ಭರವಸೆ ನೀಡಿದರು.

2025–26 ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಮೂಲಕ 370 ಕೋಟಿ ರೂಗಳ ಕೃಷಿಯೇತರ ಸಾಲವನ್ನು ನೀಡಲುಗುರಿಹೊಂದಲಾಗಿದೆ. ಇದರಿಂದಾಗಿ ಪ್ರಸಕ್ತ ವರ್ಷ ಬ್ಯಾಂಕಿನ ವಾರ್ಷಿಕ ವಹಿವಾಟು 2200 ಕೋಟಿರೂ ಮೀರುವಅಂದಾಜಿಸಲಾಗಿದೆಎಂದು ಹೇಳಿದರು.ಡಿಸಿಸಿ ಬ್ಯಾಂಕ್‌ತನ್ನದೇಆದ ಸುಸಜ್ಜಿತಕಟ್ಟಡದಲ್ಲಿ ಬ್ಯಾಂಕಿನ ವಹಿವಾಟು ನಡೆಸುತ್ತಿದೆ. ಗ್ರಾಹಕರಿಗೆ ಬ್ಯಾಂಕಿನಿಂದ ಸಿಗುವ ಸೌಲಭ್ಯಗಳ ಕುರಿತುಅರಿವು ಮೂಡಿಸಲುಎಲ್ಲಾ ಶಾಖೆಗಳಲ್ಲೂ ದೂರದರ್ಶನ ಅಳವಡಿಸಿ ಗ್ರಾಹಕರನ್ನು ಜಾಗೃತಗೊಳಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಕೆಸಿಸಿ ಸಾಲಗಾರರನ್ನು 5 ಲಕ್ಷಗಳಿಗೆ ಮಿತಿಗೊಳಿಸಿ ಅಪಘಾತ ವಿಮಾ ಸೌಲಭ್ಯಒದಗಿಸಲುಯೋಜನೆರೂಪಿಸಲಾಗುತ್ತಿದೆಎಂದರು.

ಪ್ರಸಕ್ತ ವರ್ಷದ ಮಾ.31 ಕ್ಕೆ 65.10 ಕೋಟಿ ಷೇರು ಬಂಡವಾಳವನ್ನು ಸಂಗ್ರಹಿಸಲಾಗಿದ್ದು, ಈ ನಿಟ್ಟಿನಲ್ಲಿ ಡಿಸಿಸಿ ಬ್ಯಾಂಕ್‌ಅಭಿವೃದ್ಧಿ ಪಥದಲ್ಲಿ ಸಾಗಲು ಕಾರಣರಾದ ಮತ್ತು ಸಂಪೂರ್ಣ ಸಹಕಾರ ನೀಡಿದಜಿಲ್ಲೆಯಎಲ್ಲಾ ಸಹಕಾರ ಸಂಘಗಳ ಸದಸ್ಯರಿಗೆ, ಆಡಳಿತ ಮಂಡಳಿ ಸದಸ್ಯರಿಗೆಎಲ್ಲಾ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ, ಕಾರ್ಯನಿರ್ವಹಣಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು.ಈ ಸಂದರ್ಭದಲ್ಲಿಅಪೆಕ್ಸ್ ಬ್ಯಾಂಕ್‌ಅಧ್ಯಕ್ಷ ಬೆಳ್ಳಿ ಎಂ. ಪರಮೇಶ್ವರಪ್ಪ, ಸಹಕಾರ ಸಂಘಗಳ ಉಪ ನಿಬಂಧಕರಾದಡಿ.ಎಸ್. ತೇಜಸ್ವಿನಿ, ಅಪೆಕ್ಸ್ ಬ್ಯಾಂಕ್ ನಾಮಿನಿ ಸದಸ್ಯಎಲ್. ಜಗದೀಶ್ ಹಾಗೂ ಸಹಕಾರ ಸಂಘಗಳ ಜಂಟಿ ನಿಬಂಧಕರಾದ ಪ್ರವೀಣ್ ಬಿ ಪ್ರಕಾಶ್,ಉಪಾಧ್ಯಕ್ಷ ಹೆಚ್.ಬಿ ಸತೀಶ್, ನಿರ್ದೇಶಕರುಗಳಾದ ಕೆ.ಆರ್. ಆನಂದಪ್ಪ, ಟಿ.ಎಲ್. ರಮೇಶ್, ಡಿ.ಸಿ ಶಂಕ್ರಪ್ಪ, ಹೆಚ್.ಬಿ ಶಿವಣ್ಣ, ಎಸ್. ಜಿರಾಮಪ್ಪ, ಹೆಚ್.ವಿ. ಸಂದೀಪ್‌ಕುಮಾರ್, ಎಸ್. ಎನ್‌ರಾಮಸ್ವಾಮಿ, ಎಂ.ಎಸ್ ನಿರಂಜನ್, ನಾಯಕ್ ಉಪಸ್ಥಿತರಿದ್ದರು.

# ಕೃಷಿ ಕಾಲೇಜಿನಲ್ಲಿ ಆ.18 ರಿಂದ 'ಅನ್ವೇಷಣೋತ್ಸವ' – ವಿಜ್ಞಾನ ಪ್ರದರ್ಶನ

**ಶಿವಮೊಗ್ಗ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ವತಿಯಿಂದ ದಿ : 18–08–2025 ರಿಂದ 22–08–2025 ರವರೆಗೆ "ಅನ್ವೇಷಣೋತ್ಸವ" ಎಂಬ ವಿಜ್ಞಾನ ಪ್ರದರ್ಶನವನ್ನು ನವುಲೆ ಆವರಣದ ಕೃಷಿ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಮತ್ತು ಸೊಸೈಟಿ ಫಾರ್ ಅಡ್ವಾನ್ಸ್ಮೆಂಟ್ ಇನ್ ಸೈನ್ಸ್, ಟೆಕ್ನಾಲಜಿ, ರಿಸರ್ಚ್ ಅಂಡ್ ಆರ್ಟ್ಸ್ ಇವರ ಸಹಯೋಗದೊಂದಿಗೆ

ಆಯೋಜಿಸಲಾಗಿದೆ. ಯುವ ವಿಜ್ಞಾನಿಗಳನ್ನು ಪೋಷಿಸಲು ಮತ್ತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವಲ್ಲಿ ಈ ಕಾರ್ಯಕ್ರಮವು ಮಹತ್ವದ ಪಾತ್ರ ವಹಿಸುತ್ತದೆ.

ದಿನಾಂಕ 18–08–2025 ರಂದು ಬೆಳಿಗ್ಗೆ 10.30 ಕ್ಕೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಮಧು ಬಂಗಾರಪ್ಪನವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದು, ಜಿಲ್ಲೆಯ ಲೋಕಸಭಾ ಸದಸ್ಯರು, ಶಾಸಕರು, ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳು ಹಾಗೂ ವ್ಯವಸ್ಥಾಪನಾ ಮಂಡಳಿ ಸದಸ್ಯರುಗಳು ಭಾಗವಹಿಸಲಿದ್ದಾರೆ.

ಈ ಮೇಳವನ್ನು ಜಿಲ್ಲಾ ಮಟ್ಟದ ವಿಜ್ಞಾನ ಕಾರ್ಯಕ್ರಮವನ್ನಾಗಿ ಮಾಡುವ ಉದ್ದೇಶ ಹೊಂದಿದ್ದು, ಶಿವಮೊಗ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಿಂದ ಸುಮಾರು 25,000 ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದಾರೆ.

ಈ ವಿಜ್ಞಾನ ಪ್ರದರ್ಶನದಲ್ಲಿ ಪ್ಲಾಸ್ಮಾ ರಿಸರ್ಚ್ ಸಂಸ್ಥೆಯಿಂದ ವಿವಿಧ ವಿಜ್ಞಾನಗಳ ವಿಷಯಗಳಲ್ಲಿ ನೇರ ಪ್ರದರ್ಶನ, ತರಬೇತಿ ಕಾರ್ಯಕ್ರಮಗಳು, ಪ್ರತಿಷ್ಠಿತ ಸಂಸ್ಥೆಯ ವಿಜ್ಞಾನಿಗಳಿಂದ ಮಾಹಿತಿ ಹಂಚಿಕೊಳ್ಳುವುದು ಹಾಗೂ ರಸಪ್ರಶ್ನೆ ಕಾರ್ಯಕ್ರಮಗಳು ಇರುತ್ತವೆ.

ಆರ್ಯಭಟ ಪ್ಲಾನೆಟೋರಿಯಂ ಮತ್ತು ಟೆಲಿಸ್ಕೋಪ್ ಸಂಸ್ಥೆಯಿಂದ ಬಾಹ್ಯಾಕಾಶ ವಿಜ್ಞಾನದ ನೇರ ಪ್ರದರ್ಶನವನ್ನು ಏರ್ಪಡಿಸಲಾಗಿದ್ದು ಇದರ ಉಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಂಡು ವಿಜ್ಞಾನಿಗಳೊಂದಿಗೆ ಮುಕ್ತವಾಗಿ ಚರ್ಚೆ ಮಾಡಲು ಅವಕಾಶವಿರುತ್ತದೆ.

ವಿಜ್ಞಾನ ಪ್ರದರ್ಶನ ಮೇಳದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಸಂಶೋಧನಾ ಕೌನ್ಸಿಲ್‌ನ ಅಧ್ಯಕ್ಷರಾದ ಡಾ. ಹುಲಿಕಲ್ ನಟರಾಜ್ ಅವರು ಭಾಗವಹಿಸಲಿದ್ದಾರೆ, ಇಸ್ರೋದ ಮಾಜಿ ಅಧ್ಯಕ್ಷರು ಮತ್ತು ವಿಜ್ಞಾನಿಗಳಾದ ಡಾ. ಎಸ್ ಕಿರಣ್ ಕುಮಾರ್ ಅವರು ಭಾಗವಹಿಸಿ ಮಾಹಿತಿಯನ್ನು ಹಂಚಿಕೊಳ್ಳಲಿದ್ದಾರೆ.

ಅದೇ ರೀತಿ ಆಟೋಮಿಕ್ ಎನರ್ಜಿ ಸಂಸ್ಥೆಯ ವಿಜ್ಞಾನಿಗಳು, ವಿಜ್ಞಾನ ಪ್ರದರ್ಶನ ಸಮಿತಿಯ ಅಧ್ಯಕ್ಷರು,

ಸೆಕ್ರೆಟರಿರವರು ಮತ್ತು ಇತರೆ ವಿಜ್ಞಾನ ಸಂಸ್ಥೆಗಳ ವಿಜ್ಞಾನಿಗಳು ಮತ್ತು ಮುಖ್ಯಸ್ಥರು ಈ ಪ್ರದರ್ಶನದಲ್ಲಿ ಭಾಗವಹಿಸಲಿದ್ದಾರೆ. ಹಾಗೂ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳು ಡಾಕ್ಟರ್ ಆರ್ ಸಿ ಜಗದೀಶ್ ಮತ್ತು ಎಲ್ಲಾ ವಿಶ್ವವಿದ್ಯಾಲಯದ ಅಧಿಕಾರಿ ವೃಂದದವರು, ಪ್ರಾಧ್ಯಾಪಕರು, ವಿಜ್ಞಾನಿಗಳು, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ಕೃಷಿ ಮಹಾವಿದ್ಯಾಲಯದ ಡೀನ್ ಡಾ.ತಿಪ್ಪೇಶ ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಪುರಸಭಾ ಕಾರ್ಯಾಲಯ, ಚನ್ನಗಿರಿ

ದಾವಣಗೆರೆ ಜಿಲ್ಲೆ, ಕರ್ನಾಟಕ ರಾಜ್ಯ, ಚನ್ನಗಿರಿ–577213
ದೂರವಾಣಿ: 08189–228021
ಇ–ಮೇಲ್-: ka.channagiri.tmc@gmail.com
ವೆಬ್‌ಸೈಟ್: www.channagiritown.mrc.gov.in

ಕ್ರಮಾಂಕ: ಪು.ಸ.ಚ/ಮ.ಶಾ/ಸಿ.ಆರ್/01/2025–26 ದಿನಾಂಕ: 14–08–2025

### ಬಹಿರಂಗ ಹರಾಜು ಪ್ರಕಟಣೆ

(ಕ.ಪೌ.ಅ–1964 ರ ಪ್ರ–72 (1) ಮತ್ತು (2) ಹಾಗೂ Municipal(Guidance of Copies and Misc Provision) Rule 1966 ರ ನಿಯಮ 39 ರ ಪ್ರಕಾರ)

ಈ ಮೂಲಕ ಚನ್ನಗಿರಿ ಪುರಸಭೆಯ ಸಮಸ್ತ ಜಾಹೀರಾತು ಮುದ್ರಣದಾರರಿಗೆ ಹಾಗೂ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ, ಚನ್ನಗಿರಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಖಾಸಗಿ ಬಸ್ ನಿಲ್ದಾಣದ ಮೇಲ್ಭಾಗದಲ್ಲಿರುವ ಪುರಸಭೆ ಮಾಲೀಕತ್ವದ ಜಾಹೀರಾತು ಹೋರ್ಡಿಂಗ್‌ನ್ನು ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 72(2) ರನ್ವಯ 01 ವರ್ಷದ ಅವಧಿಗೆ ಗುತ್ತಿಗೆ ನೀಡಲು ಷರತ್ತಿಗೆ ಒಳಪಟ್ಟು ಬಹಿರಂಗ ಹರಾಜನ್ನು ದಿನಾಂಕ: 01–09–2025 ನೇ ಸೋಮವಾರ ಬೆಳಿಗ್ಗೆ 11:00 ಗಂಟೆಗೆ ಪುರಸಭೆ ಕಾರ್ಯಾಲಯದ ಆವರಣದಲ್ಲಿಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು, ಸ್ಥಾಯಿಸಮಿತಿ ಅಧ್ಯಕ್ಷರು, ಮುಖ್ಯಾಧಿಕಾರಿಗಳು, ಸದಸ್ಯರ ಸಮ್ಮುಖದಲ್ಲಿಬಹಿರಂಗ ಹರಾಜು ನಡೆಸಲಾಗುವುದು. ಪ್ರಯುಕ್ತ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ಈ ಕೆಳಕಂಡಂತೆ ಸೂಚಿಸಿದ ಮರುಪಾವತಿ ಠೇವಣಿಯನ್ನು ರಾಷ್ಟ್ರೀಕೃತ ಬ್ಯಾಂಕಿನಿಂದ ಮುಖ್ಯಾಧಿಕಾರಿ ಪುರಸಭೆ ಚನ್ನಗಿರಿ ರವರ ಹೆಸರಿನಲ್ಲಿ ಡಿ.ಡಿ. ಪಡೆದು ಪುರಸಭೆ ನಿಗದಿಪಡಿಸಿದ ಅರ್ಜಿಯೊಂದಿಗೆ ಲಗತ್ತಿಸಿ ದಿನಾಂಕ: 30–08–2025 ರ ಸಂಜೆ 5:30 ಗಂಟೆ ಒಳಗಾಗಿ ಪುರಸಭೆ ಕಛೇರಿಗೆ ಸಲ್ಲಿಸತಕ್ಕದ್ದು, ಸದರಿ ಜಾಹೀರಾತು ಹೋರ್ಡಿಂಗ್‌ಗೆ ನಿಗಧಿ ಪಡಿಸಿರುವ ಮರುಪಾವತಿ ಠೇವಣಿಯಲ್ಲಿ ಯಾವುದೇ ವಿನಾಯಿತಿ ಇರುವುದಿಲ್ಲ ಮತ್ತು ಹೆಚ್ಚಿನ ಮಾಹಿತಿಗಾಗಿ ಕಂದಾಯ ಶಾಖೆಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ತಿಳಿದುಕೊಳ್ಳಬಹುದು.

#### –: ಜಾಹೀರಾತು ಹೋರ್ಡಿಂಗ್‌ನ ವಿವರ :–

| ಕ್ರ. ಸಂ | ಜಾಹಿರಾತು ಹೋರ್ಡಿಂಗ್ ಇರುವ ಸ್ಥಳ | ಅಳತೆ | ನಿಗಧಿಪಡಿಸಿದ ವಾರ್ಷಿಕ ಬಾಡಿಗೆ | ಹರಾಜಿನಲ್ಲಿ ಭಾಗವಹಿಸಲು ಪಾವತಿಸಬೇಕಾದ ಮರುಪಾವತಿ ಠೇವಣಿ ಮೊತ್ತ |
|---|---|---|---|---|
| 01 | ಪುರಸಭೆ ಮಾಲೀಕತ್ವದ ಖಾಸಗಿ ಬಸ್ ನಿಲ್ದಾಣದ ಮೇಲ್ಭಾಗ | 6*6 ಮೀ | 48,946–00 | 50,000–00 |

ಸಹಿ/– ಮುಖ್ಯಾಧಿಕಾರಿ ಪುರಸಭೆ, ಚನ್ನಗಿರಿ
ಸಹಿ/– ಸ್ಥಾಯಿ ಸಮಿತಿ ಅಧ್ಯಕ್ಷರು ಪುರಸಭೆ, ಚನ್ನಗಿರಿ
ಸಹಿ/– ಉಪಾಧ್ಯಕ್ಷರು ಪುರಸಭೆ, ಚನ್ನಗಿರಿ
ಸಹಿ/– ಅಧ್ಯಕ್ಷರು ಪುರಸಭೆ, ಚನ್ನಗಿರಿ

# ಬಾಳೆಬರೆ ಘಾಟಿಯಲ್ಲಿ ಭಾರಿ ವಾಹನ ಸಂಚಾರ ತಾತ್ಕಾಲಿಕ ನಿಷೇಧ

**ಶಿವಮೊಗ್ಗ:** ತೀರ್ಥಹಳ್ಳಿ ಕುಂದಾಪುರ ರಾಜ್ಯ ಹೆದ್ದಾರಿ 52 ಬಾಳೆಬರೆ ಘಾಟ್ ಸರಪಳಿ ಹೆರ್‌ಪಿನ್ ತಿರುವಿನಲ್ಲಿ ಮಣ್ಣಿನ ಕುಸಿತ ಉಂಟಾಗಿದ್ದು, ಮಳೆ ಚುರುಕುಗೊಂಡಿದ್ದು ಮತ್ತೆ ಮಣ್ಣು ಕುಸಿಯುವ ಸಂಭವವಿದ್ದು, ಸುರಕ್ಷಿತಾ ದೃಷ್ಠಿಯಿಂದ (ಮಾಸ್ತಿಕಟ್ಟೆಯಿಂದ ಹೊಸಂಗಡಿಯವರೆಗೆ) ತಾತ್ಕಾಲಿಕವಾಗಿ ಮಳೆಗಾಲ ಮುಗಿಯುವವರೆಗೆ ಭಾರಿ ವಾಹನಗಳ ಸಂಚಾರವನ್ನು ನಿಷೇಧಗೊಳಿಸಿ ಪರ್ಯಾಯ ಮಾರ್ಗದಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶ ನೀಡಿದ್ದಾರೆ.

ತೀರ್ಥಹಳ್ಳಿಯಿಂದ ರಾವೆ– ಕಾನಗೋಡು– ಮಾಸ್ತಿಕಟ್ಟೆ– ಹುಲಿಕಲ್ ಘಾಟ್– ಹೊಸಂಗಡಿ –ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ–ರಾವೆ–ಕಾನುಗೋಡು–ನಗರ–ಕೊಲ್ಲೂರು–ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

ನಗರ ಸಿದ್ದಾಪುರ ರಾಜ್ಯ ಹೆದ್ದಾರಿ–278 ರಸ್ತೆ ತೀರ್ಥಹಳ್ಳಿಯಿಂದ ಯಡೂರು–ಸುಳಗೋಡು–ಮಾಸ್ತಿಕಟ್ಟೆ–ಹುಲಿಕಲ್ ಘಾಟ್–ಹೊಸಂಗಡಿ–ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ–ಯಡೂರು–ಮಾಸ್ತಿಕಟ್ಟೆ–ಕಾನುಗೋಡು–ನಗರ–ಕೊಲ್ಲೂರು–ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

ಶಿವಮೊಗ್ಗ/ಸಾಗರ ಕಡೆಯಿಂದ ಹೊಸನಗರ–ನಗರ–ಮಾಸ್ತಿಕಟ್ಟೆ–ಹುಲಿಕಲ್ ಘಾಟ್–ಹೊಸಂಗಡಿ–ಸಿದ್ದಾಪುರ ಮೂಲಕ ಕುಂದಾಪುರದ ಕಡೆ ಹೋಗುವ ಭಾರಿ ವಾಹನಗಳು ಶಿವಮೊಗ್ಗ ಹೊನ್ನಾವರ ರಾಷ್ಟ್ರೀಯ ಹೆದ್ದಾರಿ ಮೂಲಕ ಹೊನ್ನಾವರ ಆನಂತರ ಹೊನ್ನಾವರದಿಂದ ಭಟ್ಕಳ–ಬೈಂದೂರು– ಕುಂದಾಪುರ ರಸ್ತೆಯ ಮೂಲಕ ಸಂಚರಿಸುವಂತೆ ಆದೇಶ ಹೊರಡಿಸಿದ್ದಾರೆ.

# ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿ ಹಾಗೂ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಅರ್ಜಿ ಅಹ್ವಾನ

**ಬಳ್ಳಾರಿ:** ಕೃಷಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಆತ್ಮ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿ ಪ್ರಶಸ್ತಿ ಮತ್ತು ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿಗೆ ರೈತರಿಂದ ಮತ್ತು ರೈತ ಮಹಿಳೆಯರಿಂದ ಅರ್ಜಿ ಅಹ್ವಾನಿಸಲಾಗಿದೆ.

ಸಮಗ್ರ ಕೃಷಿ ಪದ್ಧತಿ, ಬೆಳೆ ಪದ್ಧತಿ, ಬೆಳೆ ವೈವಿಧ್ಯಕರಣ, ಸಾವಯವ ಕೃಷಿ, ಕೃಷಿ ಯಂತ್ರೋಪಕರಣ ಅಭಿವೃದ್ಧಿ, ನೀರಿನ ಸಮರ್ಥ ಬಳಕೆ ಇನ್ನಿತರೆ ಯಾವುದಾದರೂ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಅರ್ಹ ರೈತರು ಕೃಷಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು.

ಆತ್ಮ ಯೋಜನೆಯಡಿ ಕೃಷಿ ಪಂಡಿತ ಪ್ರಶಸ್ತಿಗೆ ಕೃಷಿಯಲ್ಲಿ ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರುಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಆಡು, ಕುರಿ, ಮೊಲ ಇತ್ಯಾದಿ ಸಾಕಾಣಿಕೆ ಚಟುವಟಿಕೆಗಳಲ್ಲಿ ತೊಡಗಿರುವ ರೈತ ಹಾಗೂ ರೈತ ಮಹಿಳೆರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಆಯಾ ಹಾಗೂ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇನಾ ವಾಹನ ಉರುಳಿ ಮೂವರು ಯೋಧರು ಹುತಾತ್ಮ



**ಉಧಂಪುರ:** ಜಮ್ಮು ಮತ್ತು ಕಾಶ್ಮೀರದ ಉಧಂಪುರದಲ್ಲಿ ಭೀಕರ ಅಪಘಾತ ಸಂಭವಿಸಿದೆ. ಉಧಂಪುರದ ಕಂಡ್ವಾ–ಬಸಂತ್‌ಗಢ ಪ್ರದೇಶದಲ್ಲಿ ಸಿಆರ್‌ಪಿಎಫ್ ವಾಹನ ಅಪಘಾತಕ್ಕೀಡಾಗಿದೆ. ಇದರಲ್ಲಿ ಮೂವರು ಹುತಾತ್ಮರಾಗಿದ್ದಾರೆ ಮತ್ತು ಅನೇಕ ಸೈನಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.

ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಘಟನೆಗೆ ಸಂಬಂಧಿಸಿದಂತೆ, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಈ ಘಟನೆಯ ಬಗ್ಗೆ ತಿಳಿಸಿ ಮತ್ತು ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಹೇಳಿದ್ದಾರೆ. ಇಲ್ಲಿಯವರೆಗೆ ಈ ಘಟನೆಯಲ್ಲಿ ಮೂವರು ಸೈನಿಕರು ಹುತಾತ್ಮರಾಗಿದ್ದಾರೆ.

ಇಂದು ಬೆಳಿಗ್ಗೆ 10.30 ರ ಸುಮಾರಿಗೆ, ಜಮ್ಮು ಮತ್ತು ಕಾಶ್ಮೀರದ ಉಧಂಪುರ ಜಿಲ್ಲೆಯ ಕಂಡ್ವಾದಿಂದ ಬಸಂತ್‌ಗಢಕ್ಕೆ ಹೋಗುತ್ತಿದ್ದಾಗ, 187 ನೇ ಬೆಟಾಲಿಯನ್‌ನ ವಾಹನ ಅಪಘಾತಕ್ಕೀಡಾಗಿ ಕಂದಕಕ್ಕೆ ಬಿದ್ದಿದೆ ಎಂದು ಸಿಆರ್‌ಪಿಎಫ್ ತಿಳಿಸಿದೆ, ಅದರಲ್ಲಿ 18 ಸೈನಿಕರು ಪ್ರಯಾಣಿಸುತ್ತಿದ್ದರು. ವಿಮಾನದಲ್ಲಿದ್ದ ಎಲ್ಲಾ ಸೈನಿಕರು ಗಾಯಗೊಂಡಿದ್ದಾರೆ ಮತ್ತು ಇಬ್ಬರು ಸೈನಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಕಾಂಡ್ವಾ–ಬಸಂತ್‌ಗಢ ಪ್ರದೇಶದಲ್ಲಿ ಸಿಆರ್‌ಪಿಎಫ್ ವಾಹನ ಅಪಘಾತದ ಸುದ್ದಿ ಕೇಳಿ ದುಃಖವಾಯಿತು. ಹಲವಾರು ಧೈರ್ಯಶಾಲಿ ಸಿಆರ್‌ಪಿಎಫ್ ಜವಾನರು ವಾಹನದಲ್ಲಿ ಪ್ರಯಾಣಿಸುತ್ತಿದ್ದರು.

ನಾನು ಜಿಲ್ಲಾ ಮ್ಯಾಜಿಸ್ಟ್ರೇಟ್ ಸಲೋನಿ ರೈ ಅವರೊಂದಿಗೆ ಮಾತನಾಡಿದ್ದೇನೆ, ಅವರು ಪರಿಸ್ಥಿತಿಯನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಮತ್ತು ನನಗೆ ಮಾಹಿತಿ ನೀಡುತ್ತಿದ್ದಾರೆ.

ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಗಿದೆ. ಸ್ಥಳೀಯ ಜನರು ಸ್ವಯಂಪ್ರೇರಣೆಯಿಂದ ಸಹಾಯ ಮಾಡಲು ಮುಂದೆ ಬಂದಿದ್ದಾರೆ. ಸಾಧ್ಯವಿರುವ ಎಲ್ಲ ಸಹಾಯವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಸಾಮಾಜಿಕ ಮಾಧ್ಯಮದಲ್ಲಿ ಬರೆದಿದ್ದಾರೆ.

## ನಗದು ಪತ್ತೆ ವಿವಾದ

# ಆಂತರಿಕ ತನಿಖಾ ಸಮಿತಿ ವರದಿ ರದ್ದುಗೊಳಿಸುವಂತೆ ಕೋರಿ ನ್ಯಾ.ಯಶವಂತ್ ವರ್ಮಾ ಸಲ್ಲಿಸಿದ್ದ ಅರ್ಜಿ ವಜಾ

**ನವದೆಹಲಿ:** ನಗದು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ತಮ್ಮನ್ನು ತಪ್ಪಿತಸ್ಥರೆಂದು ಘೋಷಿಸಿದ ಆಂತರಿಕ ತನಿಖಾ ಸಮಿತಿಯ ವರದಿಯನ್ನು ರದ್ದುಗೊಳಿಸುವಂತೆ ಕೋರಿ ಅಲಹಾಬಾದ್ ಹೈಕೋರ್ಟ್‌ನ ನ್ಯಾಯಮೂರ್ತಿ ಯಶವಂತ್ ವರ್ಮಾ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಗುರುವಾರ ತಿರಸ್ಕರಿಸಿದೆ.

ನ್ಯಾಯಮೂರ್ತಿ ವರ್ಮಾ ಅವರ ನಡವಳಿಕೆಯು ವಿಶ್ವಾಸ ಮೂಡಿಸುವಲ್ಲಿ ವಿಫಲವಾಗಿದೆ ಎಂದು ಗಮನಿಸಿದ ನ್ಯಾಯಪೀಠ, ಅವರ ಅರ್ಜಿಯು ಪರಿಗಣನೆಗೆ ಅರ್ಹವಲ್ಲ ಎಂದು ತೀರ್ಮಾನಿಸಿತು. ಆಗಿನ ಭಾರತದ ಮುಖ್ಯ ನ್ಯಾಯಮೂರ್ತಿ (CJI) ರಚಿಸಿದ ಆಂತರಿಕ ತನಿಖೆ ಮತ್ತು ನ್ಯಾಯಾಧೀಶರ ಸಮಿತಿಯು ಸರಿಯಾದ ಪ್ರಕ್ರಿಯೆಯನ್ನು ಅನುಸರಿಸಿದೆ ಎಂದು ನ್ಯಾಯಾಲಯ ಹೇಳಿದೆ. ನ್ಯಾಯಮೂರ್ತಿ ವರ್ಮಾ ಅವರನ್ನು ಪದಚ್ಯುತಗೊಳಿಸಲು ಶಿಫಾರಸು ಮಾಡಿದ ಸಮಿತಿಯ ವರದಿಯನ್ನು ಪ್ರಧಾನಿ ಮತ್ತು ರಾಷ್ಟ್ರಪತಿಗಳಿಗೆ ರವಾನಿಸುವುದು ಸಾಂವಿಧಾನಿಕವಾಗಿ ಮಾನ್ಯವಾಗಿದೆ ಎಂದು ತೀರ್ಪು ನೀಡಿದೆ.



ಸಿಜೆಐ ಮತ್ತು ನ್ಯಾಯಾಧೀಶರ ಸಮಿತಿಯು ಫೋಟೋ–ವಿಡಿಯೊಗಳನ್ನು ಅಪ್‌ಲೋಡ್ ಮಾಡುವುದನ್ನು ಹೊರತುಪಡಿಸಿ ಪ್ರಕ್ರಿಯೆಯನ್ನು ಕಟ್ಟುನಿಟ್ಟಾಗಿ ಅನುಸರಿಸಿದೆ, ಅದು ಅಗತ್ಯವಿಲ್ಲ ಎಂದು ನಾವು ಹೇಳಿದ್ದೆವು. ಆದರೆ ನೀವು ಆಗ ಅದನ್ನು ಪ್ರಶ್ನಿಸದ ಕಾರಣ ನಾವು ಕ್ರಮ ಕೈಗೊಳ್ಳಲಿಲ್ಲ ಎಂದು ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಅಗಸ್ಟೀನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಸುಪ್ರೀಂ ಕೋರ್ಟ್‌ನ ದ್ವಿಸದಸ್ಯ ಪೀಠವು ತೀರ್ಪಿನಲ್ಲಿ ತಿಳಿಸಿದೆ.

ಇಂದಿನ ಅರ್ಜಿ ತಿರಸ್ಕಾರದ ನಂತರ, ನ್ಯಾಯಮೂರ್ತಿ ವರ್ಮಾ ಅವರ ಪರ್ಯಾಯ ಕಾನೂನು ಆಯ್ಕೆಯೆಂದರೆ ಇಂದು ತೀರ್ಪು ನೀಡಿದ ಅದೇ ಪೀಠದ ಮುಂದೆ ಪುನರ್ವಿಮರ್ಶೆ ಮತ್ತು ಪರಿಹಾರಾತ್ಮಕ ಅರ್ಜಿಯನ್ನು ಸಲ್ಲಿಸುವುದು. ನ್ಯಾಯಮೂರ್ತಿ ವರ್ಮಾ ಅವರು ತಮ್ಮ ಹಿರಿಯ ವಕೀಲರಾದ ಕಪಿಲ್ ಸಿಬಲ್ ಮತ್ತು ಮುಕುಲ್ ರೋಹಟ್ಗಿ ಮೂಲಕ ಎತ್ತಿದ ಎಲ್ಲಾ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ತಿರಸ್ಕರಿಸಿತು. ನ್ಯಾಯಮೂರ್ತಿ ವರ್ಮಾ ಅವರ ವಾದಗಳನ್ನು ಆಲಿಸಿದ ನಂತರ, ನ್ಯಾಯಮೂರ್ತಿಗಳಾದ ದತ್ತ ಮತ್ತು ಮಸಿಹ್ ಅವರಿದ್ದ ಸುಪ್ರೀಂ ಕೋರ್ಟ್‌ನ ಇಬ್ಬರು ನ್ಯಾಯಾಧೀಶರ ಪೀಠವು ಜುಲೈ 30 ರಂದು ತೀರ್ಪನ್ನು ಕಾಯ್ದಿರಿಸಿತ್ತು. ನ್ಯಾಯಮೂರ್ತಿ ವರ್ಮಾ ಅವರ ಮೇಲ್ಮನವಿ ತೀರ್ಪನ್ನು ಕಾಯ್ದಿರಿಸುವ ಮೊದಲು, ಸರಿಯಾದ ಪ್ರಕ್ರಿಯೆಯನ್ನು ಅನುಸರಿಸಲಾಗಿದೆ ಎಂಬ ಸಂದೇಶ ಸಮಾಜಕ್ಕೆ ಹೋಗಬೇಕು ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿತು.

# ಸಹಜ ಸ್ಥಿತಿಯತ್ತ ಧರ್ಮಸ್ಥಳ
## ಮಟ್ಟಣ್ಣನವರ್ ಸೇರಿ ಹಲವರ ವಿರುದ್ಧ ಎಫ್‌ಐಆರ್

**ಮಂಗಳೂರು:** ಧರ್ಮಸ್ಥಳದ ಬಳಿ ಎಸ್‌ಐಟಿ ನಡೆಸುತ್ತಿರುವ ಅಸ್ಥಿಪಂಜರ ಶೋಧದ ಪ್ರದೇಶದಲ್ಲಿ ನಿನ್ನೆ ನಡೆದ ಅನಪೇಕ್ಷಿತ ಬೆಳವಣಿಗೆಗಳಿಂದ ಉಂಟಾಗಿದ್ದ ಉದ್ವಿಗ್ನ ಪರಿಸ್ಥಿತಿಯು ಸಹಜ ಸ್ಥಿತಿಗೆ ಮರಳಿದೆ.

ನಿನ್ನೆ ಕೆಲವು ಯೂಟ್ಯೂಬರ್‌ಗಳ ಕಾರ್ಯವೈಖರಿಯನ್ನು ಸ್ಥಳೀಯರು ಪ್ರಶ್ನಿಸಿ ಯೂಟ್ಯೂಬರ್‌ಗಳು ಆಸ್ಪತ್ರೆಗೆ ದಾಖಲಾಗಿದ್ದು, ಈ ಕುರಿತು ವರದಿ ಮಾಡಲು ಉಜಿರೆ ಆಸ್ಪತ್ರೆಗೆ ಹೋಗಿದ್ದ ಟಿವಿ ವರದಿಗಾರರ ಮೇಲೆ ಒಂದು ಗುಂಪು ದಾಳಿ ನಡೆಸಿತ್ತು.

ಈ ದಾಳಿಗೆ ಸಂಬಂಧಿಸಿ ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮರೋಡಿ, ಯೂಟ್ಯೂಬರ್ ಸಮೀರ್ ವಿರುದ್ಧ ಬೆಳ್ತಂಗಡಿ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಖಾಸಗಿ ವಾಹಿನಿಯ ಪತ್ರಕರ್ತರ ಮೇಲೆ ಹಲ್ಲೆ ನಡೆಸಿದ ಘಟನೆಗೆ ಸಂಬಂಧಿಸಿದಂತೆ ಬೆಳ್ತಂಗಡಿ ಠಾಣೆಯಲ್ಲಿ ಬಿಎನ್ ಎಸ್ ಸೆಕ್ಷನ್ ಅನ್ವಯ 115(2), 189(2), 191(2), 351(2), 352, 190 ಅಡಿ ಎಫ್‌ಐಆರ್ ದಾಖಲಾಗಿದೆ. ಎಫ್‌ಐಆರ್‌ನಲ್ಲಿ ಗಿರೀಶ್ ಮಟ್ಟೆಣ್ಣವರ್ (ಎ1), ಮಹೇಶ್ ಶೆಟ್ಟಿ ತಿಮರೋಡಿ (ಎ2), ಯೂಟ್ಯೂಬರ್ ಸಮೀರ್(ಎ3), ಜಯಂತ್(ಎ4) ಇತರರ ಹೆಸರನ್ನು ಉಲ್ಲೇಖಿಸಲಾಗಿದೆ.

ಸಂಜೆ ಮೂವರು ಯೂಟ್ಯೂಬರ್‌ಗಳನ್ನು ನೇತ್ರಾವತಿಯ ಪಾಂಗಳ ಎಂಬಲ್ಲಿ ತಡೆಯಲಾಗಿತ್ತು. ಇಲ್ಲಿ ಉದ್ವಿಗ್ನ ಸ್ಥಿತಿ ಉಂಟಾಗಿದ್ದು, ತಡರಾತ್ರಿ ಪೊಲೀಸ್ ಠಾಣೆಯ ಎದುರು ಪರ–ವಿರೋಧ ಬಣದವರು ಪ್ರತಿಭಟನೆ ನಡೆಸಿದ್ದಾರೆ. ಉಜಿರೆಯಲ್ಲಿ ಯೂಟ್ಯೂಬರ್ಸ್ ಬೆಂಬಲಿಗರು ಕರ್ತವ್ಯದಲ್ಲಿದ್ದ ಪತ್ರಕರ್ತರ ಮೇಲೆಯೇ ಹಲ್ಲೆ ಮಾಡಿದ್ದಾರೆ.



ಹಲವಾರು ಪತ್ರಕರ್ತರು ಸ್ಥಳೀಯ ಬೆಳವಣಿಗೆಯನ್ನು ನಿರಂತರ ವರದಿ ಮಾಡುತ್ತಿದ್ದು, ಎರಡು ಗುಂಪುಗಳ ನಡುವಿನ ಜಗಳಕ್ಕೆ ಇದೀಗ ಪತ್ರಕರ್ತರು ಗುರಿಯಾಗಿದ್ದಾರೆ. ವರದಿ ಮಾಡಲು ತೆರಳಿದ್ದಾಗಲೇ ಯೂಟ್ಯೂಬರ್ಸ್ ಬೆಂಬಲಿಗರು ಖಾಸಗಿ ವಾಹಿನಿಯ ವರದಿಗಾರ ಮತ್ತು ಕ್ಯಾಮೆರಾಮ್ಯಾನ್ ಮೇಲೆ ಮನ ಬಂದಂತೆ ದಾಳಿ ನಡೆಸಿದ್ದಾರೆ.

ಧರ್ಮಸ್ಥಳದಲ್ಲಿ ನಡೆದ ಯುಟ್ಯೂಬರ್‌ಗಳ ಮೇಲಿನ ಹಲ್ಲೆ ಹಾಗು ಉಜಿರೆಯಲ್ಲಿ ಖಾಸಗಿ ಚಾನೆಲ್ ವರದಿಗಾರನ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ದೂರುಗಳನ್ನು ಸ್ವೀಕರಿಸಿದ್ದು, ಈ ಬಗ್ಗೆ ಪ್ರಕರಣ ದಾಖಲಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ಅರುಣ್ ಕೆ. ತಿಳಿಸಿದಾರೆ.

ಅದೇ ರೀತಿ ಧರ್ಮಸ್ಥಳದ ಪಾಂಗಳದಲ್ಲಿ ಹಾಗೂ ಪೊಲೀಸ್ ಠಾಣಾ ಆವರಣದಲ್ಲಿ ಹಾಗೂ ಉಜಿರೆಯ ಖಾಸಗಿ ಆಸ್ಪತ್ರೆಯ ಮುಂದೆ ಕಾನೂನು ಬಾಹಿರವಾಗಿ ಗುಂಪು ಸೇರಿದವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದರು,ಹಲ್ಲೆಗೆ ಒಳಗಾಗಿರುವವರು ದಾಖಲಾಗಿರುವ ಆಸ್ಪತ್ರೆಯ ವೈದ್ಯರಿಂದ ಮಾಹಿತಿ ಪಡೆಯಲಾಗಿದ್ದು ಯಾವುದೇ ಗಂಭೀರ ಗಾಯಗಳಿಲ್ಲ ಎಂದು ತಿಳಿಸಿದ್ದಾರೆ.

ನಿನ್ನೆ ನಡೆದ ಘಟನೆಗೆ ಸಂಬಂಧಿಸಿದಂತೆ ವೀಡಿಯೋಗಳನ್ನು ಪರಿಶೀಲಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ತಪ್ಪಿತಸ್ಥರ ವಿರುದ್ಧ ಕ್ರಮ:ಸಿಎಂ

ಧರ್ಮಸ್ಥಳದಲ್ಲಿ ನಿನ್ನೆ ನಡೆದ ಗುಂಪು ಘರ್ಷಣೆಗೆ ಸಂಬಂಧಿಸಿದಂತೆ ತಪ್ಪು ಮಾಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿಂದು ಸ್ವಾತಂತ್ರ್ಯೋತ್ಸವದ ಫಲಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಗಲಾಟೆ ವಿಚಾರದಲ್ಲಿ ಯಾರೇ ತಪ್ಪು ಮಾಡಿದ್ದರೂ ಕಾನೂನು ರೀತ್ಯಾ ಕ್ರಮ ಆಗುತ್ತದೆ ಎಂದು ಹೇಳಿದರು.

ಧರ್ಮಸ್ಥಳದಲ್ಲಿ ನಿನ್ನೆ ಗುಂಪು ಘರ್ಷಣೆ ನಡೆದಿದೆ. ಇದರಲ್ಲಿ ಯಾರೇ ತಪ್ಪು ಮಾಡಿದ್ದರೂ ಕಾನೂನಿನಂತೆ ಶಿಕ್ಷೆ ನೀಡಲಾಗುವುದು. ಕಾನೂನು ಎಲ್ಲರಿಗೂ ಒಂದೇ ಎಂದು ಅವರು ತಿಳಿಸಿದರು.

# ಗುಂಪು ಘರ್ಷಣೆ: ವರದಿ ನೀಡಲು ಸೂಚನೆ

**ಬೆಂಗಳೂರು:** ಧರ್ಮಸ್ಥಳದಲ್ಲಿ ನಿನ್ನೆ ನಡೆದ ಗುಂಪು ಘರ್ಷಣೆ ಸಂಬಂಧ ವರದಿ ನೀಡುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚನೆ ನೀಡಿದ್ದೇನೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.



ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದಲ್ಲಿ ನಿನ್ನೆ ಎರಡು ಗುಂಪುಗಳ ನಡುವೆ ಘರ್ಷಣೆಯಾಗಿರುವ ಮಾಹಿತಿ ಗೊತ್ತಾಗಿದೆ. ಈ ಘರ್ಷಣೆಗೆ ಕಾರಣ ಏನು, ಏಕೆ ಘರ್ಷಣೆಯಾಗಿದೆ, ಘರ್ಷಣೆಯ ಉದ್ದೇಶ ಏನು ಎಂಬ ಬಗ್ಗೆ ವರದಿ ನೀಡಲು ಪೊಲೀಸರಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಧರ್ಮಸ್ಥಳದಲ್ಲಿ ನಿನ್ನೆ ನಡೆದ ಗುಂಪು ಘರ್ಷಣೆಗೆ ಸಂಬಂಧಿಸಿದಂತೆ ಎರಡು ಗುಂಪಿನವರು ದೂರು ಕೊಟ್ಟಿದ್ದಾರೆ. ಪೊಲೀಸರು ಕ್ರಮ ಕೈಗೊಳ್ಳುತ್ತಾರೆ ಎಂದು ಹೇಳಿದರು. ಧರ್ಮಸ್ಥಳದಲ್ಲಿ ಶವಗಳನ್ನು ಹೂತಿರುವ ಪ್ರಕರಣದಲ್ಲಿ ಸರ್ಕಾರ ಯಾವುದೇ ಹಸ್ತಕ್ಷೇಪ ಮಾಡಿಲ್ಲ, ಮಾಡುವುದೂ ಇಲ್ಲ. ಎಸ್‌ಐಟಿ ರಚನೆ ಮಾಡಿದ್ದೇವೆ, ತನಿಖೆ ನಡೆದಿದೆ ಎಂದರು.

ವ್ಯಕ್ತಿಯೊಬ್ಬರ ಧರ್ಮಸ್ಥಳದ ಸುತ್ತ ಅನೇಕ ಶವ ಹೂತಿದ್ದೇನೆ ಎಂಬ ಮಾಹಿತಿ ನೀಡಿದ್ದ. ಅದರಂತೆ ಸುಮಾರು 13 ಸ್ಥಳಗಳಲ್ಲಿ ಉತ್ಖನನ ಕಾರ್ಯ ನಡೆದಿದೆ. 6ನೇ ಜಾಗದಲ್ಲಿ ಪುರುಷನ ಅಸ್ಥಿಪಂಜರ ಸಿಕ್ಕಿದೆ. ಬೇರೆ ಬೇರೆ ಕಡೆಯೂ ಮೂಳೆಗಳು ಸಿಕ್ಕಿವೆ. ಇದನ್ನೆಲ್ಲಾ ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ. ಎಸ್‌ಐಟಿ ತನಿಖೆಯಿಂದ ಎಲ್ಲ ಸತ್ಯಗಳು ಹೊರಬರುತ್ತದೆ ಎಂದರು.

# ಇಂದು ಪೂರ್ವಭಾವಿ ಸಭೆ

**ಬಳ್ಳಾರಿ:** ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ 110ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಆ.20 ರಂದು ಜಿಲ್ಲಾ ಕೇಂದ್ರದಲ್ಲಿ ಆಚರಣೆ ಕುರಿತಂತೆ ಆ.08 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಕೃಷಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕೃಷಿ ಪಂಡಿತ ಪ್ರಶಸ್ತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ಇಲಾಖೆಯ ಕೆ–ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು ಅಳವಡಿಸಲಾಗಿದ್ದು, ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಅರ್ಜಿ ಸಲ್ಲಿಸಬಹುದು.

ಅಗತ್ಯ ದಾಖಲೆಗಳೊಂದಿಗೆ ತಮ್ಮ ಎಫ್‌ಐಡಿಯನ್ನು ನಮೂದಿಸಬೇಕು. ಅರ್ಜಿ ಸಲ್ಲಿಸಲು ಆ.30 ಕೊನೆಯ ದಿನವಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂಮಿ ನೀಡದ ರಾಜ್ಯ ಸರ್ಕಾರ

# ಶಿವಮೊಗ್ಗ–ಹರಿಹರ ನಡುವಿನ ರೈಲ್ವೆ ಯೋಜನೆ ಸ್ಥಗಿತ..!

**ನವದೆಹಲಿ:** ಕರ್ನಾಟಕದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರವು ಉಚಿತವಾಗಿ ಭೂಮಿ ನೀಡಲು ಹಾಗೂ ಯೋಜನಾ ವೆಚ್ಚದ ಶೇ 50:50 ವೆಚ್ಚ ಭರಿಸಲು ನಿರಾಕರಿಸಿದ ಕಾರಣಕ್ಕೆ ಶಿವಮೊಗ್ಗ–ಹರಿಹರ ನಡುವಿನ ರೈಲ್ವೆ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಹೇಳಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಕೇಳಿರುವ ಪ್ರಶ್ನೆಗೆ ಸಚಿವರು ಉತ್ತರ ನೀಡಿದರು.

ಕರ್ನಾಟಕದ ರೈಲ್ವೇ ಯೋಜನೆಗಳಿಗೆ ಅಗತ್ಯವಿರುವ ಒಟ್ಟು 8,969 ಹೆಕ್ಟೇರ್ ಭೂಮಿಯಲ್ಲಿ ಕೇವಲ 5,657 ಹೆಕ್ಟೇರ್ (ಶೇ.63) ಭೂಮಿಯನ್ನು ಮಾತ್ರ ಸ್ವಾಧೀನಪಡಿಸಿಕೊಳ್ಳಲಾಗಿದೆ. ಯೋಜನೆಗಳಿಗೆ ಒಟ್ಟು 3,312 ಹೆಕ್ಟೇರ್ ಭೂಮಿಯನ್ನು ಇನ್ನೂ ಸ್ವಾಧೀನಪಡಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು.

ರಾಜ್ಯ ಸರಕಾರ 832 ಕೋಟಿ ವೆಚ್ಚದಲ್ಲಿ ಭೂಮಿ ವಶಪಡಿಸಿಕೊಳ್ಳಬೇಕಿತ್ತು. ಆದರೆ, ಸರಕಾರ ಅಸಮರ್ಥತೆ ತೋರಿದ್ದರಿಂದ ಯೋಜನೆ ಸ್ಥಗಿತಗೊಂಡಿದೆ. ಶಿವಮೊಗ್ಗ–ರಾಣೆಬೆನ್ನೂರು, ಧಾರವಾಡ, ವೈಟ್‌ಫೀಲ್ಡ್–ಕೋಲಾರ, ಹಾಸನ–ಬೇಲೂರು ಮಾರ್ಗಗಳು ಸಹ ಸ್ಥಗಿತಗೊಂಡಿವೆ ಎಂದು ತಿಳಿಸಿದರು.



ಹರಿಹರ –ಶಿವಮೊಗ್ಗ (79 ಕಿಮೀ) ರೈಲು ಯೋಜನೆಯನ್ನು ಶೇ.50ರ ಅನುಪಾತದ ಯೋಜನೆಯಡಿ ಮಂಜೂರು ಮಾಡಲಾಗಿತ್ತು. ರಾಜ್ಯ ಸರಕಾರ 832 ಕೋಟಿ ವೆಚ್ಚದಲ್ಲಿ ಯೋಜನೆಗೆ ಬೇಕಾದ ಭೂಮಿಯನ್ನು ವಶಪಡಿಸಿಕೊಂಡು ಒದಗಿಸಬೇಕಿದೆ. ಒಟ್ಟು 488 ಹೆ. ಭೂಮಿಯನ್ನು ಒದಗಿಸಲು ರೈಲ್ವೆ ಇಲಾಖೆ ಕರ್ನಾಟಕ ಸರಕಾರವನ್ನು ಕೋರಿತ್ತು. ಆದರೆ, ಈ ವೆಚ್ಚವನ್ನು ಹಂಚಿಕೊಳ್ಳಲು ಮತ್ತು ಉಚಿತವಾಗಿ ಭೂಮಿಯನ್ನು ಒದಗಿಸಲು ಕರ್ನಾಟಕ ಸರಕಾರ ಅಸಮರ್ಥತೆ ತೋರಿಸಿದೆ, ಈ ಕಾರಣಕ್ಕೆ ಯೋಜನೆ ಸ್ಥಗಿತಗೊಂಡಿದೆ ಎಂದರು.

ಇದೇ ವೇಳೆ ಕರ್ನಾಟಕದಲ್ಲಿ ಈ ರೀತಿ ಭೂಮಿ ಸಮಸ್ಯೆಯಿಂದ ಸ್ಥಗಿತಗೊಂಡಿರುವ ಯೋಜನೆಗಳ ವಿವರಗಳನ್ನು ಸಚಿವರು ನೀಡಿದರು.

ಶಿವಮೊಗ್ಗ–ರಾಣೆಬೆನ್ನೂರು ಹೊಸ ಮಾರ್ಗಕ್ಕಾಗಿ (96 ಕಿಮೀ) 226 ಹೆಕ್ಟೇರ್ ಸ್ವಾಧೀನಪಡಿಸಿಕೊಂಡರೆ, 333 ಹೆಕ್ಟೇರ್ ಬಾಕಿ ಇದೆ. ಬೆಳಗಾವಿ – ಧಾರವಾಡ ಹೊಸ ಮಾರ್ಗಕ್ಕೆ (73 ಕಿ.ಮೀ.), 531 ಹೆಕ್ಟೇರ್ ಭೂಮಿ ಅಗತ್ಯವಿದ್ದು, ವೈಟ್‌ಫೀಲ್ಡ್ – ಕೋಲಾರ ಹೊಸ ಮಾರ್ಗಕ್ಕೆ (53 ಕಿ.ಮೀ.) 337 ಹೆಕ್ಟೇರ್ ಭೂಮಿ ಅಗತ್ಯವಿದೆ. ಅದೇ ರೀತಿ 206 ಹೆಕ್ಟೇರ್ ಅಗತ್ಯವಿರುವ ಹಾಸನ – ಬೇಲೂರು ಹೊಸ ಮಾರ್ಗಕ್ಕೆ (27 ಕಿ.ಮೀ.) ಒಂದೇ ಒಂದು ಹೆಕ್ಟೇರ್ ಭೂಮಿಯನ್ನೂ ಸ್ವಾಧೀನಪಡಿಸಿಕೊಂಡಿಲ್ಲ ಎಂದು ಮಾಹಿತಿ ನೀಡಿದರು.

ರೈಲ್ವೆ ಯೋಜನೆಗಳನ್ನು ಪೂರ್ಣಗೊಳಿಸಬೇಕೆಂದರೆ ಅದು, ರಾಜ್ಯ ಸರ್ಕಾರದ ತ್ವರಿತ ಭೂಸ್ವಾಧೀನ, ಅರಣ್ಯ ಇಲಾಖೆಯ ಅಧಿಕಾರಿಗಳಿಂದ ಅರಣ್ಯ ತೆರವು, ಸ್ಥಳಾಂತರ, ವಿವಿಧ ಅಧಿಕಾರಿಗಳಿಂದ ಶಾಸನಬದ್ಧ ಅನುಮತಿಗಳು, ಪ್ರದೇಶದ ಭೌಗೋಳಿಕ ಮತ್ತು ಭೌಗೋಳಿಕ ಪರಿಸ್ಥಿತಿಗಳು, ಯೋಜನಾ ಸ್ಥಳಗಳ ಪ್ರದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ, ನಿರ್ದಿಷ್ಟ ಯೋಜನೆಗಳ ಕುರಿತ ಮಾಹಿತಿ ಸೇರಿದಂತೆ ಹಳವು ಅಂಶಗಳನ್ನು ಅವಲಂಬಿಸಿರುತ್ತದೆ. ಈ ಎಲ್ಲಾ ಅಂಶಗಳು ಯೋಜನೆಗಳ ಪೂರ್ಣಗೊಳಿಸುವ ಸಮಯ ಮತ್ತು ವೆಚ್ಚದ ಮೇಲೆ ಪರಿಣಾಮ ಬೀರುತ್ತವೆ ಎಂದು ಹೇಳಿದರು.

# ವಿಕ್ಟೋರಿಯಾ ಆಸ್ಪತ್ರೆಗೆ ಸಿಎಂ ದಿಢೀರ್ ಭೇಟಿ
## ಕಣ್ಣಿಗೆ ಕಾಣದ ಹಲವು ಸತ್ಯ; ವಾಸ್ತವತೆ ಮರೆಮಾಚಿದ ಆರೋಪ!

**ಬೆಂಗಳೂರು:** ಸೇವೆಗಳನ್ನು ಪರಿಶೀಲಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ವಿಕ್ಟೋರಿಯಾ ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ ನೀಡಿದ್ದು, ಈ ವೇಳೆ ಅಲ್ಲಿನ ಸಿಬ್ಬಂದಿಗಳು ಮುಖ್ಯಮಂತ್ರಿಗಳಿಗೆ ವಾಸ್ತವ ಸ್ಥಿತಿಯನ್ನು ಮರೆ ಮಾಡಿ, ಎಲ್ಲವೂ ಸರಿಯಿದೆ ಎಂಬಂತೆ ಬಿಂಬಿಸಿದ್ದಾರೆಂದು ಆರೋಪಗಳು ಕೇಳಿ ಬಂದಿವೆ.

ಆಸ್ಪತ್ರೆ ಪರಿಶೀಲನಗೆ ಮುಖ್ಯಮಂತ್ರಿಗಳು ಬಂದಾಗ ರೋಗಿಗಳು ಹಾಗೂ ಅವರ ಕುಟುಂಬಸ್ಥರು ಭೇಟಿಯಾಗಲು ಅಧಿಕಾರಿಗಳು ಅವಕಾಶ ನೀಡಲಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿವೆ.

ಮುಖ್ಯಮಂತ್ರಿ ವಾರ್ಡ್‌ಗಳ ಮೂಲಕ ನಡೆದು, ಸಿಬ್ಬಂದಿಯನ್ನು ಭೇಟಿಯಾಗಿ ಸೇವೆಗಳನ್ನು ಪರಿಶೀಲಿಸಿದರು, ಆದರೆ, ರೋಗಿಗಳು, ಸಹಾಯಕರೊಂದಿಗೆ ಮಾತನಾಡಲಿಲ್ಲ.

ಹಿರಿಯ ವೈದ್ಯಕೀಯ ಸಿಬ್ಬಂದಿ, ಪೊಲೀಸರು ಮತ್ತು ಭದ್ರತಾ ಸಿಬ್ಬಂದಿ ಮುಖ್ಯಮಂತ್ರಿಗಳು ಹಾಗೂ ಸಚಿವರನ್ನು ಸುತ್ತುವರೆದಿದ್ದರು.

ಹೊರರೋಗಿ ವಿಭಾಗ, ಹೆರಿಗೆ ವಾರ್ಡ್ ಮತ್ತು ಇತರ ವಿಭಾಗಗಳು ಸೇರಿದಂತೆ ಆಸ್ಪತ್ರೆಯ ಕೆಲವು ಭಾಗಗಳ ಮೂಲಕ



ಮುಖ್ಯಮಂತ್ರಿಗಳನ್ನು ಕರೆದೊಯ್ಯಲಾಯಿತು, ಆದರೆ, ವಾರ್ಡ್‌ಗಳ ಹೊರಗೆ ಕಾಯುತ್ತಿದ್ದ ಸಹಾಯಕರು, ಹೊರರೋಗಿ ವಿಭಾಗ ಮತ್ತು ಔಷಧಾಲಯಗಳಲ್ಲಿದ್ದ ರೋಗಿಗಳನ್ನು ಅವರ ಹತ್ತಿರಕ್ಕೆ ಬಿಡಲಿಲ್ಲ. ಮುಖ್ಯಮಂತ್ರಿಗಳು ಬಂದು ಹೋದರಷ್ಟೇ. ನಮ್ಮ ದುಃಸ್ಥಿತಿಯನ್ನು ಯಾರೂ ಕೇಳಲಿಲ್ಲ. ಭೇಟಿಗೆ ಯತ್ನಿಸಿದರೂ ಪೊಲೀಸರು ಮತ್ತು ಭದ್ರತಾ ಸಿಬ್ಬಂದಿಗಳು ನಮ್ಮನ್ನು ದೂರಕ್ಕೆ ತಳ್ಳಿದರು ಎಂದು ಕಳೆದ 12 ದಿನಗಳಿಂದ ತಮ್ಮ ತಾಯಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸುತ್ತಿರುವ ಮಳವಳ್ಳಿಯ ಜಮೀಲ್ ಕರೀಮ್ ಎಂಬುವವರು ಹೇಳಿದ್ದಾರೆ.

ಆಸ್ಪತ್ರೆಯಲ್ಲಿ 2 ವಾರಗಳಿಂದ ತೆರೆದ ಸ್ಥಳದಲ್ಲೇ ಆಹಾರ ಸೇವನೆ, ಸಾರ್ವಜನಿಕ ಶೌಚಾಲಯ ಬಳಕೆ ಮಾಡಿ, ಎಲ್ಲಿ ಸಾಧ್ಯವಾಗುವುದೋ ಅಲ್ಲಿ ಮಲಗುತ್ತಿದ್ದೇನೆ. ಅನೇಕ ಅಟೆಂಡೆಂಟ್‌ಗಳು ಮರಗಳ ಕೆಳಗೆ, ಆಂಬ್ಯುಲೆನ್ಸ್‌ಗಳ ಬಳಿ ಅಥವಾ ತುರ್ತು ಮತ್ತು ಆಘಾತ ಆರೈಕೆ ಮತ್ತು ಒಳರೋಗಿ ವಾರ್ಡ್‌ಗಳಲ್ಲಿ ಗೇಟ್‌ಗಳ ಹಿಂದೆ ಮಲಗುತ್ತಿದ್ದಾರೆ. ಇದರಿಂದ ತುರ್ತು ಪರಿಸ್ಥಿತಿ ಇದ್ದಾಗ ಕೂಡಲೇ ಹೋಗಬಹುದು ಎಂದು ಮತ್ತೊಬ್ಬ ರೋಗಿಯ ಕುಟುಂಬದವರು



ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಾಗುವ ರೋಗಿಗಳ ಸಹಾಯಕರು.

ತಿಳಿಸಿದ್ದಾರೆ.

ಸಿಎಂ ಭೇಟಿ ನೀಡಿದ 2 ಗಂಟೆಗಳ ಬಳಿಕ ಆಸ್ಪತ್ರೆಗೆ ಭೇಟಿ ನೀಡಿ ವಾಸ್ತವ ಸ್ಥಿತಿ ಅರಿಯಲು ಯತ್ನನಡೆಸಿದರು. ಈ ವೇಳೆ ಹಲವಾರು ರೋಗಿಗಳ ಅಟೆಂಡೆಂಟ್‌ಗಳು ನೆಲದ ಮೇಲೆ, ಮೆಟ್ಟಿಲುಗಳ ಮೇಲೆ, ಮರಗಳ ಕೆಳಗೆ ಕುಳಿತಿರುವುದು ಕಂಡು ಬಂದಿತು.

ಮುಖ್ಯಮಂತ್ರಿಗಳ ಮುಂದೆ ಆಸ್ಪತ್ರೆಯ ಸಿಬ್ಬಂದಿ ಎಲ್ಲವೂ ಉತ್ತಮವಾಗಿದೆ ಎಂದು ತೋರಿಸಿದ್ದರೂ. ಅಟೆಂಡೆಂಟ್‌ಗಳ ಕುರಿತು ನಿರ್ಲಕ್ಷ್ಯ ತೋರುತ್ತಿರುವುದು ಕಂಡು ಬಂದಿತು.

ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಅಟೆಂಡೆಂಟ್‌ಗಳಿಗೆ ವಸತಿ ನಿಲಯ ಸೌಲಭ್ಯಗಳಿದ್ದರೂ, ಹೆಚ್ಚಿನ ಜನರಿಗೆ ಅವುಗಳ ಬಗ್ಗೆ ಮಾಹಿತಿಯಿಲ್ಲದಂತಾಗಿದೆ. ತಿಳಿದಿರುವವರಿಗೆ ಪ್ರಶ್ನೆ ಮಾಡಿದರೂ, ಆ ಸ್ಥಳದಲ್ಲಿ ಈಗಾಗಲೇ ಸಾಕಷ್ಟು ಮಂದಿಯಿದ್ದಾರೆಂದು ಹೇಳಿದ್ದಾರೆ.

ನಾವು ಇಡೀ ದಿನ ಹೊರಗಿದ್ದೇವೆ. ಇಲ್ಲಿನ ಭದ್ರತಾ ಸಿಬ್ಬಂದಿಗಳು ಇಲ್ಲಿರಬೇಡಿ, ಅಲ್ಲಿ ಮಲಬೇಡಿ ಎನ್ನುತ್ತಾರೆ. ಆದರೆ ನಾವು ಎಲ್ಲಿಗೆ ಹೋಗಬೇಕು? ಎಂದ ಹಾಸನದ ಮಂಜುನಾಥ್ ಎಂಬುವವರು ಪ್ರಶ್ನಿಸಿದ್ದಾರೆ.

ರಾತ್ರಿಯಲ್ಲಿ, ಅನೇಕ ಅಟೆಂಡೆಂಟ್‌ಗಳು ವಾರ್ಡ್‌ಗಳ ಬಳಿ ಮಲಗಲು ಪ್ರಯತ್ನಿಸುತ್ತಾರೆ, ಆದರೆ, ಆಸ್ಪತ್ರೆಯ ಭದ್ರತಾ ಸಿಬ್ಬಂದಿ ಅಥವಾ ಪೊಲೀಸರು ಅವರನ್ನು ಹೊರಹೋಗುವಂತೆ ಸೂಚಿಸುತ್ತಾರೆ. ಸಿಬ್ಬಂದಿ ಹೋದ ಬಳಿಕ ಮತ್ತೆ ಜನರು ಸ್ಥಳದಲ್ಲಿ ಮಲಗುವುದು, ಕುಳಿತುಕೊಳ್ಳುವುದು ಮಾಡುತ್ತಾರೆಂದು ಹೇಳಿದ್ದಾರೆ.

ಇದಲ್ಲದೆ, ಆಸ್ಪತ್ರೆಯ ಸಿಬ್ಬಂದಿಗಳ ವಿರುದ್ಧ ಲಂಚ ಕೇಳುತ್ತಿರುವ ಆರೋಪ ಕೂಡ ಕೇಳಿ ಬರುತ್ತಿದೆ. ಆಸ್ಪತ್ರೆಯ ಸಿಬ್ಬಂದಿ ಅಥವಾ ಸಹಾಯಕರು ಸ್ಟ್ರೆಚರ್ ಒದಗಿಸಲು ರೂ.100 ಕೇಳುತ್ತಾರೆಂದು ರೋಗಿಗಳ ಕುಟುಂಬ ಸದಸ್ಯರು ಆರೋಪಿಸುತ್ತಿದ್ದಾರೆ.

ಸ್ಟ್ರೆಚರ್ ಒದಗಿಸಲು ರೂ.100 ಕೇಳುತ್ತಾರೆ, ಹಣ ನೀಡಿದ್ದರೆ, ಕಾಯುವಂತೆ ತಿಳಿಸುತ್ತಾರೆ. ಸಾಕಷ್ಟು ಸಮಯ ಕಾಯಿಸುತ್ತಾರೆ. ಈ ಬಗ್ಗೆ ದೂರು ನೀಡಿದರು, ಯಾವುದೇ ಪ್ರಯೋಜನವಿಲ್ಲ ಎಂದು ಶಿವಮೊಗ್ಗದಿಂದ ತಮ್ಮ ತಂದೆಯನ್ನು ಆಸ್ಪತ್ರೆಗೆ ಕರೆತಂದಿರುವ ರಾಜೇಂದ್ರ ಎಂಬುವವರು ಹೇಳಿದ್ದಾರೆ.

## ಎರಡು ವಾಹನ ಮುಟ್ಟುಗೋಲು

**ಚಿಕ್ಕಮಗಳೂರು, ಆ.4:** ಕೊಪ್ಪ ವಲಯ ವ್ಯಾಪ್ತಿಯಲ್ಲಿ ಬೀಟೆ ತುಂಡುಗಳ ಕಳ್ಳ ಸಾಗಾಣಿಕೆಯಲ್ಲಿ ತೊಡಗಿದ್ದ ಬಜಾಜ್ ಪಲ್ಸರ್ ಬೈಕ್ (ಏಂ.18.ಫ.6552) ಹಿರೊ ಹೆಚ್‌ಎಫ್ ಡಿಲಕ್ಸ್ (ಏಂ.18.ಫಿ.6773) ಅನ್ನುಸ್ವತ್ತಿನೊಂದಿಗೆ ವಶಪಡಿಸಿಕೊಂಡು ಜುಲೈ 21 ರಂದು ಮೊಕದ್ದಮೆ ದಾಖಲಿಸಿದ್ದು, ಕರ್ನಾಟಕ ಅರಣ್ಯ ಕಾಯಿದೆ 1963 ರ ಸೆಕ್ಷನ್ 71(ಎ) ಪ್ರಕಾರ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಬೇಕಿದೆ. ವಾಹನಗಳ ಮೇಲೆ ಇರುವ ತಮ್ಮ ಹಕ್ಕು ಬಾಧ್ಯತೆಗಳನ್ನು ರುಜುವಾತುಪಡಿಸುವ ನಿಜವಾದ ಮಾಲೀಕರು ಇದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 30 ದಿನಗಳೊಳಗಾಗಿ ಪ್ರಾಧಿಕಾರದ ಮುಂದೆ ಹಾಜರಾಗಿ ಅಹವಾಲು ಸಲ್ಲಿಸಲು ತಿಳಿಸಿದೆ.

ನಿಗದಿತ ಅವಧಿಯೊಳಗೆ ಯಾವುದೇ ಅಹವಾಲು ಬಾರದೇ ಇದ್ದಲ್ಲಿ 1963ನೇ ಕರ್ನಾಟಕ ಅರಣ್ಯ ಕಾಯಿದೆ 71(ಎ) ಮತ್ತು ತಿದ್ದುಪಡಿಯಾದ ಕಲಂನಡಿಯಲ್ಲಿ ಮೇಲ್ಕಂಡ ವಾಹನವನ್ನು ಪ್ರಕಟಣೆಯೇ ಅಂತಿಮ ನೋಟೀಸು ಎಂದು ಪರಿಗಣಿಸಿ, ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ಕೊಪ್ಪ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಈ. ಶಿವಶಂಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಗೆ ಪ್ರಸ್ತಾವನೆ ಸಲ್ಲಿಸಲು ಸಲಹೆ

**ಚಿಕ್ಕಮಗಳೂರು, ಆ.5:** 2025–26ನೇ ಸಾಲಿನ ಚಿಕ್ಕಮಗಳೂರು ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿಗೆ ಆಸಕ್ತ ಪ್ರೌಢ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರು ಎರಡು ಪ್ರತಿಗಳೊಂದಿಗೆ ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಆಗಸ್ಟ್ 11 ರೊಳಗೆ ಪ್ರಸ್ತಾವನೆ ಸಲ್ಲಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆಪ್ಟಂಬರ್ 13 ರಂದು ರಾಷ್ಟ್ರೀಯ ಲೋಕ ಅದಾಲತ್

ಚಿಕ್ಕಮಗಳೂರು, ಆ.5: ಸೆಪ್ಟಂಬರ್ 13 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿದ್ದು, ಅದಾಲತ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸುವ ಕುರಿತು ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣದ ಪೂರ್ವಭಾವಿ ಲೋಕ ಅದಾಲತ್ ಬೈಠಕ್ ನಡೆಸಲಾಗುತ್ತಿದೆ. ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಈ ಅದಾಲತ್ ಅನ್ನು ಆಯೋಜಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ತಿಳಿಸಿದ್ದಾರೆ.

ಶುಂಠಿ ಎಲೆ ಚುಕ್ಕೆ ರೋಗದ ನಿರ್ವಹಣೆ

ಚಿಕ್ಕಮಗಳೂರು, ಆ.5: ಶುಂಠಿ ಬೆಳೆಗೆ ಎಲೆ ಚುಕ್ಕೆ ರೋಗ ನಿರ್ವಹಣೆಗೆ ಸಂಬಂಧಿಸಿದಂತೆ ತೋಟಗಾರಿಕೆ ಉಪನಿರ್ದೇಶಕರು ಸಲಹೆ ನೀಡಿದ್ದಾರೆ.

ಸಣ್ಣನೆಯ ವೃತ್ತಾಕಾರದ ಅಥವಾ ಗೋಲಾಕಾರದ ತಿಳಿಹಳದಿ ಚುಕ್ಕೆಗಳು ಕಾಣಿಸಿಕೊಂಡು ನಂತರ ಚುಕ್ಕೆಗಳು

## ಸೌರಿಗೆ ನೌಕರರ ಮುಷ್ಕರ: ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ : ಜಿ.ಪರಮೇಶ್ವರ್

**ಬೆಂಗಳೂರು:** ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರು ಇಂದು ರಾಜ್ಯಾದ್ಯಂತ ನಡೆಸುತ್ತಿರುವ ಮುಷ್ಕರಿಂದ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಅಗತ್ಯ ಸುರಕ್ಷತಾ ಕ್ರಮ ಕೈಗೊಂಡಿದ್ದು, ಮುಷ್ಕರದ ಹೊರತಾಗಿ ಕೆಲವು ಬಸ್ ಗಳು ಓಡಾಡುತ್ತಿವೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಎಎನ್ ಐ ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಅವರು, ಸಾರಿಗೆ ನೌಕರರ ಮುಷ್ಕರ ನಡೆಯುತ್ತಿದೆ. ಆದರೆ ಇಲ್ಲಿಯವರೆಗೂ ಯಾವುದೇ ದೊಡ್ಡ ಅಹಿತಕರ ಘಟನೆಗಳು ನಡೆದಿಲ್ಲ. ಪೊಲೀಸರು ಈಗಾಗಲೇ ಸೂಕ್ತ ಭದ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದರು.

ಸಂಪೂರ್ಣ ಬಂದ್ ಆಗಿದ್ದರೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿತ್ತು. ಸಾರಿಗೆ ನೌಕರರ ಒಂದು ಒಕ್ಕೂಟ ಅಥವಾ ಗುಂಪೊಂದು ಬಸ್ ಗಳ ಕಾರ್ಯಾಚರಣೆ ಮಾಡುತ್ತಿದ್ದು, ಅಂತಹ ಯಾವುದೇ ತೊಂದರೆ ಆಗಿಲ್ಲ ಎಂದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಎಲ್ಲಾ ಬಿಎಂಟಿಸಿ ಬಸ್ ಗಳು ಸಂಚರಿಸುತ್ತಿವೆ. ಮುಷ್ಕರದ ಹೊರತಾಗಿಯೂ ಶೇ. 40 ರಷ್ಟು ಕೆಎಸ್ ಆರ್ ಟಿಸಿ ಬಸ್ ಗಳು ಓಡಾಡುತ್ತಿವೆ. ಮುಷ್ಕರದ ಸಂಬಂಧ ಅರ್ಜಿಯನ್ನೊಂದರ ವಿಚಾರಣೆ ನಡೆಸಿದ ಹೈಕೋರ್ಟ್, ಮುಷ್ಕರವನ್ನು ಒಂದು ದಿನ ಮುಂದೂಡುವಂತೆ ಹೇಳಿತ್ತು. ಆದಾಗ್ಯೂ ಕೋರ್ಟ್ ಆದೇಶ ಉಲ್ಲಂಘಿಸಿ ಕೆಲ ನೌಕರರು ಮುಷ್ಕರ ನಡೆಸುತ್ತಿದ್ದಾರೆ.

# ತಾಯಿ ಹಾಲಿನ ಮಹತ್ವ ತಿಳಿಸುವುದು ಸ್ತನ್ಯಪಾನ ಸಪ್ತಾಹದ ಉದ್ದೇಶ : ಡಾ. ಅಶ್ವಥ್‌ಬಾಬು

**ಚಿಕ್ಕಮಗಳೂರು**–ತಾಯಿ ಹಾಲು ಅದರ ಮಹತ್ವ ಮಗುವಿನ ಮೇಲಾಗುವ ಪ್ರಯೋಜನದ ಬಗ್ಗೆ ಅರಿವು ಮೂಡಿಸುವ ಉದ್ದೇಶದೊಂದಿಗೆ ಆಗಸ್ಟ್ ಮೊದಲ ವಾರದಲ್ಲಿ ಸ್ತನ್ಯಪಾನ ಸಪ್ತಾಹ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಶ್ವಥ್‌ಬಾಬು ತಿಳಿಸಿದರು.

ಅವರು ಇಂದು ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾಸ್ಪತ್ರೆ, ಹಾಗೂ ಇನ್ನರ್ ವೀಲ್ಹ್ ಕ್ಲಬ್, ರೋಟರಿ ಕ್ಲಬ್, ರೋಟರಿ ಕಾಫಿ ಲ್ಯಾಂಡ್ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ 'ವಿಶ್ವ ಸ್ತನ್ಯಪಾನ ಸಪ್ತಾಹ' 2025 ನ್ನು ಉದ್ಘಾಟಿಸಿ ಮಾತನಾಡಿದರು.

ಸ್ತನ್ಯಪಾನದಿಂದ ಯಾವ ಯಾವ ರೋಗಗಳನ್ನು ತಡೆಯಬಹುದು ಹಾಗೂ ಅದರ ಅನುಕೂಲತೆಗಳ ಬಗ್ಗೆ ಈ ಸಪ್ತಾಹದ ಮೂಲಕ ತಾಯಂದಿರಲ್ಲಿ ಜಾಗೃತಿ ಮೂಡಿಸಲಾಗುವುದೆಂದು ಹೇಳಿದರು.

ಆರೋಗ್ಯ ಇಲಾಖೆಯಿಂದ ಆಯೋಜಿಸುವ ವಿವಿಧ ಆರೋಗ್ಯ ಅರಿವು ಕಾರ್ಯಕ್ರಮಗಳಲ್ಲಿ ಇನ್ನರ್ ವೀಲ್ಹ್ ಕ್ಲಬ್, ರೋಟರಿ ಕ್ಲಬ್, ಲಯನ್ ಸಂಸ್ಥೆ ಸಕ್ರಿಯವಾಗಿ ಪಾಲ್ಗೊಂಡು ಸಲಹೆ ಸಹಕಾರ



ನೀಡುವಂತೆ ಮನವಿ ಮಾಡಿದರು.

ಜಿಲ್ಲಾ ಸರ್ಜನ್ ಡಾ. ಚಂದ್ರಶೇಖರ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಗು ಜನಿಸಿದ 6 ತಿಂಗಳು ತಪ್ಪದೇ ಸ್ತನ್ಯಪಾನ ಕಡ್ಡಾಯವಾಗಿ ನೀಡಬೇಕು ಎಂಬುದನ್ನು ತಾಯಂದಿರಲ್ಲಿ ಸಪ್ತಾಹದ ಮೂಲಕ ಅರಿವು ಮೂಡಿಸುವ ಅಗತ್ಯ ಇದೆ ಎಂದರು.

ಇದನ್ನು ಮನಗಂಡ ವಿಶ್ವ ಆರೋಗ್ಯ ಸಂಸ್ಥೆ ಪ್ರತೀ ವರ್ಷ ಈ ಬಗ್ಗೆ ಅರಿವು ಮೂಡಿಸಲು ಸ್ತನ್ಯಪಾನ ಸಪ್ತಾಹವನ್ನು ಆಚರಿಸುತ್ತಿದೆ. 2025 ರಲ್ಲಿ 'ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ' ಎಂಬ ಘೋಷವಾಕ್ಯದೊಂದಿಗೆ ಶೇ.50 ರಷ್ಟು ಗುರಿ ತಲುಪಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಸ್ತನ್ಯಪಾನದಿಂದ ತಾಯಿ ಮತ್ತು ಮಗು ಇಬ್ಬರಿಗೂ ಪ್ರಯೋಜನವಿದೆ. ಚುಚ್ಚುಮದ್ದು ಕೊಡುವುದರಿಂದ ಹಲವಾರು ರೋಗಗಳನ್ನು ತಡೆಗಟ್ಟಲು ಅವಕಾಶವಿರುವಂತೆ ಮಗುವಿಗೆ ರೋಗಗಳು ಬರದಂತೆ ತಡೆಯುವ ಶಕ್ತಿ ಸ್ತನ್ಯಪಾನಕ್ಕಿದೆ ಎಂದು ಹೇಳಿದರು.

ಮಗು ಜನಿಸಿದ ಮೊದಲ ತಿಂಗಳಲ್ಲೇ ಮೃತಪಡುವುದು ಮತ್ತು ರೋಗಗಳಿಗೆ ತುತ್ತಾಗುವುದನ್ನು ತಡೆಯಲು ಸ್ತನ್ಯಪಾನದಿಂದ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ತಾಯಂದಿರು ಮಗು ಹಾರೈಕೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕಾಗಿದೆ ಎಂದು ಕಿವಿಮಾತು ಹೇಳಿದರು.

ಸ್ತನ್ಯಪಾನ ಮಾಡುವುದರಿಂದ ಮಹಿಳೆಯರ ಸೌಂದರ್ಯ ಹಾಳಾಗುತ್ತದೆಂಬ ಮೂಢನಂಬಿಕೆಯಿಂದ ಹೊರತರುವ ಕೆಲಸವನ್ನು ಈ ಸಪ್ತಾಹದ ಮೂಲಕ ತಾಯಂದಿರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಉದ್ದೇಶವಾಗಿದೆ ಎಂದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಮಂಜುನಾಥ್ ಮಾತನಾಡಿ, ಮಗು ಜನಿಸಿದ 6 ತಿಂಗಳವರೆಗೆ ಕಡ್ಡಾಯವಾಗಿ ಎದೆಹಾಲನ್ನು ನೀಡಿದರೆ ವಾಂತಿಭೇದಿ, ನ್ಯುಮೋನಿಯಾ ಮುಂತಾದವುಗಳಿಗೆ ತುತ್ತಾಗುವುದನ್ನು ತಡೆಯಬಹುದಾಗಿದೆ. ತಾಯಂದಿರಿಗೆ ಹಾಲುಣಿಸುವ ಬಗ್ಗೆ ಆರೋಗ್ಯ ಇಲಾಖೆಯ ಕಾರ್ಯಕರ್ತರು ಮನವರಿಕೆ ಮಾಡುತ್ತಿದ್ದಾರೆಂದು ಹೇಳಿದರು.

ಜಿಲ್ಲೆಯಲ್ಲಿ 2024–25 ರಲ್ಲಿ 12302 ಮಕ್ಕಳು ಜನಿಸಿದ್ದು, ಇದರಲ್ಲಿ 83 ಮಕ್ಕಳು ಮೊದಲ ಹುಟ್ಟುಹಬ್ಬವನ್ನೇ ನೋಡಿಲ್ಲ. ಕಾರಣ ಸ್ತನ್ಯಪಾನದಿಂದ ವಂಚಿತರಾಗಿ 18 ಮಕ್ಕಳು ಮೃತಪಟ್ಟಿರುವುದಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಡಾ. ಭಾರತಿ, ಡಾ. ಶಶಿಕಲಾ, ಶಿವರಾಜ್, ಸ್ತ್ರೀರೋಗ ತಜ್ಞ ಡಾ. ಪುಟ್ಟಪ್ಪ, ಮಕ್ಕಳ ತಜ್ಞರಾದ ಡಾ. ವರದಾ ವಿದ್ಯಾರಾಣಿ, ಡಾ. ಕಲ್ಪನ, ಇನ್ನರ್ ವೀಲ್ಹ್ ಕ್ಲಬ್, ನಯನ ಸಂತೋಷ್, ಶಾಲಿನ ನಾಗೇಶ್, ನಾಗೇಶ್ ಕೆಂಜಿಗೆ, ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಡಿ.ಎನ್.ಓ ರೇಣುಕ ಸ್ವಾಗತಿಸಿ, ಜಲಜಾಕ್ಷಿ ನಿರೂಪಿಸಿದರು.

# ರಸಗೊಬ್ಬರ ಸರಬರಾಜು ಮಾಡುವಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಜೆಡಿಎಸ್ ಮನವಿ



**ಚಿಕ್ಕಮಗಳೂರು:** ರೈತರಿಗೆ ಅಗತ್ಯವಾಗಿ ಬೇಕಾಗಿರುವ ಯೂರಿಯಾ–ಡಿಎಪಿ ರಸಗೊಬ್ಬರವನ್ನು ಅತೀ ಶೀಘ್ರ ವಿತರಣೆ ಮಾಡುವಂತೆ ಆಗ್ರಹಿಸಿ ಇಂದು ಜೆಡಿಎಸ್ ವತಿಯಿಂದ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ನಂತರ ಮಾತನಾಡಿದ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ರಂಜನ್ ಅಜಿತ್ ಕುಮಾರ್, ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಿದ್ದು, ಈ ನಿಟ್ಟಿನಲ್ಲಿ ರೈತರಿಗೆ ಅಗತ್ಯವಾಗಿ ಬೇಕಾಗಿರುವ ಬಿತ್ತನೆ ಬೀಜ, ರಸಗೊಬ್ಬರ ಸೇರಿದಂತೆ ರೈತರಿಗೆ ಅಗತ್ಯ ಕೃಷಿ ಪರಿಕರಗಳನ್ನು ಕೂಡಲೇ ಸರಬರಾಜು ಮಾಡುವಂತೆ ಕೃಷಿ ಸಚಿವರನ್ನು ಒತ್ತಾಯಿಸಿದರು.

ಜಿಲ್ಲೆಯ ಜ್ವಲಂತ ಸಮಸ್ಯೆಗಳ ಬಗ್ಗೆ ಜೆಡಿಎಸ್ ಹೋರಾಟ ರೂಪಿಸಲಿದೆ. ಕಾಡು ಪ್ರಾಣಿಗಳು, ಮಾನವ ಸಂಘರ್ಷ ಒಂದೆಡೆಯಾದರೆ, ಕಾಡಾನೆಗಳ ದಾಳಿಗೆ ತುತ್ತಾಗುತ್ತಿರುವ ಕಾರ್ಮಿಕರ ರಕ್ಷಣೆ ಮಾಡಬೇಕು, ಜೊತೆಗೆ ವೈಜ್ಞಾನಿಕ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ರೈತರನ್ನು ಒಕ್ಕಲೆಬ್ಬಿಸುವ ಸಲುವಾಗಿ ಮದಗದ ಕೆರೆ ಬಳಿ ಚಿರತೆ ತಂದುಬಿಟ್ಟು ಅರಣ್ಯ ಇಲಾಖೆ ಆ ಭಾಗದ ರೈತರಿಗೆ ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಮಲೆನಾಡು ಭಾಗದಲ್ಲಿ ಗಿಡ್ಡ ತಳಿ ಹಸುಗಳನ್ನು ಸಾಕಾಣೆ ಮಾಡಿದ್ದು, ಅರಣ್ಯ ಸಚಿವರು ಅರಣ್ಯದ ಒಳಭಾಗದಲ್ಲಿ ದನಗಳನ್ನು ಮೇಯಿಸಲು ಬಿಡಬಾರದು ಎಂದು ಆದೇಶ ಮಾಡಿರುವುದು ಸರಿಯಾದ ಕ್ರಮವಲ್ಲ. ಕೂಡಲೇ ಈ ಆದೇಶವನ್ನು ವಾಪಾಸ್ ಪಡೆಯುವಂತೆ ಹೇಳಿದರು.

# ಕೃಷಿ ಇಲಾಖೆಯಿಂದ ನೈಸರ್ಗಿಕ ಕೃಷಿ ಅಭಿಯಾನ

**ಚಿಕ್ಕಮಗಳೂರು, ಆ.5:** ಕೃಷಿ ಇಲಾಖೆಯಲ್ಲಿ ನೈಸರ್ಗಿಕ ಕೃಷಿ ಯೋಜನೆಯು ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಎಂಬ ಹೆಸರಿನಿಂದ 2025–26ನೇ ಸಾಲಿನಿಂದ ಅನುಷ್ಠಾನಗೊಳ್ಳುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಹೆಚ್.ಎಸ್.ಸುಜಾತ ಅವರು ತಿಳಿಸಿದ್ದಾರೆ.

ಈ ಕುರಿತು ಮಾಹಿತಿಯನ್ನು ಬಿಡುಗಡೆ ಮಾಡಿರುವ ಅವರು, ನೈಸರ್ಗಿಕ ಕೃಷಿಯು ಜಾನುವಾರು ಮತ್ತು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳ ಬಳಕೆಯ ಆಧಾರದ ಮೇಲೆ ಅವಲಂಬಿತವಾಗಿರುವ ರಾಸಾಯನಿಕ ಮುಕ್ತ ಕೃಷಿ ವ್ಯವಸ್ಥೆಯಾಗಿದ್ದು, ಭಾರತೀಯ ಸಂಪ್ರದಾಯದಲ್ಲಿ ಬೇರೂರಿರುವ ಸಮಗ್ರ ನೈಸರ್ಗಿಕ ಕೃಷಿ ಹಾಗೂ ವೈವಿಧ್ಯ ಬೆಳೆ ಪದ್ಧತಿಯಾಗಿದೆ. ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿಸಿದ್ದು ಸಸ್ಯ ಜನ್ಯ ಹಾಗೂ ಪ್ರಾಣಿಜನ್ಯ ಪದಾರ್ಥಗಳಿಂದ, ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳ ಸೂಕ್ತ ಬಳಕೆಯಿಂದ ಯಾವುದೇ ಕೃಷಿ ಪರಿಕರಗಳನ್ನು ಮಾರುಕಟ್ಟೆಯಿಂದ ಖರೀದಿಸದೆ ನೈಸರ್ಗಿಕ ತತ್ವಗಳ ಆಧಾರದ ಮೇಲೆ ರೈತರನ್ನು ಸ್ವಾವಲಂಬಿಯಾಗಿಸುವ ಪರಿಸರ ಸ್ನೇಹಿ ಬೇಸಾಯವೇ ನೈಸರ್ಗಿಕ ಕೃಷಿ ಎಂದು ತಿಳಿಸಿದ್ದಾರೆ.

ನೈಸರ್ಗಿಕ ಕೃಷಿಯು ವೈಜ್ಞಾನಿಕ ಹಾಗೂ ಕೌಶಲ್ಯಯುತವಾಗಿದ್ದು, ಸ್ಥಳೀಯವಾಗಿ ಲಭ್ಯವಿರುವ ತಂತ್ರಜ್ಞಾನ ಹಾಗೂ ಸುಸ್ಥಿರ ಬೇಸಾಯ ಪದ್ಧತಿಗಳನ್ನು ಅಳವಡಿಸಿಕೊಂಡು ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು, ನೀರು ಮತ್ತು ಜೀವ ವೈವಿಧ್ಯತೆಯನ್ನು ಸಂರಕ್ಷಿಸುವುದು ಮತ್ತು ಇವುಗಳ ಸಮರ್ಪಕ ಬಳಕೆಯಿಂದ ಆಹಾರ ಉತ್ಪಾದನೆ ಹೆಚ್ಚಿಸಬಹುದು.

ಮಣ್ಣಿನ ಫಲವತ್ತತೆ ಹಾಗೂ ಉತ್ಪಾದಕತೆ ಮಣ್ಣಿನ ಆರೋಗ್ಯದ ಮೇಲೆ ಅವಲಂಬಿಸಿದ್ದು, ಸಸ್ಯಜನ್ಯ ಹಾಗೂ ಪ್ರಾಣಿಜನ್ಯ ಪದಾರ್ಥಗಳಿಂದ ಮಣ್ಣಿನ ಭೌತಿಕ, ರಾಸಾಯನಿಕ ಹಾಗೂ ಜೈವಿಕ ಗುಣಧರ್ಮಗಳನ್ನು ಸುಧಾರಿಸಿ ಮಣ್ಣನ್ನು ಜೀವಂತಗೊಳಿಸುವುದು. ಸ್ಥಾನಿಕ ಕ್ರಿಯೆಗಳಾದ ಸಾರಜನಕ ಸ್ಥಿರೀಕರಣ, ಸಾವಯವ ಪದಾರ್ಥಗಳ ಕಳಿಸುವಿಕೆ, ಪೋಷಕಾಂಶಗಳ ಹಿಡಿದಿಟ್ಟುಕೊಳ್ಳುವಿಕೆ, ಅವುಗಳ ಚಲನಶೀಲತೆ ಮತ್ತು ಲಭ್ಯತೆಯನ್ನು ಹೆಚ್ಚಿಸಿ ಸಸ್ಯಗಳಿಗೆ ಪೂರೈಸುವುದು. ಕೃಷಿಯಲ್ಲಿ ಜೀವ ವೈವಿಧ್ಯತೆಯನ್ನು ಹೆಚ್ಚಿಸಿ ನೈಸರ್ಗಿಕ ವಿಧಾನಗಳಿಂದ ಕಳೆ, ರೋಗ ಹಾಗೂ ಕೀಟಗಳ ನಿರ್ವಹಣೆ ಕೈಗೊಂಡು ಉತ್ತಮ ಗುಣಮಟ್ಟದ ಆಹಾರ ಉತ್ಪಾದನೆ ಮಾಡುವುದು. ಆಸಕ್ತ ರೈತರು ಯೋಜನೆಯ ಲಾಭ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

# ನೋಟಿಸ್‌ನಲ್ಲಿ ಉಲ್ಲೇಖಿಸಿರುವಷ್ಟು ಜಿಎಸ್‌ಟಿ ದಂಡ ಪಾವತಿ ಕಡ್ಡಾಯವಲ್ಲ: ಸಣ್ಣ ವ್ಯಾಪಾರಿಗಳಿಗೆ ತೆರಿಗೆ ಇಲಾಖೆ ಅಭಯ

**ಬೆಂಗಳೂರು:** ತೆರಿಗೆ ನೋಟಿಸ್‌ಗೆ ಗಾಬರಿಯಾಗಬೇಡಿ, ನಿಮ್ಮ (ವ್ಯಾಪಾರಿಗಳು) ಉತ್ತರ ಅವಲಂಬಿಸಿ ದಂಡ, ಜಿಎಸ್‌ಟಿ ನಿಗದಿಯಾಗಲಿದೆ. ನೋಟಿಸ್‌ನಲ್ಲಿ ಉಲ್ಲೇಖಿಸಿರುವಷ್ಟು ಜಿಎಸ್‌ಟಿ, ದಂಡ ಪಾವತಿ ಕಡ್ಡಾಯವಲ್ಲ ಎಂದು ಹೇಳುವ ಮೂಲಕ ಸಣ್ಣ ವ್ಯಾಪಾರಿಗಳ ಆತಂಕವನ್ನು ವಾಣಿಜ್ಯ ತೆರಿಗೆ ಇಲಾಖೆ ದೂರ ಮಾಡಿದೆ.

ಕೋರಮಂಗಲದಲ್ಲಿರುವ ವಾಣಿಜ್ಯ ತೆರಿಗೆ ಇಲಾಖೆ ಕಚೇರಿಯಲ್ಲಿ ಮಂಗಳವಾರ 'ಜಿಎಸ್ಟಿ ತಿಳಿಯಿರಿ' ಸಭೆ ನಡೆಸಲಾಗಿದ್ದು, ಸಭೆಯಲ್ಲಿ ವ್ಯಾಪಾರಿಗಳ ಪ್ರಶ್ನೆಗಳಿಗೆ ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತ ಮೀರಾ ಪಂಡಿತ್ ಅವರು ಉತ್ತರ ನೀಡಿದರು.

ಮೊದಲ ಹಂತದಲ್ಲಿ ಕೋಟ್ಯಂತರ ರು. ಸ್ವೀಕರಿಸಿದ ವ್ಯಾಪಾರಿಗಳಿಗೆ ನೋಟಿಸ್ ನೀಡಲಾಗಿದೆ. ನಮ್ಮ ವ್ಯಾಪ್ತಿಯಲ್ಲಿ 850 ವ್ಯಾಪಾರಿಗಳಿಗೆ ನೋಟಿಸ್ ನೀಡಲಾಗಿದೆ. ಜಿಎಸ್ಟಿ ವಂಚನೆ ಕುರಿತು ಬೇರೆ ಬೇರೆ ಮೂಲಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ. ರಿಯಲ್ ಎಸ್ಟೇಟ್ ವ್ಯವಹಾರ ನಡೆಸುವ ಸಂಸ್ಥೆಗಳ ಮಾಹಿತಿ ರೇರಾದಿಂದ ಪಡೆದು ನೋಟಿಸ್ ನೀಡಲಾಗುವುದು ಎಂದು ಹೇಳಿದರು.

ಇದೇ ವೇಳೆ ನೋಟಿಸ್‌ನಲ್ಲಿ ಉಲ್ಲೇಖಿಸಿರುವಷ್ಟು ಸರಕು ಮತ್ತು ಸೇವಾ ತೆರಿಗೆ, (ಜಿಎಸ್ಟಿ) ದಂಡ ಮತ್ತು ಬಡ್ಡಿಯನ್ನು ಸಣ್ಣ ವ್ಯಾಪಾರಿಗಳು ಪಾವತಿಸುವುದು




ಕಡ್ಡಾಯವಲ್ಲ. ನೋಟಿಸ್'ಗೆ ನೀವು ನೀಡುವ ಉತ್ತರದ ಆಧಾರದ ಮೇಲೆ ತೆರಿಗೆ ಪ್ರಮಾಣ ಗಣನೀಯ ಕಡಿಮೆಯಾಗಬಹುದು ಎಂದು ಸ್ಪಷ್ಟಪಡಿಸಿದ್ದಾರೆ.

ಜಿಎಸ್ಟಿ ಸಂಪೂರ್ಣ ವಿನಾಯಿತಿ ಇರುವ ಹಣ್ಣು, ತರಕಾರಿ, ಹಾಲು ಮುಂತಾದ ಉತ್ಪನ್ನಗಳೂ ಇವೆ. ಮತ್ತೊಂದೆಡೆ ಶೇ.28ರಷ್ಟು ಜಿಎಸ್ಟಿ ಇರುವ ಗುಟ್ಕಾ ಮತ್ತು ಸಿಗರೇಟು ಉತ್ಪನ್ನಗಳೂ ಇವೆ. ಹೀಗಾಗಿ, ವರ್ತಕರು ತಮ್ಮದು ಯಾವ ವ್ಯಾಪಾರ ಎಂದು ತಿಳಿಸಿದರೆ ತೆರಿಗೆ ಕಡಿಮೆಯಾಗುತ್ತದೆ ಎಂದರು.

2025ರ ಜನವರಿ ತಿಂಗಳಲ್ಲಿ ಫೋನ್ ಹಾಗೂ ಪೇಟಿಎಂನಿಂದ ವರ್ತಕರ ವಹಿವಾಟುಗಳ ಕುರಿತು ಡೇಟಾ ಸಿಕ್ಕಿದೆ. ಇದೇ ಆಧಾರದ ಮೇಲೆ ಜಿಎಸ್ಟಿ ಮಿತಿ ಮೀರಿ ವಹಿವಾಟು ನಡೆಸಿದವರನ್ನು ಗುರುತಿಸುತ್ತಿದ್ದೇವೆ. ಮೊದಲ ಹಂತದಲ್ಲಿ ಕೋಟ್ಯಂತರ ರೂ. ಹಣ ಸ್ವೀಕರಿಸಿದ ವ್ಯಾಪಾರಿಗಳಿಗೆ ನೋಟಿಸ್ ನೀಡಲಾಗಿದೆ.

ಬೇಕರಿ, ಕಾಂಡಿಮೆಂಟ್, ಹಣ್ಣು–ತರಕಾರಿ, ಹೂವು, ಡೈರಿ, ಮಾಂಸದ ಅಂಗಡಿ, ಸಣ್ಣ ಗಾತ್ರದ ಬಟ್ಟೆ ವ್ಯಾಪಾರಿಗಳು ಇದ್ದಾರೆ. ಜಿಎಸ್ಟಿ ವಂಚನೆ ಕುರಿತು ಬೇರೆ ಬೇರೆ ಮೂಲಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ. ರಿಯಲ್ ಎಸ್ಟೇಟ್ ವ್ಯವಹಾರ ನಡೆಸುವ ಸಂಸ್ಥೆಗಳ ಮಾಹಿತಿ ರೇರಾದಿಂದ ಪಡೆದುಕೊಂಡು ನೋಟಿಸ್ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಸೇವೆ (ಸರ್ವೀಸ್) ಸಂಬಂಧಿಸಿದ ವ್ಯಾಪಾರಕ್ಕೆ 20 ಲಕ್ಷ ರು. ಹಾಗೂ ಸಗಟು ವ್ಯಾಪಾರಕ್ಕೆ 40 ಲಕ್ಷ ರು. ಜಿಎಸ್ಟಿ ಮಿತಿಯನ್ನು 8 ವರ್ಷಗಳ ಹಿಂದೆ ನಿಗದಿಪಡಿಸಲಾಗಿದೆ. ಎಲ್ಲಾ ಅಗತ್ಯ ವಸ್ತುಗಳ ಬೆಲೆ ಹೆಚ್ಚಳವಾಗಿದೆ. ವ್ಯಾಪಾರದಲ್ಲಿ ಲಾಭಾಂಶ ಕಡಿಮೆಯಾಗಿದೆ. ಹೀಗಾಗಿ, ಜಿಎಸ್ಟಿ ಮಿತಿಯನ್ನು ಕ್ರಮವಾಗಿ 50 ಲಕ್ಷ ರು. ಮತ್ತು 1 ಕೋಟಿ ರು.ಗೆ ಹೆಚ್ಚಿಸಬೇಕು ಎಂದು ಅನೇಕ ವ್ಯಾಪಾರಿಗಳು ಮನವಿ ಮಾಡಿದರು. ಈ ವೇಳೆ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಈ ಕುರಿತು ಮನವಿ ಸಲ್ಲಿಸಬಹುದು ಎಂದು ಅಧಿಕಾರಿಗಳು ಸಲಹೆ ನೀಡಿದರು.

ಜಿಎಸ್ಟಿ ನೋಂದಣಿಯಿಲ್ಲದೆ ಮಿತಿ ಮೀರಿ ವ್ಯಾಪಾರಮಾಡಿರುವ ವರ್ತಕರಿಗೆ ಸಂಪೂರ್ಣ ವಿನಾಯಿತಿ ಸಿಗಬೇಕು ಎಂದರೆ ಜಿಎಸ್ಟಿ ಕೌನ್ಸಿಲ್‌ನಲ್ಲಿ ತೀರ್ಮಾನವಾಗಬೇಕು. ನಮ್ಮ ರಾಜ್ಯದಿಂದಲೂ ಜಿಎಸ್ಟಿ ಕೌನ್ಸಿಲ್‌ಗೆ ಪ್ರತಿನಿಧಿಗಳು ಇರುತ್ತಾರೆ. ನಿಯಮಿತವಾಗಿ ಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಬೇಕು. ಅದಕ್ಕಾಗಿ ವರ್ತಕರು ಸರ್ಕಾರಗಳಿಗೆ ಮನವಿ ಸಲ್ಲಿಸಬಹುದು ಎಂದು ಅಧಿಕಾರಿ ತಿಳಿಸಿದರು.

ಸಭೆಯಲ್ಲಿ ಜಿಎಸ್‌ಟಿ ನೋಂದಣಿ ನಿಯಮಗಳು ಬಿಗಿಯಾಗುತ್ತಿರುವ ಕುರಿತು ವರ್ತಕರು ಆತಂಕ ವ್ಯಕ್ತಪಡಿಸಿದರು. ನೋಂದಣಿ ಮಾಡಿಕೊಳ್ಳಬಹುದು, ಆದರೆ, ಅದಕ್ಕೆ ಲೆಕ್ಕಪತ್ರ, ಪುಸ್ತಕಗಳನ್ನು ನಿರ್ವಹಿಸಬೇಕಾಗುತ್ತದೆ. ಇದಕ್ಕಾಗಿ ಅಕೌಂಟೆಂಟ್ ಅನ್ನು ನೇಮಿಸಿಕೊಳ್ಳಬೇಕು. ಇದಕ್ಕಾಗುವ ಹೆಚ್ಚುವರಿ ವೆಚ್ಚವನ್ನು ನಾವೇ ಭರಿಸಬೇಕು. ಸರ್ಕಾರವು ಗ್ರಾಹಕರಿಂದ ತೆರಿಗೆಗಳನ್ನು ಸಂಗ್ರಹಿಸುತ್ತಿದೆ ಎಂದು ಹೇಳುತ್ತದೆ, ಆದರೆ, ಈ ರೀತಿಯ ವೆಚ್ಚವನ್ನು ಮರುಪಾವತಿಸುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಇದೇ ವೇಳೆ ಈ ಪ್ರಕ್ರಿಯೆಯಲ್ಲಿ ಅನಧಿಕೃತ ಅಡೆತಡೆಗಳ ಕುರಿತಂತೆಯೂ ಕಳವಳ ವ್ಯಕ್ತಪಡಿಸಿದರು.

ಜಿಎಸ್‌ಟಿ ನೋಂದಣಿ ಉಚಿತ ಎಂದು ಹೇಳುತ್ತಾರೆ. ಆದರೆ, ಇದರಲ್ಲಿ ಹಲವಾರು ತೊಡಗಳಿರುತ್ತೇವೆ. ಲಂಚವಿಲ್ಲದೆ, ಅರ್ಜಿಗಳನ್ನು ಪ್ರಕ್ರಿಯೆಗೊಳಿಸಲಾಗುವುದಿಲ್ಲ. ಹೆಚ್ಚಿನ ಅಧಿಕಾರಿಗಳು ನೋಂದಣಿಯನ್ನು ಅನುಮೋದಿಸುವ ಮೊದಲು ರೂ. 2,000 ರಿಂದ ರೂ. 5,000 ವರೆಗೆ ಹೆಚ್ಚುವರಿ ಹಣದ ಬೇಡಿಕೆ ಇಡುತ್ತಾರೆ. ವ್ಯಾಪಾರ ಸ್ಥಳ ಗುತ್ತಿಗೆಯಲ್ಲಿದ್ದಾರೆ, ಭೂಮಾಲೀಕರ ದಾಖಲೆಗಳನ್ನು ಕೇಳುತ್ತಾರೆ. ಆದರೆ, ಮಾಲೀಕರು ದಾಖಲೆ ನೀಡಲು ಹಿಂಜರಿಯುತ್ತಾರೆಂದು ಹೇಳಿದರು.

# ಕಾಯಕ – ದಾಸೋಹ ಪರಿಕಲ್ಪನೆಯು ಲಿಂಗವಂತ ಧರ್ಮದ ಕಣ್ಣುಗಳು

## ಜಾಗತಿಕ ಲಿಂಗಾಯತ ಮಹಾಸಭಾದ ಮಹಿಳಾ ಘಟಕದಿಂದ 'ಅರಿವಿನ ಮಹಾಮನೆ' ಕಾರ್ಯಕ್ರಮದಲ್ಲಿ ಸುಮತಿ ಜಯಪ್ಪ

**ದಾವಣಗೆರೆ** ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ವತಿಯಿಂದ ಅರಿವಿನ ಮಹಾಮನೆ ಕಾರ್ಯಕ್ರಮವನ್ನು ಆಂಜನೇಯ ಬಡಾವಣೆಯ ಯೋಗ ಹಾಲ್‌ನಲ್ಲಿ ಆಯೋಜಿಸಲಾಗಿತ್ತು.

ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷೆ ಸುಮತಿ ಜಯಪ್ಪ ಅವರು 'ಲಿಂಗಾಯತ ನಿಜಾಚರಣೆಗಳನ್ನು ಅನುಷ್ಠಾನಗೊಳಿ ಸುವಲ್ಲಿ ಮಹಿಳೆಯರ ಪಾತ್ರದ ಬಗ್ಗೆ ಅನುಭಾವವನ್ನು ಮಾಡುತ್ತಾ, 12ನೇ ಶತಮಾನದಲ್ಲಿ ಬಸವಾದಿ ಶಿವ ಶರಣರು ನಮಗೆ ಲಿಂಗಾಯತ ಧರ್ಮ ಹಾಗೂ ಆಚರಣೆಗಳ ಬಗ್ಗೆ ವಚನಗಳ ಮೂಲಕ ಮತ್ತು ತಾವು ನಿತ್ಯ ಜೀವನದಲ್ಲಿ ಅನುಭವಿಸಿದ ಸ್ವಾನುಭಾವದ ನೆಲೆಗಟ್ಟಿನಲ್ಲಿ ಬದುಕಿನಲ್ಲಿ ಬರುವ ಅನೇಕ ಸಮಸ್ಯೆಗಳಿಗೆ ಉತ್ತರ ರೂಪವಾಗಿ ವಚನಗಳಲ್ಲಿ ತಿಳಿಸಿಕೊಟ್ಟಿದ್ದಾರೆ ಎಂದರು.

ವಚನಗಳ ಮಾರ್ಗದರ್ಶನದಂತೆ ನಾವು ನಿತ್ಯ ಜೀವನದಲ್ಲಿ ಅಂದರೆ ಮನೆಯ ಮೊದಲ ಪಾಠ ಶಾಲೆ, ಜನನಿ ತಾನೇ ಮೊದಲ ಗುರುವು ಎಂಬಂತೆ ಮಕ್ಕಳಿಗೆ ಸಂಸ್ಕಾರದ ತಿಳುವಳಿಕೆ ನೀಡುವಲ್ಲಿ ಸಮಾಜಕ್ಕೆ ಸುಸಂಸ್ಕೃತ ಮಕ್ಕಳನ್ನು ಸತ್ಪ್ರಜೆಗಳನ್ನಾಗಿ ಬಾಳುವಂತೆ ಮಾಡುವುದರಲ್ಲಿ ಪ್ರತಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಬಾಲ್ಯಾವಸ್ಥೆಯ ನಂತರ ಹಂತ ಹಂತವಾಗಿ ಸಾಮಾಜಿಕವಾಗಿ ಒಡನಾಟ ಪ್ರಾರಂಭವಾದಾಗ ಪ್ರಪಂಚದಲ್ಲಿ ಏನಾದರೂ ಬದಲಾವಣೆ ಸಾಧ್ಯ



ವಾದುದರಲ್ಲಿ ಮೊಟ್ಟ ಮೊದಲ ಪಾತ್ರ ತಾಯಿ ಮತ್ತು ಗುರು ಸ್ಥಾನದಲ್ಲಿರುವವರಿಂದ. ಸರ್ವ ಮನು ಸಂಕುಲವೇ ಆಚರಿಸುವಂತಹ ಕಾಯಕ ಮತ್ತು ದಾಸೋಹ ಪರಿಕಲ್ಪನೆಯು ಲಿಂಗವಂತ ಧರ್ಮದ ಎರಡು ಕಣ್ಣುಗಳು. ಸತ್ಯ, ಶುದ್ಧ ಕಾಯಕ, ನಿತ್ಯ ಲಿಂಗಾರ್ಚನೆ, ಭಕ್ತಿ, ದಾಸೋಹ ದಂತಹ ಆರ್ಥಿಕ ಸಿದ್ಧಾಂತವನ್ನು ಅಳವಡಿಸಿ ಕೊಂಡರೆ ಬಡತನ ನಿರ್ಮೂಲನವಾಗುತ್ತದೆ.

ಸ್ವಾರ್ಥ ತುಂಬಿದ ಪ್ರಪಂಚದಲ್ಲಿ ಆಧುನಿಕತೆ ಬೆಳೆಸಿಕೊಂಡಂತೆಲ್ಲಾ ನಾವು ಕೃತಿಯನ್ನು ಮರೆತು ಬರಿ ಮಾತಿನ ಜಾಣರಾಗಿದ್ದೇವೆ. ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೇ ಎಂಬಂತೆ, ಬೆಳೆವ ಸಿರಿ ಮೊಳಕೆಯಲ್ಲಿ ಎನ್ನುವ ಹಾಗೆ ಮಕ್ಕಳಲ್ಲಿ ಸಂಸ್ಕಾರದ ಜೊತೆಗೆ ದಾಸೋಹದ ಭಾವವನ್ನು ಬೆಳೆಸಬೇಕು. ಇದರಿಂದ ನಮ್ಮ ನಡೆ, ನುಡಿ ಮೃದು ವಚನವಾಗಿ ಸದಾಶಿವನ ಒಲುಮೆಯಾಗಬೇಕು.

ನಡೆ, ನುಡಿ ಸಿದ್ಧಾಂತವಾದ ಶರಣರ ವಚನಗಳನ್ನು ಸತತ ಅಧ್ಯಯನ ಮಾಡುವುದರಿಂದ ನಮ್ಮ ಮಾತು ಮತ್ತು ವ್ಯಕ್ತಿತ್ವದಲ್ಲಿ ಅಂತರಂಗ ಮತ್ತು ಬಹಿರಂಗ ಶುದ್ಧವಾಗಿ ಸ್ವಾಸ್ಥ ಸಮಾಜ ನಿರ್ಮಾಣ ವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ನುಡಿದಂತೆ ನಡೆ ಇದೇ ಜನ್ಮ ಕಡೆ ಎಂದು ತಿಳಿಸಿದರು.

ಬಸವ ಪರ ಚಿಂತಕ ಶರಣ ವೀರಣ್ಣ ಶಿವಶಾಲಿ ಅವರು 'ಲಿಂಗ ಮತ್ತು ದೇವರ ಪರಿಕಲ್ಪನೆ'ಯ ಬಗ್ಗೆ ಜನ ಮಾನಸದಲ್ಲಿ ಬೇರೂರಿರುವ ದ್ವಂದ್ವ ಅಭಿಪ್ರಾಯ ಭೇದಗಳನ್ನು 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ತಮ್ಮ ವಚನಗಳಲ್ಲಿ ವೈಜ್ಞಾನಿಕ ಹಾಗೂ ವೈಚಾರಿಕ ಚಿಂತನೆಗಳ ಮೂಲಕ ಸವಿಸ್ತಾರವಾಗಿ ತಿಳಿಸಿದ್ದಾರೆ. ಲಿಂಗ ಮಧ್ಯೆ ಜಗತ್ ಸರ್ವಂ ಎಂಬಂತೆ ಸಾಕಾರ ಲಿಂಗಕ್ಕೂ ಸ್ಥಾವರ ಲಿಂಗಕ್ಕೂ ಇರುವ ವ್ಯತ್ಯಾಸಗಳನ್ನು ತಿಳಿಸಿದರು.

ಗೌರವಾಧ್ಯಕ್ಷೆ ಮಂದಾಕಿನಿ ಹೆಚ್.ಎಂ. ಸ್ವಾಮೀಜಿ ವಚನ ಗಾಯನ ಮಾಡಿದರು. ಖಜಾಂಚಿ ಮಮತಾ ನಾಗರಾಜ್ ಇವರು ಹುತ್ತಕ್ಕೆ ಹಾಲನ್ನು ಏಕೆ ಎರೆಯುತ್ತಾರೆ ? ಎಂಬುದಕ್ಕೆ ವೈಜ್ಞಾನಿಕ ಕಾರಣಗಳನ್ನು ನೀಡುತ್ತಾ, ಹುತ್ತದ ಮಣ್ಣಿನಲ್ಲಿ ಚರ್ಮರೋಗಗಳನ್ನು ನಿವಾರಿಸುವ ಔಷಧದ ಗುಣವಿರುವುದರಿಂದ ಆ ಮಣ್ಣನ್ನು ತಂದು ಹಾಲಿನಲ್ಲಿ ಬೆರೆಸಿ ಹಚ್ಚಿಕೊಳ್ಳುವುದರಿಂದ ವಾಸಿಯಾಗುತ್ತದೆ. ಈ ವಾಸ್ತವವನ್ನು ತಿಳಿಯದೇ ಜನರು ಮೂಢನಂಬಿಕೆಯಿಂದ ಪಂಚಮಿಯ ದಿನದಂದು ಹುತ್ತಕ್ಕೆ ಹೋಗಿ ಹಾಲನ್ನು ಹಾಕುತ್ತಾರೆ. ಇಂದಿಗೂ ಇದರ ಪರಿಕಲ್ಪನೆ ಇರದ ಜನರು ರೂಢಿಯಲ್ಲಿ ಇಟ್ಟುಕೊಂಡಿದ್ದಾರೆ. ಪೌಷ್ಟಿಕವಾದ ಹಾಲನ್ನು ವ್ಯರ್ಥ ಮಾಡದೆ ಬಡ ಜನರಿಗೆ ಮತ್ತು ರೋಗಿಗಳಿಗೆ ಹಂಚಿದರೆ ಸಾರ್ಥಕವಾಗುತ್ತದೆ ಎಂದು ಕಳಕಳಿಯಿಂದ ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಅಧ್ಯಕ್ಷೆ ಕುಸುಮಾ ಲೋಕೇಶ್ ಮಾತನಾಡಿ, ನಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸುವ ನಿಟ್ಟಿನಲ್ಲಿ ತಾಯಂದಿರ ಪಾತ್ರವೂ ಮಹತ್ವದ್ದಾಗಿದೆ. ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವುದಷ್ಟೇ ಅಲ್ಲ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವಂತೆ ಬೆಳೆಸಬೇಕು. ಜೀವನಕ್ಕೆ ಹಣದಷ್ಟೇ ಪ್ರಾಮುಖ್ಯತೆ ಗುಣವಂತರಾಗುವುದು ಎಂದರು.

ಸಮಿತಿಯ ಸದಸ್ಯರಾದ ಗಿರಿಜಾ ಬಿಲ್ಲಳ್ಳಿ ವಂದಿಸಿದರು. ಆತಿಥ್ಯ ಮತ್ತು ಪ್ರಸಾದದ ವ್ಯವಸ್ಥೆಯನ್ನು ಸಮಿತಿಯ ಸದಸ್ಯೆ ನಾಗರತ್ನಮ್ಮ ವಹಿಸಿಕೊಂಡಿದ್ದರು. ಮಧುಮತಿ ಗಿರೀಶ್ ದೇವಿಗೆರೆ ಕಾರ್ಯಕ್ರಮ ನಿರೂಪಿಸಿದರು.

# ಶ್ರೀಕೃಷ್ಣ ಭವಿಷ್ಯದಲ್ಲಿ ಬರಲಿದ್ದಾನೆ...

ಭಾರತ ದೇಶದಲ್ಲಿ ವಿವೇಕಾನಂದ ಜಯಂತಿ, ಮಹಾವೀರ ಜಯಂತಿ, ಬಸವ ಜಯಂತಿ – ಹೀಗೆ ಅನೇಕ ಧಾರ್ಮಿಕ ಮುಖಂಡರ ಜನ್ಮದಿನವನ್ನು ಆಚರಿಸಲಾಗುತ್ತದೆ. ಭಾರತೀಯರು ಶ್ರೀಕೃಷ್ಣನ ಜನ್ಮದಿನವನ್ನು ಶ್ರೀಕೃಷ್ಣಜನ್ಮಾಷ್ಟಮಿ, ಸಾತಮ ಆಥಮ, ಗೋಕುಲಾಷ್ಟಮಿ, ಅಷ್ಟಮಿ ರೋಹಿಣಿ, ಶ್ರೀಕೃಷ್ಣ ಜಯಂತಿ ಎಂದು ಪ್ರತಿವರ್ಷವು ವಿಜೃಂಭಣೆಯಿಂದ ಆಚರಿಸುತ್ತಾರೆ. ಅದು ಶ್ರಾವಣ ಮಾಸದ ಕೃಷ್ಣಪಕ್ಷದ ಅಷ್ಟಮಿ. ವೃಂದಾವನ, ಮಥುರ, ದ್ವಾರಕ, ಮಣಿಪುರದ ಇಂಫಾಲ್, ಬಂಗಾಳದ ನಬದ್ರಿಪ, ಒರಿಸ್ಸಾದ ಪುರಿ, ನೇಪಾಳದ ಪತನ ದರಬಾರ್, ಪಾಕಿಸ್ತಾನದ ಕರಾಚಿಯ ಸ್ವಾಮಿ ನಾರಾಯಣ ಮಂದಿರ, ಬಾಂಗ್ಲಾದೇಶದ ಧಾಕೇಶ್ವರಿ ಇರುವ ಕೃಷ್ಣ–ಮಂದಿರಗಳಲ್ಲಿ ಮುದ್ದು ಕೃಷ್ಣನ ಹುಟ್ಟುಹಬ್ಬವನ್ನು ಭಕ್ತಿಭಾವ ಮತ್ತು ಶ್ರದ್ಧೆಯಿಂದ ಆಚರಿಸುತ್ತಾರೆ. ಮಹಾರಾಷ್ಟ್ರ ಮತ್ತು ತಮಿಳನಾಡಿನಲ್ಲಿ ವಿಶೇಷ ಮೊಸರಿನ ಮಡಿಕೆಯನ್ನು ಹೊಡೆಯುವ (ದಹಿಹಂಡಿ) (ಉರ್ರೈಡಿ) ಸ್ಪರ್ಧೆಯು ನಡೆಯುತ್ತದೆ. ಭಾಗವತ ಮತ್ತು ವಿಷ್ಣು–ಪುರಾಣ, ಮಹಾಭಾರತ ಹಾಗೂ ಭಗವದ್ಗೀತೆಯಲ್ಲಿ ಶ್ರೀಕೃಷ್ಣನ ಬಗ್ಗೆ ಅಪಾರ ಮಾಹಿತಿ ಇದೆ.

ಪ್ರತಿಯೊಬ್ಬರ ಮನೆಗಳಲ್ಲಿ ಶ್ರೀಕೃಷ್ಣನನ್ನು ಶೃಂಗಾರ ಮಾಡಿ, ತೊಟ್ಟಿಲಲ್ಲಿ ತೂಗಿ, ಮೃಷ್ಟಾನ್ನಗಳ ನೈವೇದ್ಯವನ್ನು ಅರ್ಪಣೆ ಮಾಡುತ್ತಾರೆ. ಜೀವನದಲ್ಲಿ ಸುಖ ಶಾಂತಿಗಾಗಿ ಅವನನ್ನು ಆಹ್ವಾನಿಸುತ್ತಾರೆ. ಇವುಗಳನ್ನು ನಾವು ಅನೇಕ ವರ್ಷಗಳಿಂದ ಮಾಡುತ್ತಾ ಬಂದಿದ್ದೇವೆ. ಇದು ಒಂದು ದಿನಕ್ಕೆ ಮಾತ್ರ ಸೀಮಿತವಾಗಿದೆ. ಮಾರನೆಯ ದಿನ ಪುನ: ನಮ್ಮ ಜೀವನಯಾತ್ರೆ ಎಂದಿನಂತೆ ಪ್ರಾರಂಭವಾಗುತ್ತದೆ. ಸಡಗರ ಸಂಭ್ರಮದಿಂದ ಮಾಡಿದ ಆಚರಣೆ ಮುಂದಿನ ಹಬ್ಬ ಬರುವವರೆಗೆ ನಿಂತು ಹೋಗುತ್ತದೆ. ನಾವು ಮಾಡುವ ಹಬ್ಬಗಳ ಆಚರಣೆಯು ನಮ್ಮಗೆ ಖುಷಿ, ಉಲ್ಲಾಸ, ಉತ್ಸಾಹ, ಧೈರ್ಯ, ಸಾಹಸವನ್ನು ನೀಡುತ್ತದೆ.



ವಿಶ್ವವು ಇಂದು ಕುರುಕ್ಷೇತ್ರವಾಗಿದೆ. ಪ್ರತಿಯೊಬ್ಬರ ಮನಸ್ಸಿನಲ್ಲಿ ಮಹಾಭಾರತ ಯುದ್ಧ ನಡೆಯುತ್ತಿದೆ. ನಾವೇ ಅರ್ಜುನರಾಗಿ ಶ್ರೇಷ್ಠ ಆಚರಣೆಯನ್ನು ಮತ್ತು ದೈವಿಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಭವಸಾಗರವನ್ನು ಪಾರಮಾಡುವ ಅವಶ್ಯಕತೆ ಇದೆ.

ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ತತ್ವಜ್ಞಾನದ ಪ್ರಕಾರ 'ಶ್ರೀಕೃಷ್ಣನ ಆಗಮನ ಭವಿಷ್ಯದಲ್ಲಿ ಆಗಲಿದೆ.' ಸಂಸ್ಥೆಯ ಸಂಸ್ಥಾಪಕ ದಾದಾ ಲೇಖರಾಜ (ಪಿತಾಶ್ರೀ ಬ್ರಹ್ಮಾ) ರವರನ್ನು ಸಾಕಾರದಲ್ಲಿ ಕಂಡಾಗ ಸಾವಿರಾರು ಸಾಧಕರಿಗೆ ಕೃಷ್ಣನ ಸಾಕ್ಷತ್ಕಾರವಾಗಿದೆ. ಇಲ್ಲಿಯ ಲಕ್ಷಾಂತರ ಅನುಯಾಯಿಗಳು ಪರಮಾತ್ಮನ ಸತ್ಯ ಪರಿಚಯ ತಿಳಿದುಕೊಂಡು ತಮ್ಮ ಜೀವನವನ್ನು ರಾಜಯೋಗದ ಮೂಲಕ ಸಾರ್ಥಕ ಮಾಡಿಕೊಂಡಿದ್ದಾರೆ. ಇದು ಕಲಿಯುಗದ ಅಂತಿಮ ಸಮಯವಾಗಿದೆ. ಕಲಿಯುಗದ ಅಂತ್ಯ ಮತ್ತು ಸತ್ಯಯುಗದ ಆರಂಭದ ಸಂಗಮ ಸಮಯವೇ ಸಂಗಮಯುಗ. ಅದು ಈಗ ನಡೆಯುತ್ತಿದೆ. ಪ್ರತಿಯೊಬ್ಬ ಮಾನವನು ಸತ್ಯಯುಗದ ದೈವಿ–ಪದವಿಯನ್ನು ಪಡೆಯುವುದು ಅವನ ಜನ್ಮಸಿದ್ಧ ಅಧಿಕಾರವಾಗಿದೆ. ಆ ಅಧಿಕಾರವನ್ನು ಸ್ವಯಂ ನಿರಾಕಾರ ಪರಮಾತ್ಮನಿಂದ, ಈಶ್ವರೀಯ ವಿಶ್ವ ವಿದ್ಯಾಲಯದ ಮೂಲಕ ಕಲಿಸುವ ರಾಜಯೋಗದ ಅಭ್ಯಾಸದಿಂದ ಪಡೆಯಬಹುದು. ಪವಿತ್ರತೆ ಹಾಗೂ ದೈವಿಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರಿಂದ; ಕಾಮ, ಕ್ರೋಧ, ಲೋಭ, ಮೋಹ, ಅಹಂಕಾರ ಮುಂತಾದ ಅಸುರಿ ಗುಣಗಳ ತ್ಯಾಗದಿಂದ ದೇವಿ–ದೇವತಾ ಪದವಿಯು ಪ್ರಾಪ್ತವಾಗುವುದು. ಆಗ ಮಾನವನು ಶ್ರೀಕೃಷ್ಣನ ಸಮಾನ ದೇವಮಾನವನಾಗಿ ಸರ್ವಗುಣ ಸಂಪನ್ನ, 16 ಕಲಾ ಸಂಪೂರ್ಣ, ಮರ್ಯಾದ ಪುರುಷೋತ್ತಮ, ಅಹಿಂಸಾ ಪರಮೋಧರ್ಮಿ, ಸಂಪೂರ್ಣ ನಿರ್ವಿಕಾರಿ ಆಗುವನು. ಕಂಸ, ಜರಾಸಂಧ ಮುಂತಾದ ರಾಕ್ಷಸರ ರಾಜ್ಯವಾದ ನರಕವೆಂಬ ಕಲಿಯುಗವು ಈಗ ನಡೆಯುತ್ತಿದೆ. ಸತ್ಯಯುಗವು ಈ ನರಕದ ಮಹಾವಿನಾಶದ ನಂತರ ಬರುವುದು. ಆ ಸ್ವರ್ಗದಲ್ಲಿ ಶ್ರೀರಾಧೆ ಮತ್ತು ಶ್ರೀಕೃಷ್ಣರ ರಾಜ್ಯವಿರುತ್ತದೆ.

"ಸತ್ಯಯುಗಲ್ಲಿ ಮೊದಲನೆಯ ರಾಜಕುಮಾರ ಶ್ರೀಕೃಷ್ಣ. ಕೃಷ್ಣನನ್ನು ಸಮುದ್ರದ ಮಧ್ಯದಲ್ಲಿ ಆಲದ ಎಲೆಯಲ್ಲಿ ತೇಲಿ ಬರುವಂತೆ ತೋರಿಸುತ್ತಾರೆ. ಅದರ ಅರ್ಥವೇನೆಂದರೆ – ಭವಿಷ್ಯದಲ್ಲಿ ಸಂಭವಿಸುವ ಮಹಾವಿನಾಶದ ನಂತರ ಭೂಮಿಯು ಜಲಮಯವಾಗುತ್ತದೆ. ವಿದೇಶಗಳು ಸತ್ಯಯುಗದಲ್ಲಿ ಇರುವುದಿಲ್ಲ. ಕೇವಲ ಭಾರತ ದೇಶ ಮಾತ್ರ ಇರುತ್ತದೆ. ಭಾರತ ದೇಶ ಮೇಲಿಂದ ನೋಡಿದಾಗ ಆಲದ ಎಲೆಯ ಹಾಗೆ ಕಾಣುತ್ತದೆ. ಅಲ್ಲಿ ಒಂದೇ ರಾಜ್ಯ, ಒಂದೇ ಭಾಷೆ, ಒಂದೇ ಧರ್ಮವಿರುತ್ತದೆ. ಸತ್ಯಯುಗದಲ್ಲಿ ಆತ್ಮವು 8 ಜನ್ಮಗಳನ್ನು ತೆಗೆದುಕೊಳ್ಳುತ್ತದೆ. ರಾಧಾಕೃಷ್ಣರು ತಮ್ಮ 35ನೇ ವಯಸ್ಸಿನಲ್ಲಿ ಸಿಂಹಾಸನಾಧೀಶರಾಗಿ ತಮ್ಮ ಹೆಸರನ್ನು ಲಕ್ಷ್ಮೀ–ನಾರಾಯಣರಾಗಿ ಪರಿವರ್ತನೆ ಮಾಡಿಕೊಂಡು ರಾಜ್ಯವಾಳುತ್ತಾರೆ. ಒಟ್ಟು 9 ಲಕ್ಷ ಪ್ರಜೆಗಳಿರುತ್ತಾರೆ. ಈ ರೀತಿಯಲ್ಲಿ 8 ಜನ ರಾಜಕುಮಾರರು ವಂಶಪಾರಂಪರ್ಯವಾಗಿ ರಾಜ್ಯಭಾರ ಮಾಡುತ್ತಾರೆ. ಆದ್ದರಿಂದ ಕೃಷ್ಣಜನ್ಮಾಷ್ಟಮಿ ಎಂದು ಹೇಳುತ್ತಾರೆ."ಹಾಗಾದರೆ ಬನ್ನಿ ನಾವೆಲ್ಲರೂ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಕಲಿಸುವ ರಾಜಯೋಗವನ್ನು ಕಲಿತು ಶ್ರೀಕೃಷ್ಣನ ಬಗ್ಗೆ ಸಮರ್ಪಕ ಮಾಹಿತಿಯನ್ನು ಪಡೆದು, ಅವನ ಸಮಾನ ದೇವತೆಯಾಗೋಣ.

––ವಿಶ್ವಾಸ. ಸೋಹೋನಿ.
ಬ್ರಹ್ಮಾಕುಮಾರೀಸ್, ಮೀಡಿಯಾ ವಿಂಗ್,
7349632530; 9483937106

# ಗದಗ ಬೆಟಗೇರಿ ನಗರದ ಹಳೇ ಬಸ್ ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಉದ್ಘಾಟನೆ ಸಮಾರಂಭ

**ಗದಗ:** ಕರ್ನಾಟಕ ಸರ್ಕಾರ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತ ಗದಗ, ಗದಗ ಬೆಟಗೇರಿ ನಗರಸಭೆ ಇವರುಗಳ ಸಹಯೋಗದಲ್ಲಿ ಗದಗ ಬೆಟಗೇರಿ ನಗರದ ಹಳೇ ಬಸ್‌ನಿಲ್ದಾಣದ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಉದ್ಘಾಟನಾ ಸಮಾರಂಭವು ಅಗಸ್ಟ 15 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಗಾನಯೋಗಿ ಪಂಡಿತ ಪುಟ್ಟರಾಜ ಗವಾಯಿ ಬಸ್ ನಿಲ್ದಾಣ ( ಹಳೇ ಬಸ್ ಸ್ಟಾಂಡ್ ) ನಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ , ನಗರಾಭಿವೃದ್ಧಿ ಸಚಿವರಾದ ಸುರೇಶ ಬಿ.ಎಸ್.

( ಬೈರತಿ ) ಅವರುಗಳು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ ,

ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಸಿ.ಎನ್.ಶ್ರೀಧರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ, ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ದೀಪಾ ರಾಜೇಂದ್ರ ಚೋಳನ್ , ಯೋಜನೆ, ಕಾರ್ಯಕ್ರಮಗಳು,

ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ರಮಣದೀಪ್ ಚೌಧರಿ, ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಪ್ರಭುಲಿಂಗ ಕವಳಿಕಟ್ಟಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರು ಆಗಮಿಸುವರು.

ಅತಿಥಿಗಳಾಗಿ ಗೌರವಾನ್ವಿತ ನಗರಸಭಾ ಸದಸ್ಯರುಗಳು ಹಾಗೂ ನಾಮನಿರ್ದೇಶನ ಸದಸ್ಯರುಗಳು ಆಗಮಿಸುವರು.

ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಶಿವಾಜಿ ಪವಾರ ಹಾಗೂ ಗದಗ ಬೆಟಗೇರಿ ನಗರಸಭೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಚ್.ಎ. ಬಂಡಿವಡ್ಡರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಅಜೀವ ಸದಸ್ಯತ್ವಕ್ಕೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ದಾವಣಗೆರೆ:** ದಾವಣಗೆರೆಯ ಇಂಡಿಯನ್ ರೆಡ್‌ಕ್ರಾಸ್ ಸೊಸೈಟಿಯ ಆಡಳಿತ ಮಂಡಳಿಯ 15 ಸ್ಥಾನಗಳ ಪೈಕಿ 8 ಸ್ಥಾನಗಳ ಆಯ್ಕೆಗೆ ಚುನಾವಣೆಯನ್ನು (ತಾತ್ಕಾಲಿಕ) ಸೆಪ್ಟೆಂಬರ್ 14 ರಂದು ನಡೆಸಲಾಗುವುದು.

ಅಜೀವ ಸದಸ್ಯತ್ವ ಪಟ್ಟಿಯನ್ನು ಇಂಡಿಯನ್ ರೆಡ್‌ಕ್ರಾಸ್ ಸೊಸೈಟಿ, ಇಂಡಿಯನ್ ರೆಡ್ ಕ್ರಾಸ್ ಭವನ, ದೇವರಾಜ್ ಅರಸ್ ಬಡಾವಣೆ, ದಾವಣಗೆರೆ ಇಲ್ಲಿ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಅಜೀವ ಸದಸ್ಯತ್ವಕ್ಕೆ ಆಕ್ಷೇಪಣೆ ಸಲ್ಲಿಸಲು ಆಗಸ್ಟ್ 22 ಕೊನೆ ದಿನವಾಗಿರುತ್ತದೆ. ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಲಿಖಿತವಾಗಿ ಕಚೇರಿಗೆ ಸಲ್ಲಿಸಬೇಕು. ಅಜೀವ ಸದಸ್ಯತ್ವ ಪಡೆದವರಿಗೆ ಮಾತ್ರ ಮತದಾನ ಮಾಡಲು ಹಾಗೂ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಸಲು ಅವಕಾಶವಿರುತ್ತದೆ. ಆಗಸ್ಟ್ 23 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುವುದು. ಈ ಪಟ್ಟಿ ಪ್ರಕಟಣೆಯ ನಂತರ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಮುಖ್ಯಸ್ಥರು ತಿಳಿಸಿದ್ದಾರೆ.

# ಶ್ರೀ ಕೃಷ್ಣ ಜಯಂತಿ ಆಚರಣೆ

**ದಾವಣಗೆರೆ:** ಜಿಲ್ಲಾಡಳಿತದಿಂದ ಆಗಸ್ಟ್ 16 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಕುವೆಂಪು ಕನ್ನಡ ಭವನದಲ್ಲಿ ಶ್ರೀಕೃಷ್ಣ ಜಯಂತಿಯನ್ನು ಆಚರಿಸಲಾಗುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ

**ದಾವಣಗೆರೆ:** ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಅವರು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಆಗಸ್ಟ್ 17 ರಂದು ಬೆಳಿಗ್ಗೆ 10 ಗಂಟೆಗೆ ಚನ್ನಗಿರಿ ತಾಲ್ಲೂಕಿನ ಸಂತೇಬೆನ್ನೂರು ಹೋಬಳಿಯ ಕೊರಚರಹಟ್ಟಿಯಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಕೊರಚ ಸಮುದಾಯದ ಕುಟುಂಬಗಳು ವಾಸಿಸುತ್ತಿರುವ ಸ್ಥಳ ವೀಕ್ಷಣೆ ಹಾಗೂ ಕುಂದು ಕೊರತೆಗಳನ್ನು ಆಲಿಸುವರು.

# ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ ಬೆಳಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

**ದಾವಣಗೆರೆ:** ಜಿಲ್ಲಾಡಳಿತ ವತಿಯಿಂದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಜಿಲ್ಲಾ ಕ್ರೀಡಾಂಗಣದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿಯ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ ಉಪಸ್ಥಿತರಿರುವರು. ಅಂದು ಸಂಜೆ 5 ಗಂಟೆಗೆ ಕುವೆಂಪು ಕನ್ನಡ ಭವನದಲ್ಲಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

# ತಾಯಿ ಇಲ್ಲದ ಮಕ್ಕಳ ತಾಯಿ ಸೂರ್ಯ

ತಂದೆ ಇಲ್ಲದ ಮಕ್ಕಳನ್ನು ತಾಯಿ, ಎಷ್ಟೇ ಕಷ್ಟವಾದರೂ ಸರಿ ಸಾಕುತ್ತಾಳೆ, ಬೆಳೆಸುತ್ತಾಳೆ, ಓದಿಸುತ್ತಾಳೆ, ಏಕಾಂಗಿಯಾಗಿಯೇ, ಯಾರ ನೆರವು ಸಿಗದಿದ್ರೂ ಪರವಾಗಿಲ್ಲ ಹಠಕ್ಕೆ ಬಿದ್ದು ಮಕ್ಕಳ ಭವಿಷ್ಯ ರೂಪಿಸುತ್ತಾಳೆ. ಆದರೆ, ತಾಯಿ ಇಲ್ಲದ ಮನೆಯ ಮಕ್ಕಳು ಬದುಕು ಕಟ್ಟಿಕೊಡುವುದು ತಂದೆಗೆ ಬಲುಕಷ್ಟ. ಹಾಗಾಗಿಯೇ, ತಾಯಿ ಇಲ್ಲದ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚು ನೆರವು ನೀಡಲು ನಿರ್ಧರಿಸಿದೆ..' ಅಂತಾರೆ ತಮಿಳು ನಟ ಸೂರ್ಯ.

ತಮಿಳು ನಟ ಸೂರ್ಯ, 15 ವರ್ಷಗಳಲ್ಲಿ 8 ಸಾವಿರ ಮಕ್ಕಳನ್ನು ಓದಿಸಿ, ಈ ಪೈಕಿ 51 ಮಂದಿ ವೈದ್ಯ ಪದವೀಧರರು, 1880 ಮಂದಿ ಇಂಜಿನಿಯರ್ಸ್ ಆದ ಬಗ್ಗೆ ಬರೆದ ಮೇಲೆ, ಅವರ ಕೆಲಸದ ಬಗ್ಗೆ ಇನ್ನಷ್ಟು ಕುತೂಹಲ ಹೆಚ್ಚಿತು. ಹೇಗೆ ನೆರವು ನೀಡ್ತಾರೆ? ಮಕ್ಕಳನ್ನು ಹೇಗೆ ಸೆಲೆಕ್ಟ್ ಮಾಡ್ತಾರೆ ? ಕಾಲೇಜ್‌ಗಳಿಂದ ಹೇಗೆ ಸೀಟ್ ಕೊಡಿಸ್ತಾರೆ ? ಆರಂಭದಲ್ಲಿ ಅವರು ಎದುರಿಸಿದ ಸವಾಲುಗಳೇನು ಅನ್ನೋ ಪ್ರಶ್ನೆ ಮೂಡಿತು. ಇದಕ್ಕೆಲ್ಲ ನಟ ಸೂರ್ಯ ಅವರೇ ವಿವರಣೆ ಕೊಟ್ಟಿದ್ದಾರೆ.

ಓವರ್ ಟು ಸೂರ್ಯ : 'ಫೌಂಡೇಷನ್ ಆರಂಭಿಸಿದಾಗ 100 ಮಕ್ಕಳನ್ನು ಓದಿಸಬೇಕೆಂಬುದು ನಮ್ಮ ಗುರಿಯಾಗಿತ್ತು. ಆದ್ರೆ, ಸಾವಿರಾರು ಅರ್ಜಿಗಳು ಬಂದವು. ಅವರೆಲ್ಲರನ್ನೂ ಸೆಲೆಕ್ಟ್ ಮಾಡುವುದೇ ದೊಡ್ಡ ಸವಾಲಾಗಿತ್ತು. ಅವರ ಊರು ಯಾವುದು ? ಅವರ ಆರ್ಥಿಕ ಸ್ಥಿತಿ, ಅಪ್ಪ, ಅಮ್ಮ ಇದ್ದಾರಾ ? ಎಷ್ಟು ಮಾರ್ಕ್ಸ್ ಗಳಿಸಿದ್ದಾರೆ ? ಅವರ ಆಸೆ, ಭವಿಷ್ಯದ ಕನಸು ಏನು



ಎಂಬುದನ್ನೆಲ್ಲ ಅರಿತು, ಅಂಥ ಬಡ ವಿದ್ಯಾರ್ಥಿಗಳನ್ನು ಗುರುತಿಸಿ, ಅವರನ್ನು ಕಾಲೇಜಿಗೆ ಸೇರಿಸಬೇಕಿತ್ತು. ತಂದೆ, ತಾಯಿ ಇಲ್ಲದ ಮಕ್ಕಳು, ತಾಯಿ ಇಲ್ಲದ ಕುಡುಕ ಅಪ್ಪ, ಕೂಲಿ ಮಾಡುತ್ತಾ ಓದುತ್ತಿದ್ದವರು, ಊಟಕ್ಕೂ ಪರದಾಡುತ್ತಿದ್ದವರು, ಫೀಸ್ ಕಟ್ಟಲಾಗದೇ ಕಾಲೇಜ್ ಬಿಟ್ಟವರು, ಯಾವ ಕಾಲೇಜ್ ಸೇರಬೇಕೆಂಬುದು ತಿಳಿಯದೇ ಅಸಹಾಯಕರು.. ಹೀಗೆ ನಾನಾ ಸಮಸ್ಯೆಯ ಸುಳಿಯಲ್ಲಿದ್ದವರನ್ನು ಸೆಲೆಕ್ಟ್ ಮಾಡಿದವು.

ಆರಂಭದಲ್ಲಿ ಪ್ರಮುಖ ಕಾಲೇಜುಗಳನ್ನು ಸಂಪರ್ಕಿಸಿ, ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೀಟು ಕೊಡುವಂತೆ ಮನವಿ ಮಾಡಿದೆವು. ನಮ್ಮ ಉದ್ದೇಶ ಅರಿತ ಕಾಲೇಜುಗಳು 1, 2 ಸೀಟ್ ಕೊಡಲು ಶುರು ಮಾಡಿ ಈಗ ವರ್ಷಕ್ಕೆ 700 ಸೀಟ್ ಕೊಡುತ್ತಿವೆ. ಹೀಗೆ, ಸೀಟ್ ಪಡೆದ ಹಳ್ಳಿಗಳ ಕಡುಬಡ ವಿದ್ಯಾರ್ಥಿಗಳು, ಕಾಲೇಜಿಗೆ ಹೋಗಲು ಶುರು ಮಾಡಿದ ಮೇಲೆ ಒಂದೊಂದೇ ಸಮಸ್ಯೆ ಎದುರಾಯ್ತು.

ತಮಿಳಿನಲ್ಲೇ ಓದಿದ್ದ ಬಹುತೇಕ ವಿದ್ಯಾರ್ಥಿಗಳಿಗೆ ಇಂಗ್ಲೀಷ್ ದೊಡ್ಡ ಸಮಸ್ಯೆಯಾಯ್ತು, ಕೀಳರಿಮೆ ಬೆಳೆಯಿತು. ಕಲ್ಚರಲ್ ಶಾಕ್‌ಗೆ ಸಿಲುಕಿ ಊರಿಗೆ ಓಡುವ ನಿರ್ಧಾರಕ್ಕೆ ಬಂದಿದ್ದರು. ಓದಿನಲ್ಲಿ ಮಂಕಾಗತೊಡಗಿದರು.

ಕೆಲವರು ನನ್ನಿಂದ ಓದಲಾಗದು ಎಂಬ ನಿರಾಸೆಗೆ ಸಿಲುಕಿ ಆತ್ಮಹತ್ಯೆಯ ಯೋಚನೆಗೆ ಬಿದ್ದರು. ಇದು ನನ್ನನ್ನು ಭಯಭೀತಗೊಳಿಸಿತು. ತಕ್ಷಣವೇ ಮನೋವೈದ್ಯರು, ಇಂಗ್ಲೀಷ್ ಟ್ರೈನಿಂಗ್ ನೀಡುವವರ ತಂಡ ನೇಮಿಸಿದೆ. ಮಕ್ಕಳಲ್ಲಿ ಮನೋಸ್ಥೈರ್ಯ ಹೆಚ್ಚಿಸಿ, ಗುರಿ ಮುಟ್ಟುವ ಛಲ ತುಂಬಿದೆವು. ವರ್ಷಗಟ್ಟಲೆ ಅಣ್ಣ, ಅಕ್ಕನಾಗಿ ಮಕ್ಕಳ ಬೆನ್ನಿಗೆ ನಿಂತು, ಅವರನ್ನು ಗೆಲುವಿನ ಹಾದಿಗೆ ತಂದು ನಿಲ್ಲಿಸಿದೆವು. ಅರ್ಧದಲ್ಲೇ ವಿದ್ಯಾಭ್ಯಾಸ ಮೊಟಕುಗೊಳಿಸದಂತೆ ಎಚ್ಚರಿಕೆ ವಹಿಸಿದೆವು. ನೆರವು ಪಡೆದ ಪ್ರತಿ ಮಕ್ಕಳು, ತಾವು ಕಂಡ ಕನಸು ನನಸು ಮಾಡಿಕೊಂಡರು. ಎಲ್ಲ ಸವಾಲುಗಳನ್ನು ಮೆಟ್ಟಿ ನಿಂತರು.

ಇಂಗ್ಲೀಷ್ ಕಲಿತರು, ದೊಡ್ಡ ದೊಡ್ಡ ಕಾಲೇಜುಗಳಲ್ಲಿ ಆತ್ಮವಿಶ್ವಾಸದಿಂದ ಓದು ಮುಗಿಸಿದರು. ನಾನು ಮಾಡಿದ ಸಹಾಯ ದೊಡ್ಡದಲ್ಲ. ಆದ್ರೆ, ಎಲ್ಲ ಕೊರತೆಗಳ ನಡುವೆ, ಓದಲೇ ಬೇಕು, ಉನ್ನತ ಸ್ಥಾನಕ್ಕೆ ಏರಲೇ ಬೇಕೆಂಬ ಹಠದಿಂದ ಓದಿ ತಮ್ಮ ಭವಿಷ್ಯ ಕಟ್ಟಿಕೊಂಡಿದ್ದು ಅವರ ದೊಡ್ಡ ಸಾಧನೆ..

ಹೀಗೆಂದು ಮಾತು ಮುಗಿಸಿದರು ಸೂರ್ಯ.

ಒಬ್ಬ ನಟನಾಗಿ ತಾನು, ತನ್ನ ಕುಟುಂಬ ಎಂದಷ್ಟೇ ಯೋಚಿಸದೇ ಸಾಮಾಜಿಕ ಜವಾಬ್ದಾರಿ ಅರಿತು ಸಾವಿರಾರು ಕಡುಬಡ ಮಕ್ಕಳನ್ನು ಡಾಕ್ಟರ್, ಎಂಜಿನಿಯರ್ ಓದಿಸುವ ಮೂಲಕ ನಟ ಸೂರ್ಯ ವಿದ್ಯಾ ಕ್ರಾಂತಿಯನ್ನೇ ಮಾಡಿದ್ದಾರೆ.

ಎಂಜಿನಿಯರಿಂಗ್, ಮೆಡಿಕಲ್ ಕಾಲೇಜ್ ನಡೆಸ್ತಿರೋ ನಮ್ಮ ರಾಜಕಾರಣಿಗಳಿಗೆ, ಕೋಟಿಗಟ್ಟಲೇ ಸಂಭಾವನೆ ಪಡೆಯುವ ಸ್ಟಾರ್ ನಟರಿಗೆ ಇಂಥದ್ದೊಂದು ಸಾಮಾಜಿಕ ಜವಾಬ್ದಾರಿ ಬಂದುಬಿಟ್ಟರೆ ? ಉತ್ತರ ಕರ್ನಾಟಕದ ಹಿಂದುಳಿದ ಜಿಲ್ಲೆಗಳ ಮಕ್ಕಳ ಭವಿಷ್ಯ ಬೆಳಗಿ ಬಿಟ್ಟೀತು.

ಈ ನೆಲ ಸೂರ್ಯನಂಥವರಿಗಾಗಿ ಕಾಯುತ್ತಿದೆ..!

– **ಶೋಭಾಮಳವಳ್ಳಿ**

# ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ : ಚಂದ್ರಶೇಖರ ಬಿ ಕಂದಕೂರ
## ಸಂದಿಗವಾಡ ಗ್ರಾಮದಲ್ಲಿ ಭಾವಡಿ ಹಾಗೂ ಅರಿವು ಕೇಂದ್ರ ಉದ್ಘಾಟನೆ

**ರೋಣ** : ಮಲ್ಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಂದಿಗವಾಡ ಗ್ರಾಮದಲ್ಲಿ ಗ್ರಾಮ ಪಂಚಾಯತಿ ಅನುದಾನದ ಅಡಿಯಲ್ಲಿ ಅಭಿವೃದ್ಧಿಪಡಿಸಲಾದ ಗ್ರಾಮ ಭಾವಡಿ ಮತ್ತು ಅರಿವು ಕೇಂದ್ರ (ಗ್ರಂಥಾಲಯ) ದ ಉದ್ಘಾಟನಾ ಸಮಾರಂಭವು ಇಂದು ವಿಜೃಂಭಣೆಯಿಂದ ನಡೆಯಿತು.

ತಹಶೀಲ್ದಾರದ ನಾಗರಾಜ್ ಕೆ ರೋಣ ಗ್ರಾಮ ಆಡಳಿತ ಅಧಿಕಾರಿ ಕೊಠಡಿಯನ್ನು ಉದ್ಘಾಟಿಸಿ, ಕರ್ನಾಟಕ ಸರಕಾರದ ಪೋತಿ ಖಾತೆ ಕಾರ್ಯಕ್ರಮ ದಡಿ ರಾಜ್ಯದ ಮೊದಲ ಪೋತಿ ಖಾತೆಯಾಗಿ ಈ ಕೊಠಡಿ ಆಗಿದೆ ಗ್ರಾಮಸ್ಥರು ಈ ಸೌಲಭ್ಯದ ಸದುಪಯೋಗ ವನ್ನು ಪಡೆಯಬೇಕೆಂದು ಕರೆ ನೀಡಿದ ಅವರು, ಕಂದಾಯ ಇಲಾಖೆಯ ಸಿಬ್ಬಂದಿಗಳಿಗೆ ಹಾಗೂ ಗ್ರಾಮ ಆಡಳಿತ ಅಧಿಕಾರಿ ಶ್ರೀ ವಾಯ್. ಡಿ. ಬಡಿಗೇರ ಇವರಿಗೆ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪೋತಿ ಖಾತೆಯಿಂದ ವಾರಸರಾದ ರೈತರಿಗೆ ಪಹಣಿಗಳನ್ನು ವಿತರಿಸಲಾಯಿತು.

. ಮಕ್ಕಳು, ಯುವಕರು ಹಾಗೂ ವಯಸ್ಕರು ಮೊಬೈಲ್‌ನಿಂದ ದೂರವಿದ್ದು, ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು. "ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ. ಎಲ್ಲರೂ ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಬೇಕು. ಶಿಕ್ಷಣದಲ್ಲಿ ಶಿಕ್ಷೆ ಮತ್ತು ಬಹುಮಾನ ಎರಡೂ ಅವಶ್ಯಕ. ಶಿಕ್ಷಕರು



ಮಕ್ಕಳನ್ನು ಶಿಸ್ತಿನಿಂದ ಕಲಿಸಿದಾಗ ಪೋಷಕರು ವಿರೋಧಿಸಬಾರದು. ಒಂದು ವೇಳೆ ಶಿಕ್ಷಕರು ಬುದ್ಧಿ ಕಲಿಸದಿದ್ದರೆ, ಮುಂದೆ ಪೊಲೀಸ್ ಸ್ಟೇಷನ್ ನಲ್ಲಿ ಬುದ್ಧಿ ಕಲಿಯಬೇಕಾಗುತ್ತದೆ," ಎಂದು ಹಾಸ್ಯ ಚಟಾಕಿಯಿಂದ ತಿಳಿಸಿದರು. ಅಲ್ಲದೆ, ಗ್ರಾಮಸ್ಥರು ಪ್ರತಿವರ್ಷ ತಮ್ಮ ಮನೆ, ಜಾಗೆ ಮತ್ತು ನೀರಿನ ತೆರಿಗೆಯನ್ನು ಸಕಾಲದಲ್ಲಿ ಪಾವತಿಸಿ ಗ್ರಾಮದ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಕರೆ ನೀಡಿದರು. ನೀರಿನ ಸಂರಕ್ಷಣೆ ಮತ್ತು ನೈರ್ಮಲ್ಯದ ಮಹತ್ವವನ್ನು ಒತ್ತಿ ಹೇಳಿದ ಅವರು, ನೀರಿನ ಅನಗತ್ಯ ಬಳಕೆ ತಡೆಗಟ್ಟುವಂತೆ ಸೂಚಿಸಿದರು.

ಈ ಕಾರ್ಯಕ್ರಮಕ್ಕೆ ತಹಶೀಲ್ದಾರದ ನಾಗರಾಜ ಕೆ ಹಾಗೂ ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಧಾರ್ಮಿಕ ಸಾನ್ನಿಧ್ಯವನ್ನು ವೇ.ಮೂ. ಸಿದ್ದಯ್ಯ ಹಿರೇಮಠ ಇವರು ವಹಿಸಿದ್ದರ, ಅಧ್ಯಕ್ಷತೆಯನ್ನು ಹನಮಂತಗೌಡ ಹೂಲ್ಲೂರ ಇವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಕರಿಯಮ್ಮ ಚಲವಾದಿ, ಸದಸ್ಯರಾದ ಶ್ರೀಮತಿ ಬಸಮ್ಮ ಟಕ್ಕೆದ, ಕಸ್ತೂರೆವ್ವ ಜಂಪಣ್ಣನವರ, ಮೈಲಾರಪ್ಪ ಕರಿಲಿಂಗಣ್ಣವರ, ಕಮಲಾಕ್ಷಿ ಭರಮಗೌಡ್ರ, ದ್ರಾಕ್ಷಾಯಣಿ ಹಡಪದ, ಸುಮಂಗಲಾ ಕೊಳ್ಳದ, ಗಿರಿಜವ್ವ ಹಟ್ಟಿ, ವಿಕ್ರಮ ದಾನರಡ್ಡಿ, ಯಲ್ಲಪ್ಪ ಮಳಗಿ, ವೀರನಗೌಡ ಕಟ್ಟಿ, ಸುರೇಶ ವತ್ತಟ್ಟಿ ಸೇರಿದಂತೆ ಗ್ರಾಮದ ಹಿರಿಯರು, ಗುರುಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಡಿ. ಎಸ್. ಹಂಚಿನಾಳ ಇವರು ಸ್ವಾಗತ ಭಾಷಣ ಮಾಡಿದರು, ಹಾಗೂ ಮುತ್ತು ಅರಹುಣಸಿ ಇವರು ವಂದನಾರ್ಪಣೆ ಸಲ್ಲಿಸಿದರು.

# ಹಸು, ಕುರಿ & ಕೋಳಿ ಸಾಕಾಣಿಕೆ ಉಚಿತ ತರಬೇತಿ

**ದಾವಣಗೆರೆ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಟ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಹಸು, ಕುರಿ & ಕೋಳಿ ಸಾಕಾಣಿಕೆ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ

ಸೆಪ್ಟೆಂಬರ್ 8 ರಿಂದ ತರಬೇತಿಯು ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ರುಟ್ ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಟ್ ಸೆಟ್ ಸಂಸ್ಥೆಯ ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ತಿಳಿಸಿದ್ದಾರೆ.

# ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಿಂದ ಆರ್ಥಿಕ ಸಬಲೀಕರಣ : ಸಚಿವ ಸುಧಾಕರ್



**ಚಿತ್ರದುರ್ಗ:** ದೇಶದ ಇತಿಹಾಸದಲ್ಲಿಯೇ ಮೊದಲು ಬಾರಿಗೆ ರಾಜ್ಯದಲ್ಲಿ ಜಾರಿಗೆ ತಂದ ಪಂಚ ಗ್ಯಾರಂಟಿ ಯೋಜನೆಗಳು, ನಿರ್ಗತಿಕರು, ಬಡವರು, ಕೆಳವರ್ಗದವರು, ಸಮಾಜದ ಅಂಚಿನಲ್ಲಿರುವವರು ಹಾಗೂ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸಹಾಯಕವಾಗಿವೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಲಾದ 79ನೇ ಸ್ವಾತಂತ್ರ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ, ಕವಾಯತು ತಂಡಗಳಿಂದ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿಗಳು ಪ್ರತಿಯೊಬ್ಬರೂ ಸಮಾಜದಲ್ಲಿ ಘನತೆಯಿಂದ ಬದುಕಲು ದಾರಿ ಮಾಡಿಕೊಟ್ಟಿವೆ. ರಾಷ್ಟ್ರಕವಿ ಕುವೆಂಪು ಅವರ "ಬಡತನವ ಬುಡಮಟ್ಟ ಕೀಳಬನ್ನಿ" ಎನ್ನುವ ಆಶಯವನ್ನು ಸಾಕರಗೊಳಿಸುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಬದ್ಧವಾಗಿದೆ. ಬಡತನ ನಿವಾರಣೆ, ಉದ್ಯೋಗ ಅವಕಾಶ ಹೆಚ್ಚಿಸಲು ಪ್ರನಾಳಿಕೆಯಲ್ಲಿ ಘೋಷಿಸಿದ ಯೋಜನೆಗಳನ್ನು ಜಾರಿ ಮಾಡಿ ಸರ್ಕಾರ ನುಡಿದಂತೆ ನಡೆದಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿಯೋಜನೆ, ಗೃಹಜ್ಯೋತಿ, ಯುನಿಧಿ ಯೋಜನೆಗಳು ರಾಜ್ಯಾದ್ಯಂತ ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಲ್ಲಿ ಅಂತ್ಯೋದಯ ಮತ್ತು ಬಿ.ಪಿ.ಎಲ್. ಪಡಿತರ ಚೀಟಿಯಲ್ಲಿರುವ ಪ್ರತಿ ಸದಸ್ಯರಿಗೆ ರೂ.170/- ರಂತೆ ಡಿ.ಬಿ.ಟಿ ಮೂಲಕ ಜುಲೈ 2023 ರಿಂದು ಡಿಸೆಂಬರ್-2024 ರವರೆಗೆ ಒಟ್ಟು ರೂ.370.01 ಕೋಟಿ ಹಣವನ್ನು ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಪಾವತಿಮಾಡಲಾಗಿದೆ. ಜೊತೆಗೆ ಪ್ರತಿ ಸದಸ್ಯರಿಗೆ ಡಿ.ಬಿ.ಟಿ ಹಣದ ಬದಲಾಗಿ ಫೆಬ್ರವರಿ-2025ರ ಮಾಹೆಯಿಂದ ಪ್ರತಿ ಫಲಾನುಭವಿಗಳಿಗೆ ಹೆಚ್ಚುವರಿ 05 ಕೆ.ಜಿ ಯಂತೆ ಪ್ರತಿ ಮಾಹೆಗೆ 6313 ಮೆಟ್ರಿಕ್ ಟನ್ ಅಕ್ಕಿಯನ್ನು ವಿತರಣೆ ಮಾಡಲಾಗುತ್ತಿದೆ.

ಗೃಹ ಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,78,367 ಫಲಾನುಭವಿಗಳಿದ್ದು, ಈವರೆಗೆ ಒಟ್ಟು ರೂ.343.87 ಕೋಟಿ ವ್ಯಯ ಮಾಡಲಾಗಿದೆ. ಮಹಿಳೆಯರ ಆರ್ಥಿಕ ವಾಗಿ ಸಬಲೀಕರಣ ಗೊಳಿಸುವ ನಿಟ್ಟಿನಲ್ಲಿ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೊಳಿ ಸಲಾಗಿದೆ. ಜಿಲ್ಲೆಯಲ್ಲಿ ಮೇ 2025ರ ಅಂತ್ಯದವರೆಗೆ ಒಟ್ಟು 3,87,490 ಫಲಾನುಭವಿಗಳಿಗೆ ರೂ.1,398 ಕೋಟಿ ರೂಪಾಯಿಗಳನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಪಾವತಿಸಲಾಗಿದೆ. ಈ ಗೃಹಲಕ್ಷ್ಮಿ ಯೋಜನೆಯನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ವಿಸ್ತರಿಸಿದ ಫಲವಾಗಿ ಜಿಲ್ಲೆಯಲ್ಲಿ 28 ಜನ ಲಿಂಗತ್ವ ಅಲ್ಪಸಂಖ್ಯಾತರು ಈ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ. ಯುವನಿಧಿ ಯೋಜನೆಯಡಿಯಲ್ಲಿ ಜನವರಿ 2024 ರಿಂದ ಮೇ-2025ರವರೆಗೆ ಒಟ್ಟು ರೂ.15 ಕೋಟಿ ಯುವ-ನಿರುದ್ಯೋಗಿಗಳ ಖಾತೆಗೆ ನೇರಪಾವತಿ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಜಿಲ್ಲಾ ವಿಭಾಗದ ಸರ್ಕಾರಿ ಬಸ್‌ಗಳಲ್ಲಿ 5 ಕೋಟಿಗೂ ಅಧಿಕ ಮಹಿಳೆಯರು ಪ್ರಯಾಣಿಸಿದ್ದಾರೆ. ಯೋಜನೆಗೆ ಜಿಲ್ಲೆಯಲ್ಲಿ ಒಟ್ಟು ರೂ. 208 ಕೋಟಿ ರೂಪಾಯಿ ಖರ್ಚುಮಾಡಲಾಗಿದೆ ಎಂದು ಸಚಿವ ಡಿ.ಸುಧಾಕರ್ ಮಾಹಿತಿ ನೀಡಿದರು.

**ಶೀಘ್ರ 296 ಕಂದಾಯ ಗ್ರಾಮ ಘೋಷಣೆ: ಹಕ್ಕು ಪತ್ರಗಳ ವಿತರಣೆ :**

ಜಿಲ್ಲೆಯಲ್ಲಿ ಜನವಸತಿ ಇರುವ 296 ಗ್ರಾಮಗಳಿಗೆ ಕಂದಾಯ ಗ್ರಾಮದ ಮಾನ್ಯತೆ ನೀಡಲು ಗುರುತಿಸಲಾಗಿದೆ. ಈ ಗ್ರಾಮಗಳಲ್ಲಿ ವಾಸಿಸುವ ಕುಟುಂಬಗಳಿಗೆ ಹಕ್ಕು ಪತ್ರಗಳನ್ನು ನೀಡಲಾಗುವುದು. ಈಗಾಗಲೇ 5174 ಫಲಾನುಭವಿಗಳನ್ನು ಗುರುತಿಸಲಾಗಿದೆ. ಮುಂದಿನ ದಿನಗಳಲ್ಲಿ 7976 ಹಕ್ಕು ಪತ್ರಗಳನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ.

ಮಹತ್ವಾಂಕಾಂಕ್ಷಿ ಭದ್ರಾ ಮೇಲ್ದಂಡೆ ಯೋಜನೆಯು ಸಾಕಾರಗೊಳ್ಳುವ ದಿನಗಳು ಸಮೀಪಿಸುತ್ತಿವೆ. ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಪರಿಗಣಿಸುವಂತೆ ಈಗಾಗಲೇ ಶಿಫಾರಸ್ಸು ಮಾಡಲಾಗಿರುತ್ತದೆ. ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹಿರಿಯೂರು, ಚಳ್ಳಕೆರೆ, ಚಿತ್ರದುರ್ಗ, ಹೊಳಲ್ಕೆರೆ ತಾಲ್ಲೂಕುಗಳಡಿಯಲ್ಲಿನ ಒಟ್ಟು 73,946 ಹೆಕ್ಟೇರ್ ಪ್ರದೇಶಕ್ಕೆ ಹನಿನೀರಾವರಿ ಮೂಲಕ ನೀರೊದಗಿಸಲು ಹಾಗೂ 86 ಕೆರೆಗಳಿಗೆ ಕುಡಿಯುವ ನೀರು ಪೂರೈಸಲು ರೂ. 2677 ಕೋಟಿಗಳ ವೆಚ್ಚದಲ್ಲಿ 06 ಪ್ಯಾಕೇಜ್‌ಗಳಲ್ಲಿ ಈಗಾಗಲೇ ಟೆಂಡರ್ ಕರೆಯಲಾಗಿದೆ. ಮುಂದಿನ ದಿನಗಳಲ್ಲಿ ಬರದ ನಾಡು ಚಿತ್ರದುರ್ಗ, ಕೃಷಿಯ ನಾಡಾಗಿ ಬದಲಾಗಿಸಲು ನಮ್ಮ ಸರ್ಕಾರ ಕಂಕಣಬದ್ಧವಾಗಿದೆ. ರಾಜ್ಯದ ಸಮಗ್ರ ಅಭಿವೃದ್ಧಿ ಅದರಲ್ಲೂ ಗ್ರಾಮೀಣ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ವಿದ್ಯಾಭ್ಯಾಸಕ್ಕೆ ಆದ್ಯತೆಯನ್ನು ನೀಡುತ್ತಿದೆ. ಸಂಧ್ಯಾ ಸುರಕ್ಷಾ ಯೋಜನೆಯಡಿ, ವೃದ್ಧಾಪ್ಯ ವೇತನ, ವಿಧವಾ ವೇತನ, ವಿಕಲ ಚೇತನ ಮಾಶಾಸನ ಜೊತೆಗೆ ಮಾತೃಪೂರ್ಣ ಯೋಜನೆ, ಪೋಷಣೆ ಅಭಿಯಾನ ಯೋಜನೆ, ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ, ಸ್ವಾಧಾರ ಯೋಜನೆ, ಸಾಂತ್ವನ ಯೋಜನೆಗಳ ಮುಖಾಂತರ ಎಲ್ಲ ವರ್ಗದವರ ಏಳಿಗೆಗಾಗಿ ನಮ್ಮ ಸರ್ಕಾರವು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಇದೇ ವೇಳೆ ಸಚಿವ ಡಿ.ಸುಧಾಕರ್ ತುರವನೂರು ಗ್ರಾಮದಲ್ಲಿ ನಡೆದ ಈಚಲು ಮರದ ಸತ್ಯಾಗ್ರಹಕ್ಕೆ ಹಾಗೂ ಸ್ವಾತಂತ್ರ್ಯ ಹೋರಾಟದಲ್ಲಿ ಜಿಲ್ಲೆಯ ಮಹನೀಯರ ಕೊಡುಗೆಗಳನ್ನು ಸ್ಮರಿಸಿದರು.

ಆಕರ್ಷಕ ಪಥ ಸಂಚಲನ: ಭಾರತ ಸ್ವಾತಂತ್ರ್ಯ ದಿನಾಚರಣೆಯ ಪಥ ಸಂಚಲನದಲ್ಲಿ ಡಿಎಆರ್ ಆರ್‌ಪಿಐ ಜೆ.ಬಿ.ಶಿವರಾಜ್ ಅವರು ಪೇರಡ್ ಕಮಾಂಡರ್ ಆಗಿ ಕಾರ್ಯನಿರ್ವಹಿಸಿದರು.

ನಾಗರಿಕ ಪೊಲೀಸ್, ಸಶಸ್ತ್ರ ಪೊಲೀಸ್, ಅರಣ್ಯ, ಗೃಹ ರಕ್ಷಕದಳ, ಎನ್.ಸಿ.ಸಿ, ಸೌಟ್ಸ್ ಮತ್ತು ಗೈಡ್ಸ್ ಸೇರಿದಂತೆ ಹಲವು ಶಾಲಾ ವಿದ್ಯಾರ್ಥಿಗಳು ಆಕರ್ಷಕ ಪಥ ಸಂಚಲನ ನಡೆಸಿದರು. ಪೊಲೀಸ್ ವಾದ್ಯ ವೃಂದ ಕವಾಯತಿನಲ್ಲಿ ಸುಶ್ರಾವ್ಯವಾಗಿ ವಾದ್ಯ ನುಡಿಸಿದರು.

ಇದೇ ಸಂದರ್ಭದಲ್ಲಿ ಅಂಗಾಂಗ ದಾನ ಮಾಡಿದ ಚಳ್ಳಕೆರೆ ತಾಲ್ಲೂಕಿನ ಜಂಬಯ್ಯನಹಟ್ಟಿಯ ರೇಖಾ ಹಾಗೂ ಚಿತ್ರದುರ್ಗ ನಗರಸಭೆಯ ಪೌರಕಾರ್ಮಿಕರ ಪರವಾಗಿ ಪ್ರಮೀಳಾ ಹಾಗೂ ನಾಗರಾಜ್ ಅವರನ್ನು ಸನ್ಮಾನಿಸಲಾಯಿತು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕೋಟೆ ಸರ್ಕಾರಿ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ವಿದ್ಯಾರ್ಥಿಗಳು ಪಹಲ್ಗಾಮ್ ಉಗ್ರರ ದಾಳಿ ಹಾಗೂ ಇದಕ್ಕಾಗಿ ಪ್ರತ್ಯುತ್ತರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಚರಣೆ ಕುರಿತ ನೃತ್ಯ ರೂಪಕ ಪ್ರಸ್ತುತ ಪಡಿಸಿದರು. ಎಸ್.ಜೆ.ಎಂ. ವಿದ್ಯಾಸಂಸ್ಥೆ ವಿದ್ಯಾರ್ಥಿಗಳು ಹರ್ ಘರ್ ತಿರಂಗಾ ನೃತ್ಯ ಪ್ರದರ್ಶಿಸಿದರು. ಡಿ.ಎಸ್. ಹಳ್ಳಿಯ ಜ್ಞಾನ ಪೂರ್ಣ ವಿದ್ಯಾಸಂಸ್ಥೆ ವಿದ್ಯಾರ್ಥಿಗಳು ರೈತರು, ವಿಜ್ಞಾನಿಗಳು, ಯೋಧರು, ಕ್ರೀಡಾಪಟುಗಳು ಕೊಡುಗೆಯ ಮಹತ್ವ ಸಾರುವ ನೃತ್ಯ ರೂಪಕ ಪ್ರಸ್ತುತ ಪಡಿಸಿದರು.

ಸ್ವಾತಂತ್ರ್ಯೋತ್ಸವ ಆಚರಣೆಯಲ್ಲಿ ಸಂಸದ ಗೋವಿಂದ ಎಂ.ಕಾರಜೋಳ ಭಾಗವಹಿಸಿದ್ದರು. ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸಿದ್ದರು. ವಿಧಾನಪರಿಷತ್ ಸದಸ್ಯ ಕೆ. ಎಸ್.ನವೀನ್ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್. ಸುಮಿತ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ. ಸಿಇಓ ಡಾ.ಆಕಾಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಆಕಾಶವಾಣಿಯ ಡಾ. ನವೀನ್ ಮಸ್ಕಲ್ ಹಾಗೂ ಸಂಗೀತ ಶಿಕ್ಷಕಿ ಜಗದೀಶ್ವರಿ ಹಿರೇಮಠ ಅವರು ಕಾರ್ಯಕ್ರಮ ನಿರೂಪಿಸಿದರು.

# ವಿದ್ಯಾರ್ಥಿಗಳು ಮಾದಕ ವ್ಯವಸನದಿಂದ ದೂರವಿರಿ: ಎಎಸ್ಪಿ ಪರಮೇಶ್ವರ್



**ದಾವಣಗೆರೆ:** ಮಾದಕ ದ್ರವ್ಯ ಸೇವನೆ ಮಾಡುವುದು ಅತ್ಯಂತ ಹೀನ ಕೃತ್ಯವಾಗಿದ್ದು, ಯುವ ಸಮೂಹ ಮಾದಕ ಚಟಕ್ಕೆ ಅಂಟಿಕೊಳ್ಳದೆ, ಸಾಧನೆಯ ಕಡೆಗೆ ಮನಸ್ಸು ಮಾಡಬೇಕು ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಪರಮೇಶ್ವರ್ ಹೆಗಡೆ ಕರೆ ನೀಡಿದರು.

ದಾವಣಗೆರೆ ಜಿಲ್ಲಾ ಪೊಲೀಸ್. ಬಡಾವಣೆ ಪೊಲೀಸ್ ಠಾಣೆ, ದಾವಣಗೆರೆ (12 ನೇ ಸುಧಾರಿತ ಬೀಟ್) ಇವರ ಸಂಯುಕ್ತಾಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ನಗರದ ಸೈನ್ಸ್ ಅಕಾಡೆಮಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧದ ಜನ ಜಾಗೃತಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಂದಿನ ಮೊಬೈಲ್ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಬದುಕನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಸಾಧನೆ ಮಾಡುವ ಕಡೆ ಗಮನ ಹರಿಸುತ್ತಿಲ್ಲ. ಡ್ರಗ್ಸ್ ಬಳಕೆ, ಸಾಗಾಟ, ಮತ್ತು ಸೇವನೆಗೆ ಪ್ರಚೋದನೆಯೂ ಅತ್ಯಂತ ದೊಡ್ಡ ಅಪರಾಧ. ಇತ್ತೀಚೆಗೆ ದಾವಣಗೆರೆಯಲ್ಲಿ ಅನೇಕ ಡ್ರಗ್ಸ್ ಪೆಡ್ಲರ್‌ಗಳನ್ನು ನಾವು ಯಶಸ್ವಿಯಾಗಿ ಬಂಧಿಸಿದ್ದೇವೆ. ಬಹುತೇಕ ಡ್ರಗ್ಸ್ ಪೆಡ್ಲರ್ ಗಳು ನಮಗೆ ಶಾಲಾ-ಕಾಲೇಜುಗಳ ಬಳಿ, ಬೀಡಾ ಅಂಗಡಿಗಳ ಬಳಿಯಲ್ಲಿ ಸಿಕ್ಕಿದ್ದಾರೆ ಎಂದು ತಿಳಿಸಿದರು.

ದಾವಣಗೆರೆ ನಗರ ಉಪ ವಿಭಾಗದ ಉಪ ಅಧಿಕ್ಷಕ ಶರಣ ಬಸವೇಶ್ವರ ಭೀಮರಾವ್ ಮಾತನಾಡಿ, ನಾವು ನಮ್ಮ ಸುಂದರವಾದ ಜೀವನವನ್ನು ಹಾಳು ಮಾಡಿಕೊಳ್ಳಬಾರದು. ಹಿಂದೆಲ್ಲಾ ಶತ್ರುಗಳು ಅಣುಬಾಂಬುಗಳ ಮೂಲಕ ದ್ವೇಷ ಸಾಧನೆ ಮಾಡುವುದನ್ನು ಪ್ರತ್ಯಕ್ಷ ಯುದ್ಧ ಮಾಡುವುದನ್ನು ಕೇಳಿದ್ದೇವೆ. ಆದರೆ ಈಗ ಹೊಸ ವಿಧಾನದಲ್ಲಿ ಶತ್ರುಗಳು ಮೊಬೈಲ್, ರೀಲ್ಸ್, ಮಾದಕ ವಸ್ತುಗಳನ್ನು ವಿತರಿಸುವ ಮೂಲಕ ಯುವ ಸಮೂಹವನ್ನು ಹಾಳು ಮಾಡಿ ದೇಶದ ಸರ್ವನಾಶಕ್ಕೆ ಹೊಂಚು ಹಾಕುತ್ತಾರೆ ಎಂದು ತಿಳಿಸಿದರು. ಮಾದಕ ವ್ಯಸನದಿಂದ ಯುವ ಸಮೂಹ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಮಾದಕ ವಸ್ತುಗಳ ದುಶ್ಚಟಕ್ಕೆ ಬಿದ್ದರೆ ಭವಿಷ್ಯ ಹಾಳಾಗುವುದರ ಜೊತೆಗೆ ಒಮ್ಮೆ ಎಫ್ ಐ ಆರ್ ಆದರೆ ಅದರಿಂದ ಹೊರಬರುವುದು ಕಷ್ಟಕರವಾದುದು. ಆದ್ದರಿಂದ ತಾವುಗಳು ಮಾದಕ ವ್ಯಸನದ ದುಶ್ಚಟಕ್ಕೆ ಬೀಳದೆ ಎಚ್ಚರಿಕೆಯಿಂದ ಇದ್ದು. ಹಾಗೆ ದುಶ್ಚಟಕ್ಕೆ ಬೀಳುವವರ ಅಥವಾ ಒಳಗಾದವರ ಬಗ್ಗೆ ತಮ್ಮ ಗಮನಕ್ಕೆ ಬಂದರೆ 112 ನಂಬರ್ಗೆ ಕರೆ ಮಾಡಿ ಸೂಚಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಡಾವಣಾ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ ಪೆಕ್ಟರ್ ಎಂ. ಆರ್. ಚೌಬೆ, ಸಂಸ್ಥೆಯ ನಿರ್ದೇಶಕರೂ ಹಾಗೂ ಪಾಲಿಕೆಯ ಮಾಜಿ ಮೇಯರ್ ಎಸ್ ಟಿ ವೀರೇಶ್, ಸಂಸ್ಥೆಯ ಕಾರ್ಯದರ್ಶಿಗಳಾದ ವೈ ದಿ ವಿನಯ್ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಜಿ. ವಿರೂಪಾಕ್ಷಪ್ಪ ಉಪಸ್ಥಿತರಿದ್ದರು. ಕಾಲೇಜಿನ ಇಂಗ್ಲಿಷ್ ಉಪನ್ಯಾಸಕರಾದ ಡಿ. ಸುಧನ್ವ ಪ್ರಾರ್ಥಿಸಿದರೆ, ಕಾಲೇಜಿನ ಉಪ ಪ್ರಾಂಶುಪಾಲರಾದ ಪ್ರದೀಪ ಕೆ ವಿ ಕಾರಂತ್ ಕಾರ್ಯಕ್ರಮ ನಿರ್ವಹಣೆ ಮಾಡಿದರು.

## ವಿವಿಧ ನಿಗಮಗಳಿಂದ ವಿವಿಧ ಆರ್ಥಿಕ ನೆರವು

**ಚಿಕ್ಕಮಗಳೂರು :** ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ನಿಯಮಿತ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸಾಲ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಅರ್ಹ ಫಲಾಪೇಕ್ಷಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿ ತಿಳಿಸಿದೆ. 2025-26ನೇ ಸಾಲಿನ ವಿವಿಧ ಯೋಜನೆಗಳಿಗೆ ಪರಿಶಿಷ್ಟ ಜಾತಿಯ ಅರ್ಹ ಫಲಾಪೇಕ್ಷಿಗಳಿಗೆ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಇಂತಿವೆ. ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಕುರಿ ಸಾಕಾಣಿಕೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ(ಬ್ಯಾಂಕ್‌ಗಳ ಸಹಯೋಗದೊಂದಿಗೆ) ಯಡಿ ಸ್ವಾವಲಂಬಿ ಸಾರಥಿ ಯೋಜನೆ, ಫಾಸ್ಟ್ ಫುಡ್ ಟ್ರಕ್ ಟ್ರೈಲರ್/ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್, ಹೈನುಗಾರಿಕೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿದೆ. ಆಯಾ ನಿಗಮದ ವ್ಯಾಪ್ತಿಯಲ್ಲಿ ಬರುವ ಸಮುದಾಯಗಳು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಮತ್ತು ಗ್ರಾಮ ಒನ್ ಮತ್ತು ಬೆಂಗಳೂರು ಒನ್ ಕೇಂದ್ರಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. 2023-24 ಹಾಗೂ 2024-25ನೇ ಸಾಲಿನಲ್ಲಿ ಆಯಾ ನಿಗಮದಡಿ ಆರ್ಥಿಕ ನೆರವು, ಸೌಲಭ್ಯ ಪಡೆದವರು ಪುನಃ ಇದೇ ನಿಗಮದ ಯಾವುದೇ ಯೋಜನೆಯಡಿ ಅರ್ಜಿ ಸಲ್ಲಿಸಲು ಮಾನದಂಡ ನಿಗದಿಪಡಿಸಿರುವ ಅವಧಿಯ ನಂತರವೂ ಅರ್ಹರಾಗಿರುವುದಿಲ್ಲ.

# ಮುಂದಿನ 16 ತಿಂಗಳು ಪುರಸಭೆ ಅಧ್ಯಕ್ಷರಾಗಿ ಮುಂದುವರೆಸಲು ಭಂಡಾರಿ ಶ್ರೀನಿವಾಸ್ ಮನವಿ



**ಕಡೂರು:** ಈ ಅವಧಿಯಲ್ಲಿ ಪುರಸಭೆಗೆ ಆಯ್ಕೆ ಆಗಿರುವ ಸದಸ್ಯರು ಆರಂಭದ 16 ತಿಂಗಳು ಸೇವೆ ಸಲ್ಲಿಸುವ ಅವಕಾಶದಿಂದ ವಂಚಿತರಾಗಿದ್ದು, ಆ ಅವಧಿಯನ್ನು ಹೊಂದಿಸಿ ಮುಂದಿನ 16 ತಿಂಗಳು ಸೇವೆ ಸಲ್ಲಿಸಲು ಅವಕಾಶ ಮಾಡಿಕೊಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಕಡೂರು ಪುರಸಭಾ ಅಧ್ಯಕ್ಷರಾದ ಭಂಡಾರಿ ಶ್ರೀನಿವಾಸ್ ತಿಳಿಸಿಯರು.

ಪುರಸಭೆಯ ಕನಕ ಭವನದ ಆವರಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 2025ರ ನವಂಬರ್ 8 ರಂದು ಪುರಸಭೆ, ನಗರಸಭೆಗಳಿಗೆ ಆಡಳಿತ ಅಧಿಕಾರಿಗಳ ನೇಮಕ ಮಾಡಲು ಸರ್ಕಾರ ಈಗಾಗಲೇ ಸೂಚನೆ ನೀಡಿದೆ, ಪುರಸಭಾ ಸದಸ್ಯರುಗಳಿಗೆ 16 ತಿಂಗಳ ಕೊರತೆಯಾಗಿದೆ ಪುರಸಭೆಗೆ ಆಯ್ಕೆಯಾಗಿ 16 ತಿಂಗಳ ಕಾಲ ಪುರಸಭೆಯ ಯಾವುದೇ ಸಭೆಗಳಿಗೆ ಸದಸ್ಯರುಗಳು ಹಾಜರಾಗಿಲ್ಲ, ಗೌರವ ಧನವನ್ನು ತೆಗೆದುಕೊಂಡಿರುವುದಿಲ್ಲ, ಆಯ್ಕೆಯಾಗಿದ್ದರು ಪುರಸಭಾ ಸದಸ್ಯರು ಎಂದು ಸರ್ಕಾರ ಗುರುತಿಸಲಿಲ್ಲ, ಆ 16 ತಿಂಗಳು ಅವಧಿಯ ಸೇವೆ ಮಾಡಲು ಸರ್ಕಾರ ಪುರಸಭಾ ಸದಸ್ಯರುಗಳಿಗೆ ಅವಕಾಶವನ್ನು ಮಾಡಿಕೊಡಬೇಕು ಎಂದರು.

1996 ರಿಂದ 2024 ವರೆಗೆ ಬದಲಾವಣೆಗಳು 30 ತಿಂಗಳಿಗೊಮ್ಮೆ ಇದ್ದು ಈಗ 10ನೇ ಅವಧಿಯ ಮೀಸಲಾತಿ ನಿಗದಿಯಾಗಿ ಪುರಸಭಾ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ನಡೆದಿದೆ. ಪುರಸಭಾ ಅಧ್ಯಕ್ಷರುಗಳ ಅವಧಿ ಮುಗಿದ ಒಂದು ತಿಂಗಳ ಒಳಗೆ ಚುನಾವಣೆ ನಡೆಯಬೇಕಿದೆ, 2023ರಿಂದ 24ರ ವರೆಗೆ 16 ತಿಂಗಳು ಅಂತರ ಉಂಟಾಗಿದೆ ಆದರೆ ಚುನಾವಣಾ ಆಯೋಗವು ಅವಧಿ ಮುಗಿದಿರುವ ಪುರಸಭೆಗಳಿಗೆ ಚುನಾವಣೆ ನಡೆಸಲು ಮಂದಾಗಿದೆ, 2025ರ ನವಂಬರ್ 2 ಕ್ಕೆ ಮೀಸಲಾತಿಯ ಹತ್ತನೇ ಅವಧಿ ಮುಗಿಯಲಿದ್ದು ನಂತರ ದಿನಗಳಲ್ಲಿ ಆಡಳಿತ ಅಧಿಕಾರಿಗಳ ನೇಮಕವಾಗಲಿದೆ, ಜನರಿಂದ ಆಯ್ಕೆ ಆಗಿರುವ ಪುರಸಭಾ ಸದಸ್ಯರುಗಳ 16 ತಿಂಗಳ ಅವಧಿಯ ಅನ್ಯಾಯವನ್ನು ಸರ್ಕಾರ ಸರಿದೋಗಿಸಬೇಕಿದೆ ಎಂದರು.

ಪುರಸಭಾ ಸದಸ್ಯರುಗಳಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಸರ್ಕಾರದ ಗಮನ ಸೆಳೆಯಲು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಬಳಿ ರಾಜ್ಯದ ಹಲವಾರು ಜಿಲ್ಲೆಗಳ ಅಧ್ಯಕ್ಷರುಗಳು ಹಾಗೂ ಪುರಸಭಾ ಸದಸ್ಯರುಗಳ ನಿಯೋಗ ತೆರಳಿ ಜನರಿಂದ ಆಯ್ಕೆ ಆಗಿರುವ ಸದಸ್ಯರುಗಳಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಮನವಿ ಸಲ್ಲಿಸಲಾಗುವುದು, ಇದೇ ಸಂದರ್ಭದಲ್ಲಿ ಪೌರಾಡಳಿತ ಸಚಿವರ ಗಮನವನ್ನು ಸೆಳೆಯಲು ಅವರಿಗೂ ಸಹ ಮನವಿ ಸಲ್ಲಿಸಲಾಗುವುದು, ಮುಖ್ಯಮಂತ್ರಿಗಳ ಬಳಿ ನಿಯೋಗ ತೆರಳುವ ದಿನಾಂಕವನ್ನು ಸದ್ಯದಲ್ಲೇ ನಿಗದಿಗೊಳಿಸಲಾಗುವುದು. 16 ತಿಂಗಳು ಕಾಲ ಸೇವೆ ಸಲ್ಲಿಸುವ ಅವಕಾಶಕ್ಕಾಗಿ ರಾಜ್ಯದ ಎಲ್ಲಾ ಪುರಸಭೆ, ನಗರಸಭೆ, ಪಟ್ಟಣ ಪಂಚಾಯಿತಿ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು ಇದಕ್ಕಾಗಿ ಕೈಜೋಡಿಸಬೇಕು, ನಮಗಾಗುತ್ತಿರುವ ಅನ್ಯಾಯದ ಬಗ್ಗೆ ಸರ್ಕಾರದ ಗಮನ ಸೆಳೆಯಲು ಸಹಕರಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ಬೀರೂರು ಪುರಸಭೆಯ ಅಧ್ಯಕ್ಷರಾದ ಭಾಗ್ಯಲಕ್ಷ್ಮಿ, ಕಡೂರು ಪುರಸಭೆ ಉಪಾಧ್ಯಕ್ಷ ಮಂಜುಳಾ ಚಂದ್ರು ಬೀರೂರು ಪುರಸಭೆ ಉಪಾಧ್ಯಕ್ಷ ಎನ್.ಎಂ. ನಾಗರಾಜ್, ಹಾಗೂ ಕಡೂರ್ ಮತ್ತು ಬೀರೂರು ಪುರಸಭೆಗಳ ಎಲ್ಲಾ ಸದಸ್ಯರುಗಳು ಪಕ್ಷಾತೀತವಾಗಿ ಆಗಮಿಸಿದ್ದರು.

# ಸ್ತನ್ಯಪಾನ ರೋಗನಿರೋಧಕ




**ತರೀಕೆರೆ:** ಮಗುವಿಗೆ ತಾಯಿಯ ಎದೆಹಾಲು ಜೀವಾಮೃತವಾಗಿದೆ. ಶಿಶು ಆರೋಗ್ಯಕರವಾಗಿರಬೇಕೆಂದರೆ ತಾಯಿಯ ಎದೆ ಹಾಲನ್ನು ಕಡ್ಡಾಯವಾಗಿ ಕುಡಿಸಲೇಬೇಕು. ಅಲ್ಲದೆ ಶಿಶುವಿನ ಬೆಳವಣಿಗೆ ಸ್ತನ್ಯಪಾನವು ಅತ್ಯಂತ ಅವಶ್ಯಕ ಭಾಗವಾಗಿದೆ ಎಂದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಎಂ.ಜೆ. ಚನ್ನಬಸಪ್ಪ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಮಗಳೂರು, ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ, ತರೀಕೆರೆ ಸಾರ್ವಜನಿಕ ಆಸ್ಪತ್ರೆ, ರೋಟರಿ ಕ್ಲಬ್, ಇನ್ನರ್‌ವೀಲ್ ಕ್ಲಬ್, ಮಮತಾ ಮಹಿಳಾ ಸಮಾಜ, ಭಾರತೀಯ ವೈದ್ಯಕೀಯ ಸಂಘ ಇವರ ಸಹಯೋಗದೊಂದಿಗೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ನಡೆದ 'ವಿಶ್ವ ಸ್ತನ್ಯಪಾನ ಸಪ್ತಾಹ-2025' ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ತಾಯಿ ಎದೆ ಹಾಲಿನ ಮಹತ್ವ ಹಾಗೂ ಸ್ತನ್ಯಪಾನಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಆಗಸ್ಟ್ 1 ರಿಂದ 7 ರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹವನ್ನು ಆಚರಿಸಲಾಗುತ್ತದೆ ಎಂದರು.

ಈ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಮಕ್ಕಳ ತಜ್ಞರಾದ ಡಾ. ದೀಪಕ್ ಚಿರಡೋಣಿ ಹಾಗೂ ಡಾ. ಮಂಜುನಾಥ್ ಬಿ.ಎಸ್ ರವರು ಸ್ತನ್ಯಪಾನವು ಮಗುವಿಗೆ ಅತ್ಯುತ್ತಮವಾದ ಆಹಾರವಾಗಿದ್ದು, ತಾಯಿ ಮತ್ತು ಮಗುವಿಗೆ ಅನೇಕ ಪ್ರಯೋಜನಗಳನ್ನು ಹೊಂದಿದೆ. ಇದರಿಂದ ಸೋಂಕುಗಳು ಮತ್ತು ರೋಗಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕಾರ್ಯಕ್ರಮದಲ್ಲಿ ಡಾ. ಗೀತಾ, ಡಾ. ಸಿಂಧು, ಡಾ. ಭೂಮಿಕಾ, ಪ್ರವೀಣ್ ನಾಹರ್, ರೋಟರಿ ಕ್ಲಬ್ ಅಧ್ಯಕ್ಷ ಬಿ.ಪಿ. ರವಿಕುಮಾರ್, ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಮೀರಾ ವಾಸು, ಕಾರ್ಯದರ್ಶಿ ಶ್ವೇತಾ ದಿನೇಶ್, ಮಮತಾ ಮಹಿಳಾ ಸಮಾಜದ ಅಧ್ಯಕ್ಷೆ ಮಂಜುಳಾ ವಿಜಯ್ ಕುಮಾರ್, ಕಾರ್ಯದರ್ಶಿ ರೋಹಿಣಿ ಎನ್. ಮೂರ್ತಿ, ರೋಟರಿ ಕ್ಲಬ್‌ನ ಸದಸ್ಯ ನಟರಾಜ್, ಇನ್ನರ್ ವೀಲ್ ಕ್ಲಬ್‌ನ ಸದಸ್ಯನಿಯರಾದ ಸುನಿತಾ ಕಿರಣ್, ಉಮಾದೇವಿ ದಯಾನಂದ, ಚೈತ್ರ ಚಂದ್ರು, ಪ್ರತಿಭಾ ಶಂಕರ್, ಸಾರ್ವಜನಿಕರು ಭಾಗವಹಿಸಿದ್ದರು.

# ಆರ್ಥಿಕ ಸಂಕಷ್ಟದಲ್ಲಿರುವವರಿಗೆ ಪಂಚ ಗ್ಯಾರಂಟಿ ಶಕ್ತಿ ತುಂಬಿದೆ: ಸಚಿವ ಜಾರ್ಜ್



**ಚಿಕ್ಕಮಗಳೂರು, ಆ.15:** ಜನರಲ್ಲಿ ಆರ್ಥಿಕ ಶಕ್ತಿ ತುಂಬಲು ಪಂಚ ಗ್ಯಾರಂಟಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಆರ್ಥಿಕವಾಗಿ ಸಂಕಷ್ಟದಲ್ಲಿರುವವರಿಗೆ ಈ ಯೋಜನೆ ಅನುಕೂಲವಾಗಿದೆ ಎಂದು ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಕೆ.ಜೆ.ಜಾರ್ಜ್ ಅವರು ಹೇಳಿದರು.

ಚಿಕ್ಕಮಗಳೂರು ಕ್ಷೇತ್ರದ ಬೆಳವಾಡಿ ಕೆರೆಗೆ ಇಂದು ಬಾಗಿನ ಅರ್ಪಿಸಿ ನಂತರ ಸಾರ್ವಜನಿಕರನ್ನು ಉದ್ದೇಶಿಸಿ ಅವರು ಮಾತನಾಡಿದರು. ನಮ್ಮ ಜನಸಂಖ್ಯೆಯಲ್ಲಿ ಶೇ.50 ರಷ್ಟು ಮಹಿಳೆಯರಿದ್ದು, ಅವರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಿದರೆ ಇಡೀ ಕುಟುಂಬಕ್ಕೆ ಬಲ ಬಂದಂತಾಗಲಿದೆ. ಯುವಕರಿಗೆ ಯುವನಿಧಿ, 1.60 ಕೋಟಿ ಜನರಿಗೆ 200 ಯೂನಿಟ್‌ಗಳಷ್ಟು ಉಚಿತ ವಿದ್ಯುತ್ ನೀಡುವ ವ್ಯವಸ್ಥೆ.. ಅಂತೆಯೇ ಮಹಿಳೆಯರಿಗೆ ಸಾರಿಗೆ ನಿಗಮದ ಬಸ್‌ಗಳಲ್ಲಿ ಉಚಿತ ಪ್ರಯಾಣದ ವ್ಯವಸ್ಥೆ, ಗೃಹಲಕ್ಷ್ಮೀ ಯೋಜನೆಯಡಿ ನೀಡಲಾಗುವ 2000 ರೂ.ಗಳು ಸರಾಸರಿ ಪರಿಗಣಿಸಿದರೆ ಒಂದು ಕುಟುಂಬಕ್ಕೆ 5 ಸಾವಿರ ರೂ. ದೊರೆತಂತಾಗುತ್ತಿದೆ ಎಂದರು.

ವಿದ್ಯುತ್ ಉತ್ಪಾದನೆಯನ್ನು ಹೆಚ್ಚಿಸುವ ದೃಷ್ಟಿಯಿಂದ ಸೋಲಾರ್ ವ್ಯವಸ್ಥೆಯನ್ನು ಹೆಚ್ಚು ಮಾಡಲು ಯೋಜನೆ ರೂಪಿಸಲಾಗಿದೆ. ಜೊತೆಗೆ ಶರಾವತಿ ಪಂಪ್ ಸ್ಟೋರೇಜ್ ನೀರು ಬಳಸಿ 2 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ ಕೇಂದ್ರ ಹಾಗೂ ರಾಜ್ಯದ ಅನುಮತಿ ಕೋರಲಾಗಿದೆ. ಪಾವಗಡದಲ್ಲಿ ಇನ್ನೂ 2 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ಮುಂದಾಗಿದ್ದೇವೆ. ಇದಕ್ಕೆ ರೈತರಿಂದ ಗುತ್ತಿಗೆ ಪಡೆದ ಭೂಮಿಗೆ ಸರ್ಕಾರ ಪ್ರತೀ ತಿಂಗಳು ಹಣ ಪಾವತಿಸುತ್ತಿದೆ. ಕುಸುಮ್-ಸಿ ಯೋಜನೆಯಡಿ 2500 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಸಂಬಂಧ ಖಾಸಗಿಯವರು ಬಂಡವಾಳ ಹೂಡಲಿದ್ದು, ಅವರಿಂದ 2 ಅಥವಾ 2.10 ರೂ.ಗಳಿಗೆ ಕೊಡಲು ಮುಂದೆ ಬಂದಿದ್ದಾರೆ. ಇದಕ್ಕೆ ಸುಮಾರು 10 ಸಾವಿರ ಕೋಟಿ ರೂ. ಬಂಡವಾಳ ಹೂಡುವ ಅವಶ್ಯಕತೆ ಇದೆ. ವಿದ್ಯುತ್ ಸಂಪರ್ಕ ಕಲ್ಪಿಸಲು ಸಾಧ್ಯವಾಗದ ಕಡೆಗಳಲ್ಲಿ ಕೊಳವೆ ಬಾವಿಗಳಿಗೆ ಸೋಲಾರ್ ಮೂಲಕ ವಿದ್ಯುತ್ ಅನ್ನು ಒದಗಿಸುವ ವ್ಯವಸ್ಥೆ ಮಾಡಲಾಗುತ್ತದೆ ಎಂದರು.

ಬೆಳವಾಡಿ ಸುತ್ತಮುತ್ತ ವಿದ್ಯುತ್ ಉಪ ಕೇಂದ್ರ ಸ್ಥಾಪನೆಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಅವರು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಪ್ರಾಸ್ತಾವಿಕ ಮಾತನಾಡಿ, ಕಳೆದ 25 ವರ್ಷಗಳಿಂದೀಚೆಗೆ ದೇವನೂರು ಕೆರೆ ಮಳೆಯಿಂದ ಮಾತ್ರ ಒಮ್ಮೆ ತುಂಬಿತ್ತು. ಬಹುಶಃ ಇದೊಂದು ತೆಂಗು ಹಾಗೂ ಅಡಿಕೆಯ ನಾಡಾಗಿತ್ತು. ಬರಗಾಲ ಬಂದು ಈ ಎರಡು ಕೆರೆಗೆ ನೀರಿಲ್ಲದೆ ಬರಡಾಯಿತು. ಬಹುಶಃ ಬೆಳವಾಡಿ, ದೇವನೂರಿನಂತಹ ದೊಡ್ಡ ಗ್ರಾಮಗಳಿಂದ ಜನರು ಬೆಂಗಳೂರಿಗೆ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಕಾಲದಲ್ಲಿ ನೀರು ಮತ್ತು ವಿದ್ಯುತ್ ದೊರಕಿದರೆ ಇಲ್ಲಿನ ರೈತರು ಉತ್ತಮ ಬೆಳೆ ಬೆಳೆದು ಬೆಲೆ ಸಿಕ್ಕಿದ್ದಲ್ಲಿ ಅವರೆಲ್ಲಾ ಸ್ವಾಭಿಮಾನಿಗಳಾಗಿ ಬದುಕುತ್ತಾರೆ. ಅನೇಕ ರೈತ ಮುಖಂಡರು ಈ ಕೆರೆಯನ್ನು ತುಂಬಿಸಲು ಪ್ರಯತ್ನಿಸಿದ್ದರು ಎಂದರು.

ಈ ಹಿಂದೆ ಮಲ್ಲಿಕಾರ್ಜುನ ಪ್ರಸನ್ನ ಅವರು ಸಣ್ಣ ನೀರಾವರಿ ಸಚಿವರಾದ ಬಳಿಕ ಜನಪ್ರತಿನಿಧಿಗಳಾಗಿದ್ದ ಕೆ.ಬಿ.ಮಲ್ಲಿಕಾರ್ಜುನ್, ಧರ್ಮೇಗೌಡರು, ಸಿ.ಟಿ.ರವಿ ಇವರುಗಳು ಕರಗಡ ಯೋಜನೆಗೆ ಶ್ರಮಪಟ್ಟಿದ್ದಾರೆ. ಆದರೆ ಕರಗಡ ಯೋಜನೆ ಕಳಸಾಪುರ ಮತ್ತು ಈಶ್ವರಹಳ್ಳಿ ಕೆರೆಗಳನ್ನು ಮಾತ್ರ ತುಂಬಲು ಶಕ್ತವಾಗಿದೆ. ಈ ಕೆರೆಗಳಿಗೆ ನೀರು ತುಂಬಿಸಲು ರಣಘಟ್ಟ ಯೋಜನೆ, ಭದ್ರಾ ಉಪ ಕಣಿವೆ ಯೋಜನೆ ಇದ್ದರೂ ಈ ಯೋಜನೆಗಳು ಕೈಗೂಡುವವರೆಗೆ ಇನ್ನೂ ಸಮಯ ತೆಗೆದುಕೊಳ್ಳುತ್ತದೆ. ಹೀಗಾಗಿ ನೀರಾವರಿ ಸಚಿವರಾಗಿದ್ದ ಡಿ.ಕೆ.ಶಿವಕುಮಾರ್ ಅವರನ್ನು ಜಿಲ್ಲೆಯ ಉಸ್ತುವಾರಿ ಸಚಿವ ಜಾರ್ಜ್ ನೇತೃತ್ವದಲ್ಲಿ ಭೇಟಿ ಮಾಡಿ ಮನವಿ ಮಾಡಿದ ಫಲವಾಗಿ ಎತ್ತಿನಹೊಳೆ ನೀರು ಇಲ್ಲಿಯವರೆಗೆ ನೀರು ಹರಿದು ಬಂದಿದೆ. ಆದರೆ ಮುಂದೆ ರಣಘಟ್ಟ ಯೋಜನೆಯನ್ನು ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯೆ ಗಾಯತ್ರಿ ಶಾಂತೇಗೌಡ ಮಾತನಾಡಿದರು. ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್, ರಾಜ್ಯ ಪರಿಸರ ತಜ್ಞರ ಮೌಲ್ಯ ಮಾಪನ ಸಮಿತಿಯ ಅಧ್ಯಕ್ಷ ಎ.ಎನ್. ಮಹೇಶ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಜಿ.ಪಂ. ಮಾಜಿ ಅಧ್ಯಕ್ಷೆ ರೇಖಾ ಹುಲಿಯಪ್ಪಗೌಡ, ಮುಖಂಡರಾದ ಹೆಚ್.ಪಿ.ಮಂಜೇಗೌಡ, ತಾ.ಪಂ. ಮಾಜಿ ಅಧ್ಯಕ್ಷ ಬಸವರಾಜ್, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ತಹಸೀಲ್ದಾರ್ ರೇಷ್ಮಾ ಶೆಟ್ಟಿ ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**